# ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು




## ಅಕ್ಟೋಬರ್ ೧ನೇ ವಾರ

29-09-2025 TO 04-10-2025

- ವಿದೇಶಿ ಸಾಲದ ಮೊತ್ತ ಏರಿಕೆ
- ಭಾರತದ ಮೊದಲ ಐಬಿಆರ್ ಲಸಿಕೆ ಅಭಿವೃದ್ಧಿ
- ಗುಹಾಗೆ ಗಾಂಧಿ ಸೇವಾ ಪ್ರಶಸ್ತಿ
- ನ್ಯಾನೋ ಗೊಬ್ಬರ

## ❖ ಭಾರತಕ್ಕೆ ರೋಚಕ ಜಯದ 'ತಿಲಕ'

ಸಂದರ್ಭ: ದಿಟ್ಟ ಬ್ಯಾಟಿಂಗ್ ಮಾಡಿದ ತಿಲಕ್ ವರ್ಮಾ ಭಾರತ ತಂಡದ ಮಡಿಲಿಗೆ ಏಷ್ಯಾ ಕಪ್ ಕಾಣಿಕೆ ನೀಡಿದರು.




- ದುಬೈ ಅಂತರರಾಷ್ಟ್ರೀಯ ಕ್ರೀಡಾಂಗಣದಲ್ಲಿ ರಾತ್ರಿ ನಡೆದ ಫೈನಲ್‌ನಲ್ಲಿ ಪಾಕಿಸ್ತಾನ ಎದುರು 5 ವಿಕೆಟ್‌ಗಳ ರೋಚಕ ಜಯ ಸಾಧಿಸಿದ ಭಾರತ ಪ್ರಶಸ್ತಿಗೆ ಮುತ್ತಿಕ್ಕಿತ್ತು.
- ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಸ್ಪಿನ್ನರ್ ಕುಲದೀಪ್ ಯಾದವ್ (30ಕ್ಕೆ4) ಮೋಡಿಗೆ ಪಾಕ್ ತಂಡವು 19.1 ಓವರ್‌ಗಳಲ್ಲಿ 146 ರನ್ ಗಳಿಸಿ ಆಲೌಟ್ ಅಯಿತು. ಗುರಿ ಬೆನ್ನಟ್ಟಿದ ಭಾರತ ತಂಡ ಆರಂಭದಲ್ಲಿಯೇ ಆಘಾತ ಅನುಭವಿಸಿತು. ಆದರೆ ತಿಲಕ್ ವರ್ಮಾ (ಅಜೇಯ 69) ತಂಡವನ್ನು ಗೆಲುವಿನತ್ತ ಮುನ್ನಡೆಸಿದರು. ತಂಡವು 19.4 ಓವರ್‌ಗಳಲ್ಲಿ 5ಕ್ಕೆ150 ರನ್ ಗಳಿಸಿತು.
- **ಏಷ್ಯಾ ಕಪ್ ಟೂರ್ನಿಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಉಭಯ ತಂಡಗಳು ಫೈನಲ್‌ನಲ್ಲಿ ಮುಖಾಮುಖಿಯಾಗಿದ್ದವು.** ಇದೇ ಟೂರ್ನಿಯ ಗುಂಪು ಹಂತ ಮತ್ತು ಸೂಪರ್ ಫೋರ್ ಹಂತದಲ್ಲಿಯೂ ಭಾರತ ತಂಡವು ಪಾಕ್ ಎದುರು ಜಯಿಸಿತ್ತು.

## ❖ ಯುನೆಸ್ಕೊ ಪಟ್ಟಿಗೆ 'ಛತ್ ಪೂಜೆ' ಸೇರ್ಪಡೆಗೆ ಯತ್ನ

ಸಂದರ್ಭ: 'ಯುನೆಸ್ಕೊ ಸಾಂಸ್ಕೃತಿಕ ಪರಂಪರೆ ಪಟ್ಟಿಗೆ 'ಛತ್ ಪೂಜೆ'ಯನ್ನು ಸೇರಿಸಲು ಸರ್ಕಾರವು ಪ್ರಯತ್ನ ನಡೆಸುತ್ತಿದೆ. ಇದು ಸಾಧ್ಯವಾದರೆ, ಜಗತ್ತಿನ ಮೂಲೆ ಮೂಲೆಯಲ್ಲಿರುವ ಜನರು ಹಬ್ಬದ ವೈಭವ ಹಾಗೂ ದೈವಿಕತೆಯನ್ನು ಅನುಭವಿಸಲು ಸಾಧ್ಯವಾಗುತ್ತದೆ'.

- ಕೋಲ್ಕತ್ತದ ದುರ್ಗಾ ಪೂಜೆಯನ್ನು ಕೂಡ ಇದೇ ಪಟ್ಟಿಗೆ ಸೇರ್ಪಡೆಗೊಳಿಸುವ ಪ್ರಯತ್ನ ನಡೆಯುತ್ತಿದೆ'.
- **ಛತ್ ಪವಿತ್ರ ಹಬ್ಬವನ್ನು ದೀಪಾವಳಿ ನಂತರ ಆಚರಿಸಲಾಗುತ್ತದೆ. ಈ ದೊಡ್ಡ ಹಬ್ಬವನ್ನು ಸೂರ್ಯದೇವನಿಗೆ ಸಮರ್ಪಿಸಲಾಗುತ್ತದೆ. ಸೂರ್ಯನಿಗೆ ಅರ್ಘ್ಯ ನೀಡಿ, ನಂತರ ಪೂಜಿಸಲಾಗುತ್ತದೆ.** ದೇಶದ ವಿವಿಧೆಡೆ ಮಾತ್ರವಲ್ಲದೆ ಜಗತ್ತಿನಾದ್ಯಂತ ಅದರ ವೈಭವವನ್ನು ಕಾಣಬಹುದಾಗಿದೆ'.

## ❖ ಮದ್ಯ ಮಾರಾಟ: ಕರ್ನಾಟಕ ಮೊದಲಿಗ

ಸಂದರ್ಭ: ದೇಶದಲ್ಲಿ ತಯಾರಾದ ವಿದೇಶಿ ಮದ್ಯದ (ಐಎಂಎಫ್ಎಲ್) ಮಾರಾಟದಲ್ಲಿ ದಕ್ಷಿಣದ ರಾಜ್ಯಗಳು ಹೆಚ್ಚಿನ ಪಾಲು ಹೊಂದಿವೆ. ಅದರಲ್ಲೂ ಮುಖ್ಯವಾಗಿ ಐಎಂಎಫ್ಎಲ್ ಮಾರಾಟದಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದ್ದು, ರಾಷ್ಟ್ರಮಟ್ಟದಲ್ಲಿ ಶೇಕಡ 17ರಷ್ಟು ಪಾಲು ಹೊಂದಿದೆ.

- ಮಾರ್ಚ್ 31ಕ್ಕೆ ಕೊನೆಗೊಂಡ ಆರ್ಥಿಕ ವರ್ಷದಲ್ಲಿ ದಕ್ಷಿಣದ ಆಂಧ್ರಪ್ರದೇಶ, ಕರ್ನಾಟಕ, ಕೇರಳ, ತಮಿಳುನಾಡು ಮತ್ತು ತೆಲಂಗಾಣ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿ ಹೊಂದಿದ್ದ ಒಟ್ಟು ಪಾಲು ಶೇ 58ರಷ್ಟು ಆಗಿತ್ತು.

- ದೇಶದ ಇತರ ಕಡೆಗಳಲ್ಲಿ ಆಗಿರುವ ಮಾರಾಟದ ಪ್ರಮಾಣವು ಒಟ್ಟು ಮಾರಾಟದಲ್ಲಿ ಶೇ 42ರಷ್ಟು ಇದೆ ಎಂದು ಭಾರತೀಯ ಮದ್ಯ ತಯಾರಿಕಾ ಕಂಪನಿಗಳ ಒಕ್ಕೂಟ (ಸಿಐಎಬಿಸಿ) ನೀಡಿರುವ ಅಂಕಿ–ಅಂಶಗಳು ಹೇಳುತ್ತಿವೆ.
- 2024-25ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಲೋಕಸಭಾ ಚುನಾವಣೆ ಹಾಗೂ ಕೆಲವು ರಾಜ್ಯಗಳಲ್ಲಿನ ಅಬಕಾರಿ ನೀತಿಗಳ ಕಾರಣದಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ಮಾರಾಟ ಆಗಿರಲಿಲ್ಲ. ಇದರಿಂದಾಗಿ ಇಡೀ ವರ್ಷದ ಒಟ್ಟು ಮಾರಾಟ ಕೂಡ ಕಡಿಮೆ ಆಗಿದೆ ಎಂದು ಸಿಐಎಬಿಸಿ ಮಹಾನಿರ್ದೇಶಕ ಅನಂತ ಎಸ್. ಅಯ್ಯರ್ ಹೇಳಿದ್ದಾರೆ.
- 'ರಾಜ್ಯಗಳು ವಿಧಿಸುವ ಸುಂಕ ಪ್ರತಿ ವರ್ಷವೂ ಗಣನೀಯ ಪ್ರಮಾಣದಲ್ಲಿ ಹೆಚ್ಚಾಗುತ್ತಿದೆ. ಅಬಕಾರಿ ನೀತಿಗಳೂ ಬದಲಾಗುತ್ತವೆ. ಇವು ಅಲ್ಪಾವಧಿ ಹಾಗೂ ಮಧ್ಯಮಾವಧಿಯಲ್ಲಿ ಮದ್ಯ ಮಾರಾಟದ ಮೇಲೆ ಪರಿಣಾಮ ಬೀರುತ್ತವೆ' ಎಂದು ಅಯ್ಯರ್ ಹೇಳಿದ್ದಾರೆ.
- ವಿಸ್ಕಿ, ವೊಡ್ಕಾ, ರಮ್, ಜಿನ್ ಮತ್ತು ಬ್ರ್ಯಾಂಡಿಯನ್ನು ಐಎಂಎಫ್ಎಲ್ ಹೆಸರಿನಿಂದ ಗುರುತಿಸಲಾಗುತ್ತದೆ.
- **ಕರ್ನಾಟಕದಲ್ಲಿ 2024–25ರಲ್ಲಿ ಒಟ್ಟು 6.88 ಕೋಟಿ ಕೇಸ್ ಐಎಂಎಫ್ಎಲ್ ಮಾರಾಟವಾಗಿದೆ. ಕರ್ನಾಟಕದ ನಂತರದ ಸ್ಥಾನದಲ್ಲಿರುವ ತಮಿಳುನಾಡಿನಲ್ಲಿ 6.47 ಕೋಟಿ ಕೇಸ್‌ಗಳಷ್ಟು ಐಎಂಎಫ್ಎಲ್ ಮಾರಾಟ ಆಗಿದೆ. ಉತ್ತರ ಪ್ರದೇಶದಲ್ಲಿ ಒಟ್ಟು 2.5 ಕೋಟಿ ಕೇಸ್‌ಗಳಷ್ಟು ಐಎಂಎಫ್ಎಲ್ ಮಾರಾಟ ಆಗಿದೆ.**
- 'ಉತ್ತರ ಪ್ರದೇಶ, ರಾಜಸ್ಥಾನ, ಪಶ್ಚಿಮ ಬಂಗಾಳ, ಒಡಿಶಾ ಮತ್ತು ಆಂಧ್ರಪ್ರದೇಶದಲ್ಲಿ ಮಾರಾಟದಲ್ಲಿ ಉತ್ತಮ ಬೆಳವಣಿಗೆ ಆಗುತ್ತಿದೆ. ದೆಹಲಿ ಕೂಡ ಪ್ರಮುಖ ಮಾರುಕಟ್ಟೆ. ಅಲ್ಲಿ ಮಾರಾಟ ಹೆಚ್ಚಳ ಕಾಣುವುದಕ್ಕೆ ಹೊಸ ಅಬಕಾರಿ ನೀತಿಗಾಗಿ ಕಾಯುತ್ತಿದ್ದೇವೆ' ಎಂದು ಅಯ್ಯರ್ ಹೇಳಿದ್ದಾರೆ.

## ❖ 'ಭಾರತದ ವಿದೇಶ ನೀತಿ ರಷ್ಯಾ ಸಂಬಂಧಕ್ಕೆ ಮಾನದಂಡವಲ್ಲ'

ಸಂದರ್ಭ: ಭಾರತದ ರಾಷ್ಟ್ರೀಯ ಹಿತಾಸಕ್ತಿ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಸ್ವತಂತ್ರ ವಿದೇಶಿ ನೀತಿಯನ್ನು ರಷ್ಯಾ ಗೌರವಿಸುತ್ತದೆ ಎಂದು ರಷ್ಯಾದ ವಿದೇಶಾಂಗ ಸಚಿವ ಸೆರ್ಗಿ ಲಾವ್ರೊವ್ ಅವರು ತಿಳಿಸಿದ್ದಾರೆ.

- ಅಮೆರಿಕ ಅಥವಾ ಇತರ ದೇಶದೊಂದಿಗೆ ಭಾರತ ಹೊಂದಿರುವ ಸಂಬಂಧವು ರಷ್ಯಾದೊಂದಿಗಿನ ಬಾಂಧವ್ಯಕ್ಕೆ ಮಾನದಂಡವಾಗುವುದಿಲ್ಲ. ಉಭಯ ದೇಶಗಳು ಉತ್ತಮ ಸಂಬಂಧ ಹೊಂದಿವೆ ಎಂದು ಅವರು ಹೇಳಿದ್ದಾರೆ.
- ವಿಶ್ವಸಂಸ್ಥೆಯ ಸಾಮಾನ್ಯಸಭೆ ಉದ್ದೇಶಿಸಿ ಮಾತನಾಡಿದ ಅವರು, ಭಾರತ ಮತ್ತು ರಷ್ಯಾವು ಕಾರ್ಯತಂತ್ರದ ಪಾಲುದಾರಿಕೆ ಹೊಂದಿವೆ ಎಂದರು.
- ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಡಿಸೆಂಬರ್‌ನಲ್ಲಿ ಭಾರತಕ್ಕೆ ಬರುವ ಸಾಧ್ಯತೆಯಿದೆ ಎಂದು ಅವರು ಹೇಳಿದರು.

## ❖ ಭಾರತದಲ್ಲಿ ಜನಿಸಿದ ಚೀತಾ ಪ್ರೌಢಾವಸ್ಥೆಗೆ

ಸಂದರ್ಭ: 'ಮಧ್ಯಪ್ರದೇಶದ ಕುನೊ ರಾಷ್ಟ್ರೀಯ ಉದ್ಯಾನದಲ್ಲಿ ಜನಿಸಿದ 16 ಚೀತಾ ಮರಿಗಳ ಪೈಕಿ ಒಂದು ಮರಿಯು ಪ್ರೌಢಾವಸ್ಥೆಗೆ ತಲುಪಿದೆ. ಇದರಿಂದಾಗಿ ಚೀತಾಗಳನ್ನು ಮರುಪರಿಚಯಿಸುವ ಮೂರು ವರ್ಷಗಳ ಹಿಂದಿನ ಪ್ರಯತ್ನಕ್ಕೆ ಯಶಸ್ಸು ಸಿಗುವ ವಿಶ್ವಾಸ ಮೂಡಿದೆ.

- 2023ರ ಮಾರ್ಚ್ 29ರಂದು ನಮೀಬಿಯಾದಿಂದ ತರಿಸಿದ್ದ 'ಜ್ವಾಲಾ' ಚೀತಾಕ್ಕೆ ಜನಿಸಿದ 'ಮುಖಿ' ಮರಿಯು ಪ್ರೌಢಾವಸ್ಥೆಗೆ ತಲುಪಿದೆ. ವೇಳೆಗೆ ಮರಿ ಜನಿಸಿ, 915 ದಿನಗಳು ಅಥವಾ 30 ತಿಂಗಳು ಪೂರ್ಣವಾಗಲಿದೆ. ಇದರಿಂದ ಭಾರತದಲ್ಲಿ ಚೀತಾಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಕಾಣಿಸುತ್ತಿದೆ' ಎಂದು 'ಪ್ರಾಜೆಕ್ಟ್ ಚೀತಾ' ದ ನಿರ್ದೇಶಕ ಉತ್ತಮ್ ಕುಮಾರ್ ಶರ್ಮಾ ಅವರು ತಿಳಿಸಿದ್ದಾರೆ.
- 'ಜ್ವಾಲಾ ಜನ್ಮ ನೀಡಿದ್ದ ನಾಲ್ಕು ಮರಿಗಳ ಪೈಕಿ ಮೂರು ಮರಿಗಳು ವಿಪರೀತ ತಾಪಮಾನದಿಂದಾಗಿ ಮೃತಪಟ್ಟಿದ್ದವು. ಮುಖಿ ಬದುಕುಳಿದು, ಚೆನ್ನಾಗಿ ಬೆಳೆದಿದೆ. ನಮ್ಮ ಪ್ರಯತ್ನಗಳು ಫಲವಾಗಿ ಪರಿವರ್ತನೆಯಾಗುತ್ತಿವೆ' ಎಂದು ಆಶಾವಾದ ವ್ಯಕ್ತಪಡಿಸಿದ್ದಾರೆ.
- 'ಸದ್ಯ ಭಾರತದಲ್ಲಿ 27 ಚೀತಾಗಳಿದ್ದು, 16 ಭಾರತದಲ್ಲಿಯೇ ಜನಿಸಿವೆ. ಈ ಪೈಕಿ 25 ಕುನೊದಲ್ಲಿ ಇದ್ದು, ಉಳಿದ ಮೂರು ಗಾಂಧಿ ಸಾಗರ್ ವನ್ಯಜೀವಿ ಅಭಯಾರಣ್ಯದಲ್ಲಿವೆ' ಎಂದು ಶರ್ಮಾ ಮಾಹಿತಿ ನೀಡಿದ್ದಾರೆ.

## ❖ ಜಾಗತಿಕ ಕಾರ್ಯಪಡೆ ಅಗತ್ಯ: ಜೈಶಂಕರ್'

ಸಂದರ್ಭ: ಜಗತ್ತಿಗೆ ಜಾಗತಿಕ ಕಾರ್ಯಪಡೆಯ ಅಗತ್ಯವಿದೆ ಮತ್ತು ಅನಿಶ್ಚಿತತೆಯ ನಡುವೆಯೂ ಹೊಸ ವಾಣಿಜ್ಯ ವ್ಯವಸ್ಥೆಯು ಜಾರಿಗೆ ಬರಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಹೇಳಿದರು.

- ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದ ನಡುವೆ 'ಅಬ್ಸರ್‌ವರ್ ರಿಸರ್ಚ್ ಫೌಂಡೇಶನ್' (ಒಆರ್ ಎಫ್) ಸಭೆಯಲ್ಲಿ ಮಾತನಾಡಿದ ಅವರು, 'ಅನಿಶ್ಚಿತತೆ ಮಧ್ಯೆಯೂ ವಾಣಿಜ್ಯ ವ್ಯಾಪಾರವು ತನ್ನ ಮಾರ್ಗವನ್ನು ತಾನೇ ಹುಡುಕಿಕೊಂಡು ಸಾಗುತ್ತದೆ' ಎಂದು ಆಶಾವಾದ ವ್ಯಕ್ತಪಡಿಸಿದರು.
- ಭಾರತವು ವ್ಯಾಪಾರ ಮತ್ತು ಪಾಲುದಾರಿಕೆಯನ್ನು ವಿಸ್ತರಿಸುವ ಉದ್ದೇಶದೊಂದಿಗೆ ಲ್ಯಾಟಿನ್ ಅಮೆರಿಕ ಮತ್ತು ಕೆರೀಬಿಯಾದೊಂದಿಗೆ ವ್ಯಾಪಾರದಲ್ಲಿ ತೊಡಗಿದೆ ಎಂದು ತಿಳಿಸಿದರು.
- ದೊಡ್ಡ ರಾಷ್ಟ್ರಗಳು 'ಕ್ಲೋಭೆಯ ವಾತಾವರಣ'ವನ್ನು ಎದುರಿಸುತ್ತಿದ್ದು, ಈ ಸಂದರ್ಭದಲ್ಲಿ ಸ್ವಾವಲಂಬಿಯಾ ಗಲು ಸಾಮರ್ಥ್ಯ ವೃದ್ಧಿ ಅವಶ್ಯಕ ಎಂದು ಹೇಳಿದರು.

## ❖ 'ಭಯೋತ್ಪಾದನೆಗೆ ಕುಮ್ಮಕ್ಕು ಒಪ್ಪಿಕೊಂಡ ಪಾಕಿಸ್ತಾನ'

ವಿಶ್ವಸಂಸ್ಥೆ: ಸಾಮಾನ್ಯಸಭೆಯ ಅಧಿವೇಶನದಲ್ಲಿ ಭಯೋತ್ಪಾದನೆ ವಿರುದ್ಧ ಮಾತನಾಡಿದ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಪಾಕಿಸ್ತಾನಕ್ಕೆ ಭಾರತ ತಿರುಗೇಟು ನೀಡಿದೆ.

- 'ಜೈಶಂಕರ್ ಅವರು ಪಾಕಿಸ್ತಾನದ ಹೆಸರನ್ನು ಪ್ರಸ್ತಾಪಿಸಿರಲಿಲ್ಲ. ಆದರೂ ಅವರ ಹೇಳಿಕೆಗೆ ಪ್ರತಿಕ್ರಿಯಿಸುವ ಮೂಲಕ ಪಾಕಿಸ್ತಾನವು ಗಡಿ ಭಯೋತ್ಪಾದನೆಗೆ ಕುಮ್ಮಕ್ಕು ನೀಡುತ್ತಿರುವುದನ್ನು ಒಪ್ಪಿಕೊಂಡಿದೆ' ಎಂದು ಹೇಳಿದೆ.
- 'ಪ್ರಮುಖ ಅಂತರರಾಷ್ಟ್ರೀಯ ಭಯೋತ್ಪಾದಕ ಕೃತ್ಯಗಳ ಹಿಂದೆ ಇರುವುದು ಒಂದೇ ದೇಶ. ಅದು ಭಯೋತ್ಪಾದನೆಯ ಕೇಂದ್ರ ಬಿಂದು' ಎಂದು ಜೈಶಂಕರ್ ಅವರು ಹೇಳಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ್ದ ಪಾಕಿಸ್ತಾನದ ಪ್ರತಿನಿಧಿಯೊಬ್ಬರು, 'ಭಾರತವು ದೇಶದ ವಿರುದ್ಧ ಅಪಪ್ರಚಾರ ಮಾಡುತ್ತಿದೆ' ಎಂದು ಆರೋಪಿಸಿದ್ದರು.

## ❖ ಅನುಷ್ಕಾಗೆ ಎರಡನೇ ಚಿನ್ನ

ಸಂದರ್ಭ: ಕರ್ನಾಟಕದ ಅನುಷ್ಕಾ ತೋಕೂರು ಅವರು ಇಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ಜೂನಿಯರ್ ಶೂಟಿಂಗ್ ವಿಶ್ವಕಪ್‌ನ 50 ಮೀ. ತ್ರೀ ಪೊಸಿಷನ್ಸ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದುಕೊಂಡರು. ಇದು, ಈ ಟೂರ್ನಿಯಲ್ಲಿ ಅವರಿಗೆ ಎರಡನೇ ಚಿನ್ನ. ಮೊದಲ ದಿನ 50 ಮೀ. ರೈಫಲ್ ಪ್ರೋನ್ ಸ್ಪರ್ಧೆಯಲ್ಲಿ ಅವರು ಸ್ವರ್ಣ ಜಯಿಸಿದ್ದರು.

- ಕ್ವಾಲಿಫಿಕೇಷನ್ ಸುತ್ತಿನಲ್ಲಿ 585 ಸ್ಕೋರ್‌ಗಳೊಂದಿಗೆ ಅಗ್ರಸ್ಥಾನ ಪಡೆದಿದ್ದ ಮಂಗಳೂರಿನ ಹುಡುಗಿ, ಫೈನಲ್ ಹಣಾ ಹಣಿಯಲ್ಲೂ ಲಯ ಮುಂದುವರಿಸಿ ದರು. 461 ಸ್ಕೋರ್ ಗಳಿಸಿ ಚನ್ನಕ್ಕೆ ಮುತ್ತಿಕ್ಕಿ ದರು. ಸ್ವತಂತ್ರ ತಟಸ್ಥ ಸ್ಪರ್ಧಿಗಳಾದ (ಎಎನ್‌ಎ) ಅನಸ್ತೇಷಿಯಾ ಸೊರೊಕಿನಾ (454.9) ಹಾಗೂ ಮರಿಯಾ ಕುಗ್ಲೊವಾ (444) ಕ್ರಮವಾಗಿ ಬೆಳ್ಳಿ ಹಾಗೂ ಕಂಚಿನ ಪದಕ ತಮ್ಮದಾಗಿಸಿಕೊಂಡರು.
- 18 ವರ್ಷ ವಯಸ್ಸಿನ ಅನುಷ್ಕಾ ಅವರು ಕಜಾಕಸ್ತಾನದಲ್ಲಿ ಆಗಸ್ಟ್‌ನಲ್ಲಿ ನಡೆದ ಏಷ್ಯನ್ ಶೂಟಿಂಗ್ ಚಾಂಪಿಯನ್‌ಷಿಪ್‌ನ ಜೂನಿಯರ್ ಮಹಿಳೆಯರ 50 ಮೀ. ರೈಫಲ್ ತ್ರೀ ಪೊಸಿಷನ್ಸ್ ಸ್ಪರ್ಧೆಯಲ್ಲಿ ಚಿನ್ನ ಗೆದ್ದಿದ್ದರು.
- ಅದ್ರಿಯಾನ್‌ಗೆ ಬೆಳ್ಳಿ: ಉದಯೋನ್ಮುಖ ಶೂಟರ್ ಅದ್ರಿಯಾನ್ ಕರ್ಮಾಕರ್ ಅವರು ಜೂನಿಯರ್ ಪುರುಷರ 50 ಮೀ. ರೈಫಲ್ ತ್ರೀ ಪೊಸಿಷನ್ಸ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದರು.
- ಕ್ವಾಲಿಫಿಕೇಷನ್ ಸುತ್ತಿನಲ್ಲಿ 587 ಪಾಯಿಂಟ್ಸ್ ಗಳಿಸಿ ಅಗ್ರಸ್ಥಾನ ಪಡೆದ ಅದ್ರಿಯಾನ್, ಫೈನಲ್ ಸ್ಪರ್ಧೆಯಲ್ಲಿ (454.8) ಎರಡನೇ ಸ್ಥಾನ ಪಡೆದರು. 459.9 ಪಾಯಿಂಟ್ಸ್ ಪಡೆದ ಡಿಮಿಟ್ರಿ ಪಿಮೆನೊವ್ (ಎಎನ್‌ಎ) ಚಿನ್ನದ ಪದಕ ತಮ್ಮದಾಗಿಸಿಕೊಂಡರು. 441 ಸ್ಕೋರ್‌ನೊಂದಿಗೆ ಕಮೀಲ್ ಎನ್. (ಎಎನ್‌ಎ) ಕಂಚು ಗೆದ್ದರು.

## ❖ ಏಷ್ಯನ್ ಈಜು: ಕರ್ನಾಟಕದ ಶ್ರೀಹರಿಗೆ ಬೆಳ್ಳಿ ಡಬಲ್

ಸಂದರ್ಭ: ಕರ್ನಾಟಕದ ಈಜು ತಾರೆ ಶ್ರೀಹರಿ ನಟರಾಜ್ ಅವರು ಭಾನುವಾರ 11ನೇ ಏಷ್ಯನ್ ಈಜು ಚಾಂಪಿಯನ್ ಷಿಪ್‌ನಲ್ಲಿ ಮಿಂಚು ಹರಿಸಿದರು. ಪುರುಷರ 200 ಮೀಟರ್ ಫ್ರೀಸ್ಟೈಲ್ ಮತ್ತು 50 ಮೀಟರ್ ಬ್ಯಾಕ್‌ಸ್ಟ್ರೋಕ್ ಸ್ಪರ್ಧೆಗಳಲ್ಲಿ ಅವರು ಬೆಳ್ಳಿ ಪದಕಗಳಿಗೆ ಕೊರಳೊಡ್ಡಿದರು.

- 2020ರ ಟೋಕಿಯೊ ಮತ್ತು 2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದ್ದ 24 ವರ್ಷದ ಶ್ರೀಹರಿ ಅವರು 200 ಮೀ. ಫ್ರೀಸ್ಟೈಲ್ ಫೈನಲ್‌ನಲ್ಲಿ 1 ನಿಮಿಷ 48.47 ಸೆಕೆಂಡುಗಳಲ್ಲಿ ಗುರಿ ತಲುಪಿದರು. ಚೀನಾದ 17 ವರ್ಷದ ಶು ಹೈಬೊ (1:46.83) ಚಿನ್ನದ ಪದಕ ಗೆದ್ದುಕೊಂಡರು. ಜಪಾನ್‌ನ ಹಿನಾಟಾ ಆಂಡೊ (1:48.73) ಕಂಚಿನ ಪದಕ ಗೆದ್ದರು.
- ಈ ಸ್ಪರ್ಧೆಯ ನಂತರ ನಡೆದ 50 ಮೀ. ಬ್ಯಾಕ್‌ಸ್ಟ್ರೋಕ್ ಫೈನಲ್‌ನಲ್ಲಿ 25.46 ಸೆಕೆಂಡ್‌ಗಳಲ್ಲಿ ಗುರಿ ಮುಟ್ಟಿ, ಎರಡನೇ ಪದಕಕ್ಕೆ ಮುತ್ತಿಕ್ಕಿದರು. ಚೀನಾದ ಗುಕ್ಸೈಲೈ ವಾಂಗ್ (25.11ಸೆ) ಮತ್ತು ತೈವಾನ್‌ನ ಮು ಲುನ್ ಚುವಾಂಗ್ (25.50ಸೆ) ಕ್ರಮವಾಗಿ ಚಿನ್ನ ಮತ್ತು ಕಂಚಿನ ಪದಕ ತಮ್ಮದಾಗಿಸಿಕೊಂಡರು.
- ಈ ಕೂಟದಲ್ಲಿ ಭಾರತವು ಮೂರರಿಂದ ನಾಲ್ಕು ಪದಕಗಳನ್ನು ಗೆಲ್ಲುವ ವಿಶ್ವಾಸವನ್ನು ಮುಖ್ಯ ಕೋಚ್ ನಿಹಾರ್ ಅಮೀನ್ ಅವರು ವ್ಯಕ್ತಪಡಿಸಿದ್ದರು. ಅದರ ಮರುದಿನವೇ ಶ್ರೀಹರಿ 'ಡಬಲ್' ಪದಕ ಸಾಧನೆ ಮೆರೆದಿದ್ದಾರೆ.
- ಶ್ರೀಹರಿ ಅವರು ಈ ವರ್ಷದ ಆರಂಭದಲ್ಲಿ ಜರ್ಮನಿಯಲ್ಲಿ ನಡೆದ ಎಫ್‌ಐಎಸ್‌ಯು ಬೇಸಿಗೆ ವರ್ಲ್ಡ್ ಯುನಿವರ್ಸಿಟಿ ಗೇಮ್ಸ್‌ನಲ್ಲಿ ರಾಷ್ಟ್ರೀಯ ದಾಖಲೆ ನಿರ್ಮಿಸಿದ್ದರು.
- ಅಲ್ಲದೆ, ಉತ್ತರಾಖಂಡದಲ್ಲಿ ನಡೆದ 38ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ವೈಯಕ್ತಿಕ ಮತ್ತು ರಿಲೆ ಸ್ಪರ್ಧೆಗಳಲ್ಲಿ ಒಂಬತ್ತು ಚಿನ್ನ ಮತ್ತು ಒಂದು ಬೆಳ್ಳಿ ಪದಕ ಗೆದ್ದು, ವೈಯಕ್ತಿಕ ಚಾಂಪಿಯನ್ ಆಗಿದ್ದರು.
- 200 ಮೀ. ಫ್ರೀಸ್ಟೈಲ್‌ನ ಹೀಟ್ 4ರಲ್ಲಿ ಸ್ಪರ್ಧಿಸಿದ್ದ ಕರ್ನಾಟಕದ ಅನೀಶ್ ಕುಮಾರ್ ಗೌಡ (1:52.62) ಫೈನಲ್‌ಗೆ ಅರ್ಹತೆ ಪಡೆಯಲು ವಿಫಲವಾದರು.

Dr Rajkumar's KAS Academy

## ❖ ಪಾರದರ್ಶಕತೆಗಾಗಿ ಏಕೀಕೃತ ಭೂಸ್ವಾಧೀನ ವ್ಯವಸ್ಥೆ ಜಾರಿ

ಸಂದರ್ಭ: ಭೂಸ್ವಾಧೀನ ಪ್ರಕ್ರಿಯೆ ಯಲ್ಲಿ ಪಾರದರ್ಶಕತೆ, ದಕ್ಷತೆ ಮತ್ತು ನ್ಯಾಯ ಒದಗಿಸುವುದ ಕ್ಕಾಗಿ 'ಏಕೀಕೃತ ಭೂಸ್ವಾಧೀನ ವ್ಯವಸ್ಥೆ'ಗೆ (ಯುಎಲ್‌ಎಂಎಸ್) ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಸೋಮವಾರ ಚಾಲನೆ ನೀಡಿದರು.

- ಕಂದಾಯ ಇಲಾಖೆಯ ಭೂಮಿ ತಂತ್ರಾಂಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಇ–ಸ್ವತ್ತು, ನಗರಾಭಿವೃದ್ಧಿ ಇಲಾಖೆಯ ಇ–ಆಸ್ತಿ ತಂತ್ರಾಂಶ, ಯುಎಲ್‌ಎಂಎಸ್ ಇ–ಖಾತಾ, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ 2.0 ತಂತ್ರಾಂಶ ಮತ್ತು ಕೆಜಿಐಎಸ್‌ನಂತಹ ಎಲ್ಲಾ ತಂತ್ರಾಂಶ ಗಳನ್ನು ಒಳಗೊಂಡ ವ್ಯವಸ್ಥೆಯಾಗಿದೆ.
- ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಸಚಿವ ಕೃಷ್ಣಬೈರೇಗೌಡ, 'ಈ ವ್ಯವಸ್ಥೆಯು ನೈಜ ದತ್ತಾಂಶವನ್ನು ಒದಗಿಸುತ್ತದೆ. ಅಲ್ಲದೇ, ಆರ್ಥಿಕ ಇಲಾಖೆಯ ಖಜಾನೆ–2 ತಂತ್ರಾಂಶ ದೊಂದಿಗೆ ಜೋಡಣೆ ಮಾಡಲಾಗಿದೆ. ಸಮಗ್ರ ಭೂಸ್ವಾಧೀನ ವ್ಯವಸ್ಥೆಯು ರಾಜ್ಯದಾದ್ಯಂತ ಭೂಸ್ವಾಧೀನ ಪ್ರಕ್ರಿಯೆ ಯನ್ನು ಸಮನ್ವಯಗೊಳಿಸುತ್ತದೆ. ಅಲ್ಲದೇ, ಈಗ ಕೈಗೊಳ್ಳಲಾಗುತ್ತಿರುವ ಭೂಸ್ವಾಧೀನ ಪ್ರಕ್ರಿಯೆ ಮತ್ತು ಹಿಂದೆ ನಡೆಸಿದ ಭೂಸ್ವಾಧೀನ ಪ್ರಕರಣ ಗಳಲ್ಲಿನ ಮೊಕದ್ದಮೆಗಳನ್ನು ಗುರುತಿಸುವ ಸಮಗ್ರ ಡಿಜಿಟಲ್ ವೇದಿಕೆಯೂ ಇದಾಗಿದೆ' ಎಂದರು.
- ಕಂದಾಯ, ಜಲಸಂಪನ್ಮೂಲ, ನಗರಾಭಿವೃದ್ಧಿ, ಲೋಕೋಪಯೋಗಿ, ಮೂಲಸೌಕರ್ಯ ಅಭಿವೃದ್ಧಿ ಇಲಾಖೆಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಗೃಹ ಮಂಡಳಿ, ಕೆಶಿಪ್, ಕೆ–ರೈಡ್, ಮೆಟ್ರೊ, ಕೆಐಎಡಿಬಿ ಮತ್ತಿತರ ಸಂಸ್ಥೆಗಳು ಭೂಸ್ವಾಧೀನ ಪ್ರಕ್ರಿಯೆಯಲ್ಲಿ ತೊಡಗಿರುತ್ತವೆ. ಇವುಗಳ ಭೂಸ್ವಾಧೀನದ ಸಂಪೂರ್ಣ ಮಾಹಿತಿಯು ಈ ವ್ಯವಸ್ಥೆಯಲ್ಲಿ ಸಿಗುತ್ತದೆ. ಭೂಸ್ವಾಧೀನದ ಎಲ್ಲಾ ಪ್ರಸ್ತಾವಗಳು, ಅದರ ಸ್ಥಿತಿಗತಿಯ ಬಗ್ಗೆ ನೈಜ ಸಮಯದ ಮಾಹಿತಿಯನ್ನು ಪಾಲುದಾರರು ಮತ್ತು ತೀರ್ಮಾನ ತೆಗೆದುಕೊಳ್ಳುವ ಸಂಸ್ಥೆಗಳಿಗೆ ಕ್ರೋಢೀಕೃತ ಡ್ಯಾಶ್ ಬೋರ್ಡ್ ಮೂಲಕ ಒದಗಿಸಲಾಗುತ್ತದೆ ಎಂದು ಅವರು ವಿವರಿಸಿದರು.
- ಭೂಸ್ವಾಧೀನ ಪ್ರಕರಣ ಗಳಿಗೆ ಸಂಬಂಧಿಸಿದಂತೆ ಐ–ತೀರ್ಪು ರಚನೆ, ಪರಿಹಾರ ವಿತರಣೆ ಮತ್ತು ಪುನರ್ವಸತಿ ವರೆಗಿನ ಸಂಪೂರ್ಣ ಪ್ರಕ್ರಿಯೆ ನಿರ್ವಹಿಸಲು ಈ ವ್ಯವಸ್ಥೆ ಏಕ ಮಾತ್ರ ಡಿಜಿಟಲ್ ವೇದಿಕೆಯಾಗಿ ಕಾರ್ಯ ನಿರ್ವಹಿಸುತ್ತದೆ ಎಂದು ಕೃಷ್ಣಬೈರೇಗೌಡ ಹೇಳಿದರು.
- ರಾಜ್ಯದ ಎಲ್ಲ ಜಿಲ್ಲೆಗಳು ಮತ್ತು ಅಗತ್ಯವಿರುವ ಭೂಸ್ವಾಧೀನ ಸಂಸ್ಥೆಗಳು ಹಂತ ಹಂತವಾಗಿ ಈ ತಂತ್ರಾಂಶವನ್ನು ಅಳವಡಿಸಿಕೊಳ್ಳುತ್ತವೆ. ಈ ತಂತ್ರಾಂಶವು ರಾಜ್ಯದಲ್ಲಿ ಭೂಸ್ವಾಧೀನ ಪ್ರಕ್ರಿಯೆಯ ಪ್ರಮಾಣೀಕೃತ ಮತ್ತು ಕಾನೂನುಬದ್ಧ ಅನುಸರಣಾ ವಿಧಾನವನ್ನು ಖಚಿತ ಪಡಿಸುತ್ತದೆ ಎಂದರು.

## ❖ ಭಾರತದ ಮೊದಲ ಐಬಿಆರ್ ಲಸಿಕೆ ಅಭಿವೃದ್ಧಿ

ಸಂದರ್ಭ: ಹೈದರಾಬಾದ್‌ನ ಲಸಿಕೆ ತಯಾರಿಕಾ ಕಂಪನಿ 'ಇಂಡಿಯನ್ ಇಮ್ಯುನೊಲಾಜಿಕಲ್ಸ್ ಲಿಮಿಟೆಡ್' (ಐಐಎಲ್) ಸೋಂಕಿತ ಜಾನುವಾರುಗಳ ಮೂಗು ಮತ್ತು ಗಂಟಲಿನ ಉರಿಯೂತ (ಐಬಿಆರ್) ಕಾಯಿಲೆಗೆ ಭಾರತದ ಮೊದಲ ಲಸಿಕೆ 'ಜೀನ್ ಡಿಲೀಟೆಡ್ ದಿವಾ' ಅಭಿವೃದ್ಧಿಪಡಿಸಿ ರ ಬಿಡುಗಡೆ ಮಾಡಿದೆ.

- ಈ ಲಸಿಕೆಯು ಸೋಂಕಿತ ಜಾನುವಾರುಗಳಿಂದ ಇತರ ಜಾನುವಾರುಗಳನ್ನು ರಕ್ಷಿಸುತ್ತದೆ. ಭಾರತದಲ್ಲಿ ಐಬಿಆರ್ ಸಾಂಕ್ರಾಮಿಕ ರೋಗವಾಗಿದ್ದು, ಗಾಳಿಯ ಮೂಲಕ ಹರಡುತ್ತದೆ ಮತ್ತು ಜಾನುವಾರುಗಳ ಸಂತಾನೋತ್ಪತ್ತಿ ಮೇಲೆ ಪರಿಣಾಮ ಬೀರುತ್ತದೆ. ಜಾನುವಾರುಗಳಲ್ಲಿ ಬಂಜೆತನ, ಕಡಿಮೆ ಹಾಲು ಉತ್ಪಾದನೆ, ಗರ್ಭಪಾತಕ್ಕೂ ಕಾರಣವಾಗುತ್ತದೆ.

- ಭಾರತದಲ್ಲಿ ಈವರೆಗೆ ಈ ಸೋಂಕಿಗೆ ಯಾವುದೇ ಲಸಿಕೆಯಾಗಲೀ, ಚಿಕಿತ್ಸೆಯಾಗಲೀ ಲಭ್ಯವಿರಲಿಲ್ಲ. ಸದ್ಯ ಈ ಲಸಿಕೆಯ ಅಭಿವೃದ್ಧಿಯಿಂದಾಗಿ ಲಕ್ಷಾಂತರ ರೈತರಿಗೆ ಅನುಕೂಲವಾಗಲಿದೆ.

## ❖ ಶೂಟಿಂಗ್: ಓಜಸ್ವಿ, ಹಿಮಾಂಶುಗೆ ಚಿನ್ನ

ಸಂದರ್ಭ: ಉದಯೋನ್ಮುಖ ಶೂಟರ್ ಓಜಸ್ವಿ ಠಾಕೂರ್ ಅವರು ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್‌ನ ಮಹಿಳೆಯರ 10 ಮೀಟರ್ ಏರ್ ರೈಫಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದರು. ಈ ಸ್ಪರ್ಧೆಯಲ್ಲಿ ಮೂರೂ ಪದಕಗಳನ್ನು ಗೆದ್ದು ಭಾರತ ಕ್ಲೀನ್‌ಸ್ವೀಪ್ ಮಾಡಿಕೊಂಡಿತು.

- ಕರ್ಣಿಸಿಂಗ್ ಶೂಟಿಂಗ್ ರೇಂಜ್‌ನಲ್ಲಿ ನಡೆಯುತ್ತಿರುವ ಕೂಟದಲ್ಲಿ 16 ವರ್ಷದ ಓಜಸ್ವಿ 252.7 ಅಂಕಗಳೊಂದಿಗೆ ಚಾಂಪಿಯನ್ ಆಗಿ ಹೊರಹೊಮ್ಮಿದರು. 250.2 ಅಂಕ ಗಳಿಸಿದ ಹೃದಯಶ್ರೀ ಕೊಂಡೂರ್ ಬೆಳ್ಳಿ ಗೆದ್ದರೆ, ಶಾಂಭವಿ ಕ್ಷೀರಸಾಗರ್ (229.4) ಕಂಚಿನ ಪದಕ ತಮ್ಮದಾಗಿಸಿಕೊಂಡರು.
- ಹಿಮಾಂಶುಗೆ ಚಿನ್ನ: ಪುರುಷರ 10 ಮೀ. ಏರ್ ರೈಫಲ್ ಸ್ಪರ್ಧೆಯಲ್ಲಿ ಭಾರತದ ಹಿಮಾಂಶು ಚಿನ್ನಕ್ಕೆ ಗುರಿಯಿಟ್ಟರು. 633.7 ಸ್ಕೋರ್‌ನೊಂದಿಗೆ ಅರ್ಹತಾ ಸುತ್ತಿನಲ್ಲೂ ಅಗ್ರಸ್ಥಾನ ಪಡೆದಿದ್ದ ಹಿಮಾಂಶು, ಫೈನಲ್‌ನಲ್ಲಿ (250.9) ಪಾಬಲ್ಯ ಮುಂದುವರಿಸಿದರು. ಸ್ವತಂತ್ರ ತಟಸ್ಥ ಸ್ಪರ್ಧಿ (ಎಐನ್‌ಎ) ಡಿಮಿಟ್ರಿ ಪಿಮೆನೋವ್ (249.9) ಬೆಳ್ಳಿ ಪದಕ ಗೆದ್ದರೆ, ಅಭಿನವ್ ಶಾ (228.4) ಕಂಚು ಜಯಿಸಿದರು. ನರೇನ್ ಪ್ರಣವ್ (187.0) ಐದನೇ ಸ್ಥಾನ ಪಡೆದರು.
- ಪುರುಷರ 25 ಮೀ. ರ್‍ಯಾಪಿಡ್ ಫೈರ್ ಪಿಸ್ತೂಲ್‌ನಲ್ಲಿ ಸ್ವತಂತ್ರ ತಟಸ್ಥ ಸ್ಪರ್ಧಿ ಅಲೆಕ್ಸಾಂಡರ್ ಕೊವಾಲೆವ್ ಅವರು ಭಾರತದ ಮುಕೇಶ್ ನೆಲವಲ್ಲಿ ಅವರನ್ನು ರೋಚಕ ಶೂಟ್‌ಆಫ್‌ನಲ್ಲಿ ಮಣಿಸಿ ಚಿನ್ನ ಗೆದ್ದರು.

## ❖ ಈಜು: ಶ್ರೀಹರಿಗೆ ಮತ್ತೊಂದು ಪದಕ

ಸಂದರ್ಭ: ಕರ್ನಾಟಕದ ಈಜು ತಾರೆ ಶ್ರೀಹರಿ ನಟರಾಜ್ ಅವರು 11ನೇ ಏಷ್ಯನ್ ಈಜು ಚಾಂಪಿಯನ್‌ಷಿಪ್‌ನಲ್ಲಿ ಮತ್ತೊಂದು ಪದಕ ಜಯಿಸಿದರು. ಅವರು, ಕರ್ನಾಟಕದವರೇ ಆದ ಅನೀಶ್ ಗೌಡ, ಸಜನ್ ಪ್ರಕಾಶ್ ಹಾಗೂ ಶೋನ್ ಗಂಗೂಲಿ ಜೊತೆಗೂಡಿ 4x200 ಮೀ. ಫ್ರೀಸ್ಟೈಲ್‌ನಲ್ಲಿ ಸೋಮವಾರ ಬೆಳ್ಳಿ ಪದಕ ಜಯಿಸಿದರು.

- ಅಂತಿಮ ಕ್ಷಣದಲ್ಲಿ ಶ್ರೀಹರಿ ಅವರು ತೋರಿದ ಮಿಂಚಿನ ಪ್ರದರ್ಶನದಿಂದಾಗಿ ಭಾರತ ತಂಡವು 7ನಿ., 23.38 ಸೆಕೆಂಡುಗಳಲ್ಲಿ ಗುರಿ ತಲುಪಿತು. ಮಲೇಷ್ಯಾ (7:23.43) ಕಂಚಿಗೆ ತೃಪ್ತಿಪಟ್ಟಿತು.
- ಡೈವಿಂಗ್‌ನಲ್ಲಿ ಚಾರಿತ್ರಿಕ ಕಂಚು: ಮಣಿಪುರದ ಸಾಯಿರಾಮ್ ಮತ್ತು ವಿಲ್ಸನ್ ಸಿಂಗ್ ನಿಂಗ್‌ತೌಜಮ್ ಅವರು ಪುರುಷರ 10 ಮೀಟರ್ 'ಸಿಂಕ್ರೊನೈಸ್ ಡೈವಿಂಗ್'ನಲ್ಲಿ ಚಾರಿತ್ರಿಕ ಕಂಚಿನ ಪದಕ ಗೆದ್ದರು.
- ಡೈವಿಂಗ್‌ನಲ್ಲಿ ಭಾರತದ ಸ್ಪರ್ಧಿಗಳು ಇದೇ ಮೊದಲ ಬಾರಿಗೆ ಪದಕದ ಸಾಧನೆ ಮಾಡಿದ್ದಾರೆ. ಈ ಮೂಲಕ ಮುಂದಿನ ವರ್ಷ ಜಪಾನ್‌ನಲ್ಲಿ ನಡೆಯಲಿರುವ ಏಷ್ಯನ್ ಕ್ರೀಡಾಕೂಟಕ್ಕೂ ಅರ್ಹತೆ ಪಡೆಯುವ ಹೊಸ್ತಿಲಲ್ಲಿದ್ದಾರೆ.
- ಸಾಯಿರಾಮ್ ಮತ್ತು ವಿಲ್ಸನ್ ಅವರು 300.66 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆದರು. ಚೀನಾದ ಜಾಂಗ್ಯು ಕುಯಿ ಮತ್ತು ಜಾನ್‌ಹಾಂಗ್ ಕ್ಸು (381.75) ಮತ್ತು ಮಲೇಷ್ಯಾದ ಬರ್ಟ್ರಾಂಡ್ ರೋಡಿಕ್ಟ್ ಲಿಸೆಸ್ ಮತ್ತು ಎನ್ರಿಕ್ ಎಂ. ಹೆರಾಲ್ಡ್ (329.73) ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಪದಕ ಗೆದ್ದರು.
- 1,500 ಮೀಟರ್ ಫ್ರೀಸ್ಟೈಲ್‌ನಲ್ಲಿ ಕುಶಾಗ್ರ ರಾವತ್ ಹಾಗೂ 200 ಮೀ. ಬ್ಯಾಕ್‌ಸ್ಟ್ರೋಕ್ ಸ್ಪರ್ಧೆಯಲ್ಲಿ ರಿಷಭ್ ದಾಸ್ ಅವರು ಕಂಚು ಜಯಿಸಿದರು.


Dr Rajkumar KAS Academy

## ❖ ಕೈಗಾರಿಕಾ ಉತ್ಪಾದನೆ ಏರಿಕೆ

ಸಂದರ್ಭ: ದೇಶದ ಕೈಗಾರಿಕಾ ಉತ್ಪಾದನೆಯು ಆಗಸ್ಟ್‌ನಲ್ಲಿ ಶೇ 4ರಷ್ಟು ಬೆಳವಣಿಗೆ ದಾಖಲಿಸಿದೆ ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಎನ್‌ಎಸ್‌ಒ) ತಿಳಿಸಿದೆ.

- ಗಣಿಗಾರಿಕೆ ವಲಯದ ಚಟುವಟಿಕೆ ಉತ್ತಮವಾಗಿದೆ. ಹೀಗಾಗಿ, ಕೈಗಾರಿಕಾ ಉತ್ಪಾದನೆಯು ಪ್ರಗತಿ ಕಂಡಿದೆ ಎಂದು ಅದು ತಿಳಿಸಿದೆ. ಕೈಗಾರಿಕಾ ಉತ್ಪಾದನೆಯು ಜುಲೈನಲ್ಲಿ ಶೇ 4.3ರಷ್ಟು ಬೆಳವಣಿಗೆ ಕಂಡಿತ್ತು. 2024ರ ಆಗಸ್ಟ್‌ನಲ್ಲಿ ಉತ್ಪಾದನೆಯ ಬೆಳವಣಿಗೆಯು ಹೇಳಿಕೊಳ್ಳುವಷ್ಟು ಮಟ್ಟದಲ್ಲಿ ಇರಲಿಲ್ಲ ಎಂದು ಹೇಳಿದೆ.
- ಕಳೆದ ವರ್ಷದ ಆಗಸ್ಟ್ ತಿಂಗಳಿನಲ್ಲಿ ಗಣಿಗಾರಿಕೆ ವಲಯದ ಉತ್ಪಾದನೆ ಶೇ 4.3ರಷ್ಟು ಆಗಿತ್ತು. ಅದು ಈ ಬಾರಿ ಶೇ 6ರಷ್ಟಾಗಿದೆ. ತಯಾರಿಕಾ ವಲಯದ ಬೆಳವಣಿಗೆ ಶೇ 3.8 ಮತ್ತು ವಿದ್ಯುತ್ ವಲಯದ ಪ್ರಗತಿ ಶೇ 4.1ರಷ್ಟಾಗಿದೆ.
- ಕಳೆದ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಆಗಸ್ಟ್‌ವರೆಗಿನ ಅವಧಿಯಲ್ಲಿ ಐಐಪಿ ಬೆಳವಣಿಗೆ ಶೇ 4.3ರಷ್ಟಾಗಿತ್ತು. ಈ ಬಾರಿ ಅದು ಶೇ 2.8ಕ್ಕೆ ಇಳಿದಿದೆ.
- 'ಜುಲೈ ತಿಂಗಳಿಗೆ ಹೋಲಿಸಿದರೆ ಆಗಸ್ಟ್‌ನಲ್ಲಿ ಕೈಗಾರಿಕಾ ಉತ್ಪಾದನೆ ಇಳಿಕೆ ಕಂಡಿದೆ. ಜುಲೈನಲ್ಲಿ ತಯಾರಿಕಾ ವಲಯದ ಪ್ರಗತಿ ಶೇ 6ರಷ್ಟಿತ್ತು. ಇದು ಆಗಸ್ಟ್‌ನಲ್ಲಿ ಶೇ 3.8ಕ್ಕೆ ಇಳಿದಿದೆ. ಇದೇ ಬೆಳವಣಿಗೆ ಇಳಿಕೆಗೆ ಕಾರಣ' ಎಂದು ಐಸಿಆರ್‌ಎ ಮುಖ್ಯ ಅರ್ಥಶಾಸ್ತ್ರಜ್ಞೆ ಅದಿತಿ ನಾಯರ್ ಹೇಳಿದ್ದಾರೆ.
- ಕೈಗಾರಿಕಾ ಉತ್ಪಾದನಾ ಸೂಚ್ಯಂಕ (ಐಐಪಿ) ಆಧಾರದ ಮೇಲೆ ಈ ಪ್ರಗತಿಯನ್ನು ಲೆಕ್ಕ ಹಾಕಲಾಗುತ್ತದೆ.

IAS/KAS Academy



## ❖ 'ನೀರುಹಂಚಿಕೆ: ರಾಜ್ಯದ ಹಿತಾಸಕ್ತಿ ರಕ್ಷಣೆ'

- ಮಹಾರಾಷ್ಟ್ರವು ಭೀಮಾ ನದಿಯಲ್ಲಿ ರಾಜ್ಯದ ಪಾಲನ್ನು ತಪ್ಪಿಸಲು ಹೆಚ್ಚುವರಿ ಜಲಾಶಯಗಳನ್ನು ನಿರ್ಮಿಸಿಕೊಂಡಿರುವ ವಿಚಾರದ ಕುರಿತು ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, 'ಎರಡೂ ರಾಜ್ಯಗಳ ಮಧ್ಯದ ಜಲವಿವಾದವು ಕೇಂದ್ರ ಜಲ ಆಯೋಗದ ಮುಂದೆ ಇದೆ.

## ❖ 5 ಪಾಲಿಕೆಗಳಲ್ಲಿ 368 ವಾರ್ಡ್

ಸಂದರ್ಭ: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳ ವಾರ್ಡ್‌ಗಳನ್ನು ಮರು ವಿಂಗಡಣೆ ಮಾಡಿ, ಗಡಿ ನಿಗದಿಪಡಿಸಿ ನಗರಾಭಿವೃದ್ಧಿ ಇಲಾಖೆ ಕರಡು ಅಧಿಸೂಚನೆ ಹೊರಡಿಸಿದೆ. ಐದು ಪಾಲಿಕೆಗಳ ವ್ಯಾಪ್ತಿಯಲ್ಲಿ ಒಟ್ಟು 368 ವಾರ್ಡ್‌ಗಳಿವೆ.

- ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ–2024 (ಜಿಬಿಜಿಎ) ಅಡಿಯಲ್ಲಿ ಸೆ.2ರಂದು ಜಿಬಿಎ ರಚಿಸಲಾಗಿತ್ತು. ಜಿಬಿಎ ವ್ಯಾಪ್ತಿಯಲ್ಲಿ ಹಿಂದಿನ ಬಿಬಿಎಂಪಿ ವ್ಯಾಪ್ತಿಯಲ್ಲಿದ್ದ 198 ವಾರ್ಡ್‌ಗಳನ್ನು ಹಂಚಿಕೆ ಮಾಡಿ 5 ನಗರ ಪಾಲಿಕೆಗಳನ್ನು ರಚಿಸಿ, ಗಡಿ ನಿಗದಿ ಮಾಡಿ ಅಂದೇ ಅಧಿಸೂಚನೆ ಹೊರಡಿಸಲಾಗಿತ್ತು.
- ಐದು ನಗರ ಪಾಲಿಕೆಗಳ ವಾರ್ಡ್ ಗಳನ್ನು ಮರು ವಿಂಗಡಿಸಲು, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ನೇತೃತ್ವದಲ್ಲಿ 'ವಾರ್ಡ್‌ಗಳ ಪುನರ್ ವಿಂಗಡಣಾ ಆಯೋಗ'ವನ್ನು ರಚಿಸಿ, ಸೆಪ್ಟೆಂಬರ್ 23ರಂದು ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿತ್ತು. ಆಯೋಗ ಒಂದು ವಾರ ತಡವಾಗಿ, ಸೆ. 30ರಂದು ವರದಿ ಸಲ್ಲಿಸಿದೆ.
- ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ–2024ರ ಪ್ರಕರಣ 29ರ ಉಪ ಪ್ರಕರಣ (1) ಮತ್ತು (3)ರ ಅನ್ವಯ ವಾರ್ಡ್‌ಗಳ ಪುನರ್ ವಿಂಗಡಣೆ ಮಾಡಿ, ಸಲ್ಲಿಸಲಾಗಿದ್ದ ವಾರ್ಡ್ ಮರು ವಿಂಗಡಣೆಯ ವರದಿಯನ್ನು ಸರ್ಕಾರ ಒಪ್ಪಿದೆ. ಜಿಬಿಜಿಎ ಕಾಯ್ದೆಯ 29ರಲ್ಲಿ ಪ್ರದತ್ತವಾದ ಅಧಿಕಾರದನ್ವಯ 2011ರ ಜನಗಣತಿಯ ಆಧಾರದಲ್ಲಿ, ಗ್ರೇಟರ್ ಬೆಂಗಳೂರು ಪ್ರದೇಶದ ಐದು ನಗರ ಪಾಲಿಕೆಗಳಲ್ಲಿ ವಾರ್ಡ್‌ವಾರು ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಕರಡು ಅಧಿಸೂಚನೆ ಹೊರಡಿಸಿದೆ.
- ನಿಗದಿತ ಅವಧಿಯಲ್ಲಿ ಸ್ವೀಕೃತವಾದ ಆಕ್ಷೇಪಣೆ/ ಸಲಹೆಗಳನ್ನು ಪರಿಶೀಲಿಸಿ, ನಗರ ಪಾಲಿಕೆಗಳ ವಾರ್ಡ್ ವಾರು ಕ್ಷೇತ್ರ ಪುನರ್ ವಿಂಗಡಣೆಯನ್ನು ಅಂತಿಮಗೊಳಿಸಲು ಕ್ರಮ ಕೈಗೊಳ್ಳಲಾಗು ತ್ತದೆ ಎಂದು ತಿಳಿಸಲಾಗಿದೆ.

### ಕಲಾಸಿಪಾಳ್ಯಕ್ಕೆ ಡಿವಿಜಿ, ಜಯನಗರಕ್ಕೆ ಅಬ್ದುಲ್ ಕಲಾಂ

- ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಕಲಾಸಿಪಾಳ್ಯದ ಪ್ರದೇಶಗಳನ್ನು ಒಳಗೊಂಡಿರುವ ವಾರ್ಡ್‌ಗೆ ಸಾಹಿತಿ ಡಿ.ವಿ. ಗುಂಡಪ್ಪ ಅವರ ಹೆಸರಿಡಲಾಗಿದೆ. ದಕ್ಷಿಣ ನಗರ ಪಾಲಿಕೆಯ ಜಯನಗರ ಟಿ ಬ್ಲಾಕ್ ಪ್ರದೇಶಗಳ ವಾರ್ಡ್‌ಗೆ ಮಾಜಿ ರಾಷ್ಟ್ರಪತಿ ಎ.ಪಿ.ಜೆ. ಅಬ್ದುಲ್ ಕಲಾಂ, ಶಿಕ್ಷಣ ಸಚಿವರಾಗಿದ್ದ ಅಬ್ದುಲ್ ಕಲಾಂ ಆಜಾದ್ ಅವರ ಹೆಸರನ್ನು ಕುಮಾರಸ್ವಾಮಿ ಲೇಔಟ್ 2ನೇ ಹಂತದ ಪ್ರದೇಶಗಳನ್ನು ಒಳಗೊಂಡಿರುವ ವಾರ್ಡ್‌ಗೆ ಇಡಲಾಗಿದೆ.
- ವಿಶೇಷ ವ್ಯಕ್ತಿಗಳು ಹಾಗೂ ಸಾಧಕರ ಹೆಸರು ಪಶ್ಚಿಮ ನಗರ ಪಾಲಿಕೆಯ ವಾರ್ಡ್‌ಗಳಲ್ಲಿ ಹೆಚ್ಚಾಗಿದೆ. ದಕ್ಷಿಣ ನಗರ ಪಾಲಿಕೆ ಈ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದರೆ, ಕೇಂದ್ರ, ಉತ್ತರ, ಪೂರ್ವ ನಗರ ಪಾಲಿಕೆಗಳು ನಂತರದ ಸ್ಥಾನದಲ್ಲಿವೆ.
- ಪಶ್ಚಿಮ ನಗರ ಪಾಲಿಕೆಯಲ್ಲಿ ಕಾಮಾಕ್ಷಿ ಪಾಳ್ಯ ಪ್ರದೇಶ, ಕೆಂಪಾಪುರ ಅಗ್ರಹಾರ, ಮಾಗಡಿ ರಸ್ತೆ ಕೆಎಚ್‌ಬಿ ಕಾಲೊನಿ ಪ್ರದೇಶಗಳನ್ನು ಒಳಗೊಂಡಿರುವ ವಾರ್ಡ್‌ಗಳಿಗೆ ಕ್ರಮವಾಗಿ ಸ್ವಾತಂತ್ರ್ಯ ಹೋರಾಟಗಾರರಾದ 'ಮಂಗಲ್ ಪಾಂಡೆ', 'ಸಂಗೊಳ್ಳಿ ರಾಯಣ್ಣ', 'ಝಾನ್ಸಿ ರಾಣಿ' ಎಂದು ಹೆಸರಿಡಲಾಗಿದೆ.

Dr. Rajkumar IAS/KAS Academy

- ಶಂಕರನಗರ ವ್ಯಾಪ್ತಿಯ ವಾರ್ಡ್‌ಗೆ ಮೈಸೂರಿನ ಮಹಾರಾಜರಾದ 'ನಾಲ್ವಡಿ ಕೃಷ್ಣರಾಜ ಒಡೆಯರ್', ಬಾಪೂಜಿನಗರ ಪ್ರದೇಶದ ವಾರ್ಡ್‌ಗೆ ವಿಜಯನಗರದ ಅರಸ 'ಕೃಷ್ಣದೇವರಾಯ', ಕಂಠೀರವ ಸ್ಟುಡಿಯೊ ವ್ಯಾಪ್ತಿಯ ವಾರ್ಡ್‌ಗೆ ನಟ 'ಡಾ. ಪುನೀತ್ ರಾಜ್‌ಕುಮಾರ್:, ದಾಸರಹಳ್ಳಿ–ರಾಜಗೋಪಾಲ ನಗರ ವ್ಯಾಪ್ತಿಯ ವಾರ್ಡ್‌ಗೆ ರಾಜಕಾರಣಿ ಶಾಂತವೇರಿ ಗೋಪಾಲಗೌಡ, ಪೀಣ್ಯ ಅಂದ್ರುಹಳ್ಳಿ ವ್ಯಾಪ್ತಿಯ ವಾರ್ಡ್‌ಗೆ 'ನಾಡಪ್ರಭು ಕೆಂಪೇಗೌಡ ನಗರ', ನಂದಿನಿ ಲೇಔಟ್ ಪ್ರದೇಶದ ವ್ಯಾಪ್ತಿಯ ವಾರ್ಡ್‌ಗೆ 'ಕಿತ್ತೂರು ರಾಣಿ ಚನ್ನಮ್ಮ' ಎಂದು ಹೆಸರಿಸಲಾಗಿದೆ.
- ಲಗ್ಗೆರೆ ಪ್ರದೇಶದ ವಾರ್ಡ್‌ಗೆ 'ಫ್ರೀಡಂ ಫೈಟರ್ ವಾರ್ಡ್' ಎಂದು ಹೆಸರಿಡಲಾಗಿದ್ದರೆ, ರಾಜಾಜಿನಗರ 4ನೇ ಎಂ. ಬ್ಲಾಕ್ ಪ್ರದೇಶದ ವಾರ್ಡ್‌ಗೆ ಜ್ಞಾನಪೀಠ ಪುರಸ್ಕೃತ ದ.ರಾ. ಬೇಂದ್ರೆ, ರಾಜಾಜಿನಗರ 6ನೇ ಬ್ಲಾಕ್‌ಗೆ 'ಡಾ. ರಾಜ್‌ಕುಮಾರ್' ಹಾಗೂ ಹೊಸಕೆರೆಹಳ್ಳಿ ಬಡಾವಣೆ, ಬನಶಂಕರಿ 3ನೇ ಹಂತದ ಪ್ರದೇಶಗಳ ವಾರ್ಡ್‌ಗೆ 'ಸ್ವಾಮಿ ವಿವೇಕಾನಂದ' ಎಂದು ಹೆಸರಿಡಲಾಗಿದೆ.

**ವಾರ್ಡ್‌ಗಳಿಗೆ ಪ್ರಮುಖರ ಹೆಸರು**

- ದಕ್ಷಿಣ ನಗರ ಪಾಲಿಕೆಯಲ್ಲಿ ವಾರ್ಡ್‌ಗಳಲ್ಲಿ ಚಿಕ್ಕಲಸಂದ್ರ ಪ್ರದೇಶಕ್ಕೆ 'ಸಾರ್ವಭೌಮನಗರ', ಕೋರಮಂಗಲ 6ನೇ ಬ್ಲಾಕ್ ಸಾಮಾಜಿಕ ಹೋರಾಟಗಾರರಾದ 'ಅನಿಬೆಸೆಂಟ್', ಬಿಟಿಎಂ ಲೇಔಟ್ 1ನೇ ಹಂತಕ್ಕೆ 'ವಿಶ್ವಮಾನವ ಕುವೆಂಪು' ಬೊಮ್ಮನಹಳ್ಳಿಯ ಕೆ.ಆರ್. ಲೇಔಟ್‌ಗೆ 'ಕೆಂಗಲ್ ಹನುಮಂತಯ್ಯ' ಎಂದು ಹೆಸರಿಡಲಾಗಿದೆ.
- ಕೇಂದ್ರ ನಗರ ಪಾಲಿಕೆಯ ವ್ಯಾಪ್ತಿಯ ವಾರ್ಡ್‌ಗಳಿಗೆ ಇಟ್ಟಿಗೆ ಆಂಜನಪ್ಪ ಲೇನ್, ಚೌಡಪ್ಪ ರಸ್ತೆಗೆ 'ಐಡಿಪಿ ಸಾಲಪ್ಪ', ಮಂಜುನಾಥ ನಗರ ಬಿ. ಬ್ಲಾಕ್, ಗಾಂಧಿನಗರ ಪ್ರದೇಶಕ್ಕೆ 'ಸುಭಾಶ್ಚಂದ್ರ ಬೋಸ್' ಎಂದು ನಾಮಕರಣ ಮಾಡಲಾಗಿದೆ.
- ಉತ್ತರ ನಗರ ಪಾಲಿಕೆಯಲ್ಲಿ ಹಿದಾಯತ್ ನಗರಕ್ಕೆ 'ಸಮಾಧಾನ ನಗರ', ಎಚ್‌ಬಿಆರ್ ಲೇಔಟ್ 5ನೇ ಬ್ಲಾಕ್‌ಗೆ ಶಿಕ್ಷಣ ತಜ್ಞೆ 'ಅರುಣಾ ಆಸಿಫ್ ಅಲಿ', ದೇವರಜೀವನಹಳ್ಳಿಗೆ 'ದೊಡ್ಡಣ್ಣನಗರ' ಎಂದು ಹೆಸರಿಸಲಾಗಿದೆ.
- ಪೂರ್ವ ನಗರ ಪಾಲಿಕೆಯಲ್ಲಿ ಕೊಟ್ಟೂರು–ದರ್ಗಾ ಮೊಹಲ್ಲಾಗೆ ಕವಿ 'ಕೆ.ಎಸ್. ನಿಸಾರ್ ಅಹಮದ್', ಕಗ್ಗದಾಸಪುರ ಮುಖ್ಯರಸ್ತೆಯಲ್ಲಿರುವ ವಿಜ್ಞಾನ ನಗರಕ್ಕೆ 'ತಲಕಾವೇರಿ' ಎಂದು ನಾಮಕರಣ ಮಾಡಲಾಗಿದೆ.

## ❖ ಶಿಲಾಯುಗ ಕಾಲದ ಅವಶೇಷ ಪತ್ತೆ

ಸಂದರ್ಭ: ತಾಲ್ಲೂಕಿನ ಮೀನಕೆರೆ ಗ್ರಾಮದಲ್ಲಿ ಶಿಲಾಯುಗ ಕಾಲದ ಆದಿಮಾನವರು ಬಳಸಿದ ಶಿಲಾ ಉಪಕರಣಗಳು ಹಾಗೂ ನವ ಶಿಲಾಯುಗ ಕಾಲದ ಉಜ್ಜಿ ನಯಗೊಳಿಸಿದ ಕೈಗೊಡಲಿ, ಮಡಿಕೆ ಚೂರುಗಳು, ಬೃಹತ್ ಕುಟ್ಟು ಚಿತ್ರಗಳು ಪತ್ತೆಯಾಗಿವೆ.

- ಈ ಸ್ಥಳ ಹಗರಿ ನದಿ ದಂಡೆಯ ಮೇಲಿದ್ದು, ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲ್ಲೂಕಿನ ಅಂಚಿನಲ್ಲಿದೆ. ವಿಜಯನಗರ ತಿರುಗಾಟ ಸಂಶೋಧನಾ ತಂಡ ಈ ಶೋಧ ನಡೆಸಿದೆ.

Dr. Rajkumar IAS/KAS Academy

- **ಗೂಳಿ, ಹಸು ಕುಟ್ಟುಚಿತ್ರ**: ಮೀನಕೆರೆ ಗ್ರಾಮದ ನೈರುತ್ಯ ಭಾಗಕ್ಕಿರುವ ಕೆಂಗಮಲೆಯಪ್ಪನವರ ಹೊಲದಲ್ಲಿ ನವಶಿಲಾಯುಗ ಕಾಲಕ್ಕೆ ಸೇರಿದ (ಕ್ರಿ. ಪೂ. 3,000ಕ್ಕೆ ಹಿಂದೆ) ಹುಟ್ಟು ಕಲ್ಲುಬಂಡೆ ಯನ್ನು ಚಪ್ಪಟೆಯಾಕಾರ ಮಾಡಿ ಆ ಕಲ್ಲುಬಂಡೆಗೆ ಕುಟ್ಟಿ ಬೃಹತ್ ಗೂಳಿ ಮತ್ತು ಅದರ ಬಳಿಯಲ್ಲಿಯ ಗುಂಡು ಕಲ್ಲಿಗೆ ಕುಟ್ಟಿ ಹಸುವಿನ ಚಿತ್ರವನ್ನು ಬಿಡಿಸಿದ್ದನ್ನು ಮೀನಕೆರೆ ಗ್ರಾಮದ ಸಂಶೋಧಕ ಕಲಂದರ್ ಗಮನಿಸಿದ್ದರು. ಅವರ ಸಹಕಾರದಿಂದ ವಿಜಯನಗರ ತಂಡ ಸ್ಥಳಕ್ಕೆ ಭೇಟಿ ನೀಡಿದಾಗ ಇತಿಹಾಸದ ಪುಟಗಳು ಮತ್ತಷ್ಟು ತೆರೆದುಕೊಂಡವು ಎಂದು ತಂಡದ ಸದಸ್ಯರೂ ಆಗಿರುವ ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ಗೋವಿಂದ, ದೃಶ್ಯಕಲಾ ವಿಭಾಗದ ಪ್ರೊ.ಕೃಷ್ಣೇಗೌಡ ಹೇಳಿದರು.
- **ಮಾನವಾಕೃತಿ ಕಲ್ಲು**: ಮೀನಕೆರೆ ಗ್ರಾಮದ ವಾಯುವ್ಯ ದಿಕ್ಕಿಗೆ ಇರುವ ಕುಮತಿ ಗ್ರಾಮದಲ್ಲಿ ಬೃಹತ್ ಗಾತ್ರದ ಮಾನವಾಕೃತಿ ಕಲ್ಲುಗಳಿವೆ. ಅವು ಈಗಾಗಲೇ ಬೆಳಕಿಗೆ ಬಂದಿವೆ.
- 'ಇವುಗಳಿಂದ ಶಿಲಾಯುಗ ಕಾಲದ ಆದಿಮಾನವನ ಸಂಸ್ಕೃತಿ ತಿಳಿಯುವ ಯತ್ನಿಸಬಹುದು. ಇಲ್ಲಿ ಏಳು ಕಲ್ಲುಗಳಿದ್ದವು, ಎರಡು ಉಳಿದಿವೆ. ಸಂರಕ್ಷಣೆ ಅಗತ್ಯ ಇದೆ' ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರೊ.ಎಚ್. ತಿಪ್ಪೇಸ್ವಾಮಿ ಹೇಳಿದರು.

### 3 ಅಡಿ ಎತ್ತರದ ಗೂಳಿ ಚಿತ್ರ

- ಕುಟ್ಟಿ ರಚಿಸಲಾದ ಗೂಳಿ ಚಿತ್ರವು 3 ಅಡಿ ಎತ್ತರ 3 ಅಡಿ ಅಗಲವಿದೆ. ಕೊಂಬುಗಳು ಬಾಗಿದಂತಿವೆ. ಮುಂದಿನ ಎರಡು ಕಾಲು ನೆಟ್ಟಗೆ ನಿಂತಂತಿವೆ. ಹಿಂದಿನ ಕಾಲುಗಳು ಮಡಚಿದಂತೆ ಕಾಣಿಸುತ್ತವೆ. ಗೂಳಿಯು ಎದುರಿನ ಪ್ರಾಣಿಯ ಜೊತೆಗೆ ಕಾದಾಟ ಮಾಡುತ್ತಿರುವಂತೆ ಇಲ್ಲವೇ ಹೌಹಾರಿದಂತೆ ಕಾಣಿಸುತ್ತದೆ. ಗುಂಡುಕಲ್ಲನ್ನು ಚಪ್ಪಟೆಯಾಕಾರದಲ್ಲಿ ಮಾಡಿಕೊಂಡು ಗೂಳಿ ಚಿತ್ರವನ್ನು ಕುಟ್ಟಿರಬೇಕು ಎಂದು ಅಂದಾಜಿಸಲಾಗಿದೆ.

## ❖ ಘಟಕಕ್ಕೆ ಸಾಲ: ನಿಯಮ ಸಡಿಲ

ಸಂದರ್ಭ: ಚಿನ್ನವನ್ನು ಕಚ್ಚಾ ವಸ್ತುವನ್ನಾಗಿ ಬಳಕೆ ಮಾಡುವ ತಯಾರಿಕಾ ಘಟಕಗಳಿಗೆ ಅಗತ್ಯವನ್ನು ಆಧರಿಸಿದ ಕಾರ್ಯಾಚರಣೆ ಬಂಡವಾಳ ಸಾಲ ನೀಡಲು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ವಾಣಿಜ್ಯ ಬ್ಯಾಂಕ್‌ಗಳಿಗೆ ಅವಕಾಶ ನೀಡಿದೆ. ಈ ಸೌಲಭ್ಯವು ಇದುವರೆಗೆ ಜುವೆಲ್ಲರಿಗಳಿಗೆ ಮಾತ್ರ ಲಭ್ಯವಿತ್ತು.

- ಚಿನ್ನ ಅಥವಾ ಬೆಳ್ಳಿಯನ್ನು ಯಾವುದೇ ಸ್ವರೂಪದಲ್ಲಿ ಖರೀದಿಸುವ ಉದ್ದೇಶಕ್ಕೆ ಸಾಲ ಕೊಡಲು ಬ್ಯಾಂಕ್‌ಗಳಿಗೆ ಸಾಮಾನ್ಯ ಸಂದರ್ಭಗಳಲ್ಲಿ ಅಧಿಕಾರ ಇರುವುದಿಲ್ಲ. ಕಚ್ಚಾ ಚಿನ್ನ, ಬೆಳ್ಳಿಯನ್ನು ಅಡಮಾನವಾಗಿ ಇರಿಸಿಕೊಂಡು ಸಾಲ ಕೊಡಲು ಬ್ಯಾಂಕ್‌ಗಳಿಗೆ ಅವಕಾಶ ಇಲ್ಲ.
- ಆದರೆ ಕಾರ್ಯಾಚರಣೆ ಬಂಡವಾಳ ಸಾಲವನ್ನು ಜುವೆಲ್ಲರಿಗಳಿಗೆ ನೀಡಲು ಬ್ಯಾಂಕ್‌ಗಳಿಗೆ ಅನುವು ಮಾಡಿಕೊಡಲಾಗಿದೆ.
- ಕೆಲವು ನಿರ್ದೇಶನ ಗಳನ್ನು ಹೊರಡಿಸಿರುವ ಆರ್‌ಬಿಐ, ಜುವೆಲ್ಲರಿಗಳಿಗೆ ಕಾರ್ಯಾಚರಣೆ ಬಂಡವಾಳದ ರೂಪದಲ್ಲಿ ಸಾಲ ನೀಡಲು ಬ್ಯಾಂಕ್‌ಗಳಿಗೆ ಇರುವ ಅವಕಾಶವನ್ನು ಇತರ ತಯಾರಿಕಾ ಘಟಕಗಳಿಗೂ ಅನ್ವಯಿಸಿ ವಿಸ್ತರಣೆ ಮಾಡಿದೆ.
- ತಯಾರಿಕಾ ಚಟುವಟಿಕೆ ಅಥವಾ ಕೈಗಾರಿಕಾ ಸಂಸ್ಕರಣಾ ಚಟುವಟಿಕೆಗಳಲ್ಲಿ ಚಿನ್ನವನ್ನು ಕಚ್ಚಾ ವಸ್ತುವನ್ನಾಗಿ ಬಳಕೆ ಮಾಡುವ ಇತರರಿಗೂ ಕಾರ್ಯಾಚರಣೆ ಬಂಡವಾಳ ಸಾಲವನ್ನು ನೀಡಲು ಬ್ಯಾಂಕ್‌ಗಳಿಗೆ ಅನುಮತಿ ನೀಡಿದೆ.
- ಚಿನ್ನ ಅಥವಾ ಬೆಳ್ಳಿಯನ್ನು ಕಚ್ಚಾ ವಸ್ತುವನ್ನಾಗಿ ಬಳಕೆ ಮಾಡುವ ಅಥವಾ ತಯಾರಿಕಾ ಚಟುವಟಿಕೆಯಲ್ಲಿ ಇವುಗಳನ್ನು ಒಂದು ಅಗತ್ಯ ವಸ್ತುವನ್ನಾಗಿ ಬಳಕೆ ಮಾಡುವವರಿಗೆ ವಾಣಿಜ್ಯ ಬ್ಯಾಂಕ್‌ಗಳು ಹಾಗೂ 3ನೇ ಹಂತದ ಅಥವಾ 4ನೇ ಹಂತದ ನಗರ ಸಹಕಾರ ಬ್ಯಾಂಕ್‌ಗಳು ಕಾರ್ಯಾಚರಣೆ ಬಂಡವಾಳಕ್ಕೆ ಸಾಲ ನೀಡಬಹುದು ಎಂದು ಆರ್‌ಬಿಐ ಸ್ಪಷ್ಟಪಡಿಸಿದೆ.

## ❖ ವಿದೇಶಿ ಸಾಲದ ಮೊತ್ತ ಏರಿಕೆ

ಸಂದರ್ಭ: ಜೂನ್ ಅಂತ್ಯದ ವೇಳೆಗೆ ಭಾರತವು ವಿದೇಶಗಳಿಂದ ಪಡೆದ ಸಾಲಗಳ ಮೊತ್ತವು 747.2 ಬಿಲಿಯನ್ ಅಮೆರಿಕನ್ ಡಾಲರ್‌ಗೆ (ಅಂದಾಜು ₹66.36 ಲಕ್ಷ ಕೋಟಿ) ಏರಿಕೆ ಆಗಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಬಿಡುಗಡೆ ಮಾಡಿರುವ ಅಂಕಿ–ಅಂಶಗಳು ಹೇಳಿವೆ.

- 2025ರ ಮಾರ್ಚ್ ಅಂತ್ಯಕ್ಕೆ ಭಾರತವು ವಿವಿಧ ದೇಶಗಳಿಂದ ಪಡೆದಿದ್ದ ಸಾಲದ ಮೊತ್ತಕ್ಕೆ ಹೋಲಿಸಿದರೆ ಇದು 11.2 ಬಿಲಿಯನ್ ಡಾಲರ್‌ನಷ್ಟು (ಅಂದಾಜು ₹99 ಸಾವಿರ ಕೋಟಿ) ಹೆಚ್ಚು.
- ಆದರೆ ದೇಶದ ಸಾಲವನ್ನು ದೇಶದ ಒಟ್ಟು ಜಿಡಿಪಿಯ ಗಾತ್ರದ ಜೊತೆ ಹೋಲಿಸಿದರೆ ಸಾಲದ ಪ್ರಮಾಣವು ಕಡಿಮೆ ಆಗಿರುವುದು ಕಾಣುತ್ತದೆ. ಜೂನ್ ಅಂತ್ಯಕ್ಕೆ ವಿದೇಶಿ ಸಾಲ ಮತ್ತು ಜಿಡಿಪಿ ಅನುಪಾತವು ಶೇ 18.9ಕ್ಕೆ ಇಳಿಕೆ ಆಗಿದೆ. ಇದು ಮಾರ್ಚ್‌ನಲ್ಲಿ ಶೇ 19.1ರಷ್ಟು ಇತ್ತು.

## ❖ ದಿಮ್ಮಿಗಳ ಮೇಲೆ ಶೇ 10ರಷ್ಟು ಸುಂಕ

ಸಂದರ್ಭ: ಅಮೆರಿಕ ಆಮದು ಮಾಡಿಕೊಳ್ಳುವ ಮರ ಮತ್ತು ಮರದ ದಿಮ್ಮಿಗಳ ಮೇಲೆ ಶೇ 10ರಷ್ಟು, ಅಡುಗೆ ಮನೆ ಹಾಗೂ ಸ್ನಾನಗೃಹದ ಉಪಕರಣಗಳು, ಸೋಫಾಸೆಟ್ ಸೇರಿದಂತೆ ಪೀಠೋಪಕರಣಗಳ ಮೇಲೆ ಶೇ 25ರಷ್ಟು ಸುಂಕ ವಿಧಿಸುವ ಆದೇಶಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹಿಹಾಕಿದ್ದಾರೆ.

- ಈ ನೂತನ ಸುಂಕಗಳು ಅಕ್ಟೋಬರ್ 14ರಿಂದ ಜಾರಿಗೆ ಬರಲಿವೆ. ಪೇಟೆಂಟ್ ಪಡೆದ ಔಷಧ ಮತ್ತು ಭಾರಿ ಟ್ರಕ್‌ಗಳ ಆಮದು ಮೇಲೆ ಹೊಸ ಸುಂಕಗಳನ್ನು ವಿಧಿಸಿ ಕಳೆದ ವಾರ ಆದೇಶಿಸಲಾಗಿತ್ತು. ಈ ಸುಂಕಗಳು ಅಕ್ಟೋಬರ್ 1ರಿಂದಲೇ ಜಾರಿಗೆ ಬರಲಿವೆ.
- ಅಮೆರಿಕವು ವಿವಿಧ ದೇಶಗಳಿಂದ ಆಮದು ಮಾಡಿಕೊಳ್ಳುವ ಸರಕುಗಳಿಗೆ ಸಂಬಂಧಿಸಿ ಜನವರಿ 1ರ ಒಳಗಾಗಿ ಒಪ್ಪಂದ ಮಾಡಿಕೊಳ್ಳಬೇಕು. ತಪ್ಪಿದಲ್ಲಿ, ಸೋಫಾ ಸೇರಿ ವಿವಿಧ ಪೀಠೋಪಕರಣಗಳ ಮೇಲಿನ ಸುಂಕವು ಶೇ 30ಕ್ಕೆ ಹೆಚ್ಚಿಸಲಾಗು ವುದು ಹಾಗೂ ಅಡುಗೆ ಮನೆ ಉಪಕರಣಗಳ ಮೇಲಿನ ಸುಂಕವನ್ನು ಶೇ50ಕ್ಕೆ ಹೆಚ್ಚಿಸಲಾಗುವುದು ಎಂದು ಆದೇಶದಲ್ಲಿ ವಿವರಿಸಲಾಗಿದೆ.
- ಮರದ ಉತ್ಪನ್ನಗಳ ಆಮದು ಅಮೆರಿಕದ ಆರ್ಥಿಕತೆಯನ್ನು ದುರ್ಬಲಗೊಳಿಸುತ್ತಿದೆ. ಅಲ್ಲದೇ, ಈ ಉತ್ಪನ್ನಗಳ ಆಮದು ರಾಷ್ಟ್ರೀಯ ಭದ್ರತೆಗೆ ಅಪಾಯ ಒಡ್ಡಲಿದೆ ಎಂದು ಹೇಳುವ ಮೂಲಕ ಸುಂಕ ಹೆಚ್ಚಳವನ್ನು ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ.

## ❖ ಏರ್ ರೈಫಲ್ ಮಿಶ್ರ ತಂಡಕ್ಕೆ ಚಿನ್ನ

ಸಂದರ್ಭ: ತೀವ್ರ ಹೋರಾಟ ನಡೆಸಿದ ಇಶಾ ಅನಿಲ್ ಟಕ್ಸಾಲೆ ಮತ್ತು ಹಿಮಾಂಶು ಜೋಡಿ, ಸ್ವದೇಶದ ಶಾಂಭವಿ ಕ್ಷೀರಸಾಗರ– ನರೇನ್ ಪ್ರಣವ್ ಅವರನ್ನು ಸೋಲಿಸಿ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್‌ನ 10 ಮೀ. ಏರ್ ರೈಫಲ್ ಮಿಶ್ರ ತಂಡ ವಿಭಾಗದಲ್ಲಿ ಸ್ವರ್ಣ ಜಯಿಸಿತು.

- ಪುರುಷರ ಟ್ರ್ಯಾಪ್ (50 ಗುರಿ) ಸ್ಪರ್ಧೆ ಯಲ್ಲಿ ವಿನಯ್ ಪ್ರತಾಪ್ ಚಂದ್ರಾವತ್ ಅವರು ಕಂಚಿನ ಪದಕ ಗೆದ್ದರು., ಭಾರತ ಪದಕ ಪಟ್ಟಿಯಲ್ಲಿ 23 ಪದಕಗಳೊಂದಿಗೆ ಅಗ್ರಸ್ಥಾನ ಕಾಪಾ ಡಿಕೊಂಡಿದೆ. ಇದರಲ್ಲಿ 7 ಚಿನ್ನ, 9 ಬೆಳ್ಳಿ ಮತ್ತು 7 ಕಂಚಿನ ಪದಕಗಳು ಸೇರಿವೆ.
- ಫೈನಲ್‌ನ ಒಂದು ಹಂತದಲ್ಲಿ ಇಶಾ– ಹಿಮಾಂಶು ಜೋಡಿ 9–15ರಲ್ಲಿ ಹಿನ್ನಡೆಯಲ್ಲಿತ್ತು. ಆದರೆ ಅಮೋಘವಾಗಿ ಚೇತರಿಸಿ 17–15ರಲ್ಲಿ ಜಯಗಳಿಸಿತು. ಈ ಸ್ಪರ್ಧೆಯ ಕಂಚಿನ ಪದಕ ಐಎನ್‌ಎ (ವೈಯಕ್ತಿಕ ತಟಸ್ಥ ಅಥ್ಲೀಟ್ಸ್) ಪ್ರತಿನಿಧಿಸಿದ ವರ್ವರಾ ಕರ್ದಕೋವಾ– ಕಮಿಲ್ ನುರಿಯಖ್ಮೆಟೋವ್ ಜೋಡಿ ಪಾಲಾಯಿತು.

Rajkumar IAS/KAS Academy

- ಪುರುಷರ ಟ್ರ್ಯಾಪ್ ಸ್ಪರ್ಧೆಯಲ್ಲಿ ಕ್ರೊವೇಷ್ಯಾದ 20 ವರ್ಷ ವಯಸ್ಸಿನ ಟೋನಿ ಗುಡೆಲ್ ಅವರು 44 ಟಾರ್ಗೆಟ್ ಸಾಧಿಸಿ ಚಿನ್ನ ಗೆದ್ದರು. **ಇದು ಈ ದೇಶಕ್ಕೆ ಮೊದಲ ಚಿನ್ನ**. ಕ್ವಾಲಿಫಿಕೇಷನ್‌ನಲ್ಲಿ ಅಗ್ರಸ್ಥಾನ ಗಳಿಸಿದ್ದ ಸ್ಪೇನ್‌ನ ಐಸಾಕ್ ಹರ್ನಾಂಡೆಝ್ (41) ಬೆಳ್ಳಿ ಗೆದ್ದರು. ಚಂದ್ರಾವತ್ (34) ಮೂರನೇ ಸ್ಥಾನ ಗಳಿಸಿದರೆ, ಅರ್ಜುನ್ (29) ನಾಲ್ಕನೇ ಸ್ಥಾನ ಪಡೆದರು.
- ಮಹಿಳೆಯರ 25 ಮೀ. ಪಿಸ್ತೂಲ್ ಪ್ರಿಸಿಷನ್ ಹಂತದ ನಂತರ ಭಾರತದ ತೇಜಸ್ವಿನಿ 288 ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿದ್ದಾರೆ. ಬುಧವಾರ ರ್ಯಾಪಿಡ್ ಫೈರ್ ಹಂತ ನಡೆಯಲಿದ್ದು, ಒಟ್ಟಾರೆ ಮೊದಲ ಆರು ಸ್ಥಾನ ಗಳಿಸಿದವರು ಫೈನಲ್ ತಲುಪುವರು.
- ಪುರುಷರ 25 ಮೀ. ಪಿಸ್ತೂಲ್ ಸ್ಪರ್ಧೆಯ ಪ್ರಿಸಿಷನ್ ಹಂತದ ನಂತರ ಭಾರತದ ರಾಘವ್ ಶರ್ಮಾ (290) ಅಗ್ರಸ್ಥಾನದಲ್ಲಿದ್ದಾರೆ. ಮುಕೇಶ್ ನೆಲವಳ್ಳಿ (289) ನಿಕಟ ಪೈಪೋಟಿ ನೀಡಿ ಎರಡನೇ ಸ್ಥಾನದಲ್ಲಿದ್ದಾರೆ.

## ❖ ಐದನೇ ಪದಕ ಗೆದ್ದ ಶ್ರೀಹರಿ ನಟರಾಜ್

ಸಂದರ್ಭ: ಉತ್ತಮ ಪ್ರದರ್ಶನ ನೀಡುತ್ತಿರುವ ಭಾರತದ ಈಜುತಾರೆ ಶ್ರೀಹರಿ ನಟರಾಜ್ ಅವರು 11ನೇ ಏಷ್ಯನ್ ಚಾಂಪಿಯನ್ ಷಿಪ್‌ನಲ್ಲಿ 100 ಮೀ. ಫ್ರೀಸ್ಟೈಲ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದುಕೊಂಡರು. ಇದು ಅವರಿಗೆ ಈ ಕೂಟದಲ್ಲಿ ಐದನೇ ಪದಕ.

- ಪುರುಷರ 50 ಮೀ. ಬಟರ್‌ಫ್ಲೈ ನಲ್ಲಿ ರೋಹಿತ್ ಬಿ.ಬೆನೆಡಿಕ್ಟನ್ ಅವರು ಬೆಳ್ಳಿ ಗೆದ್ದುಕೊಂಡರು. ಇದರೊಂದಿಗೆ ಭಾರತ ಈ ಕೂಟದಲ್ಲಿ 9 ಪದಕಗಳನ್ನು ಗೆದ್ದಂತಾಗಿದೆ.
- ಐದನೇ ಲೇನ್‌ನಲ್ಲಿದ್ದ ಶ್ರೀಹರಿ, ಜಾಣ್ಮೆಯಿಂದ ವೇಗ ಹೆಚ್ಚಿಸಿದರು. 50 ಮೀ. ಕಳೆಯುವಷ್ಟರಲ್ಲಿ ಅವರು ಮೂರನೇ ಸ್ಥಾನದಲ್ಲಿದ್ದರು. ಕೊನೆಯ 50 ಮೀ. ನಲ್ಲೂ ಅವರು ಅದೇ ಲಯವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾದರು. ಚೀನಾದ ವಾಂಗ್ ಹಾವೊಯು (49.19 ಸೆ.) ಮತ್ತು ಕತಾರ್‌ನ ಅಲಿ ತಮೆರ್ ಹಸನ್ (49.46 ಸೆ.) ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಗೆದ್ದರು.
- ಶ್ರೀಹರಿ 49.96 ಸೆ.ಗಳಲ್ಲಿ ಸ್ಪರ್ಧೆ ಪೂರೈಸಿದರು. ಅವರು ಸ್ವದೇಶದ ಆಕಾಶ್ ಮಣಿ (50.45 ಸೆ.) ಪೈಪೋಟಿ ಮೀರಿ ನಿಂತರು. ಆಕಾಶ್ ನಾಲ್ಕನೇ ಸ್ಥಾನ ಪಡೆದರು.
- 'ಈ ಋತುವಿನಲ್ಲಿ ನನ್ನಿಂದ ಉತ್ತಮ ಪ್ರದರ್ಶನ ಮೂಡಿಬಂದಿದೆ. ತರಬೇತಿಯೂ ಚೆನ್ನಾಗಿ ನಡೆದಿದೆ. ಹೀಟ್ಸ್‌ನಲ್ಲಿ ನಾನೇ ವೇಗವಾಗಿ ಈಜಿದ್ದೆ. ಆದರೆ ಪದಕ ಗೆದ್ದ ಇತರ ಇಬ್ಬರೂ ಅಮೋಘವಾಗಿ ಈಜಿದರು. ಪೋಡಿಯಂ ಏರಲು ಸಾಧ್ಯವಾಗಿದ್ದರಿಂದ ಸಂತಸವಾಗಿದೆ' ಎಂದು 24 ವರ್ಷ ವಯಸ್ಸಿನ ಶ್ರೀಹರಿ ಫೈನಲ್ ನಂತರ ಪ್ರತಿಕ್ರಿಯಿಸಿದರು.
- 50 ಮೀ. ಬಟರ್‌ಫ್ಲೈನಲ್ಲಿ ರೋಹಿತ್ ಉತ್ತಮ ಆರಂಭ ಪಡೆದು, 23.89 ಸೆ.ಗಳಲ್ಲಿ ಗುರಿ ತಲುಪಿ ಎರಡನೇ ಸ್ಥಾನ ಪಡೆದರು. ಅವರಿಂದ ತೀವ್ರ ಪೈಪೋಟಿ ಎದುರಿಸಿದರೂ ಕಜಾಕಸ್ತಾನದ ಅದಿಲ್ಬೆಕ್ ಮುಸ್ಸಿನ್ 23.74 ಸೆ.ಗಳಲ್ಲಿ ಗುರಿತಲುಪಿ ಚಿನ್ನ ಗೆಲ್ಲುವಲ್ಲಿ ಯಶಸ್ವಿ ಆದರು.
- ಕರ್ನಾಟಕದವರಾದ ಧಿನಿಧಿ ದೇಸಿಂಗು ಮತ್ತು ಎಸ್.ರುತುಜಾ ಅವರು ಮಹಿಳೆಯರ 100 ಮೀ. ಫ್ರೀಸ್ಟೈಲ್ ನಲ್ಲಿ ಫೈನಲ್‌ಗೆ ತಲುಪಿದ್ದರು. ಆದರೆ ಪದಕ ಗೆಲ್ಲಲಾಗಲಿಲ್ಲ. ಅವರು ಕ್ರಮವಾಗಿ ಆರು ಮತ್ತು ಎಂಟನೇ ಸ್ಥಾನ ಗಳಿಸಿದರು.

## ❖ ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಸುಮಿತ್‌ಗೆ ಹ್ಯಾಟ್ರಿಕ್ ಚಿನ್ನ

ಸಂದರ್ಭ: ಭಾರತದ ಪ್ಯಾರಾ ಜಾವೆಲಿನ್ ಪಟು ಸುಮಿತ್ ಅಂಟಿಲ್ ಅವರು ವಿಶ್ವ ಪ್ಯಾರಾ ಅಥ್ಲೆಟಿಕ್ಸ್‌ನಲ್ಲಿ ಸತತ ಮೂರನೇ ಬಾರಿ ಪುರುಷರ ಎಫ್64 ವಿಭಾಗದಲ್ಲಿ ಚಿನ್ನ ಗೆದ್ದು ಹ್ಯಾಟ್ರಿಕ್ ಪೂರೈಸಿದರು.

- ಜಾವೆಲಿನ್ ಸ್ಪರ್ಧೆಯಲ್ಲಿ ಸುಮಿತ್ ಅವರು ತಮ್ಮ ಐದನೇ ಯತ್ನದಲ್ಲಿ 71.37 ಮೀ. ದೂರ ಎಸೆದಿದ್ದು ಅವರ ಉತ್ತಮ ಥ್ರೊ ಎನಿಸಿತು. 27 ವರ್ಷ ವಯಸ್ಸಿನ ಸುಮಿತ್ ಈ ಹಿಂದೆ 2023 ಮತ್ತು 2024ರ ಆವೃತ್ತಿಗಳಲ್ಲೂ ಚಾಂಪಿಯನ್ ಆಗಿದ್ದರು.
- ಇಂದಿನ ಸಾಧನೆ ಅವರ ವೈಯಕ್ತಿಕ ಶ್ರೇಷ್ಠವೂ ಆಗಿದೆ. ಕಳೆದ ವರ್ಷದ ಚಾಂಪಿಯನ್‌ಷಿಪ್‌ನಲ್ಲಿ ಅವರು 70.83 ಮೀ. ದೂರ ಎಸೆದಿದ್ದು ಇದುವರೆಗಿನ ಅತ್ಯುತ್ತಮ ಎನಿಸಿತ್ತು.
- ಪ್ಯಾರಾಲಿಂಪಿಕ್ಸ್‌ನಲ್ಲೂ ಅವರು ಎರಡು ಬಾರಿಯ (2021ರ ಟೋಕಿಯೊ ಮತ್ತು 2024ರ ಪ್ಯಾರಿಸ್) ಚಿನ್ನದ ಪದಕ ವಿಜೇತರಾಗಿದ್ದಾರೆ. ಹಾಲಿ ಪ್ಯಾರಾ ಏಷ್ಯನ್ ಗೇಮ್ಸ್ ಚಾಂಪಿಯನ್ ಕೂಡ ಆಗಿದ್ದಾರೆ.

## ❖ ಬಿಹಾರದಲ್ಲಿ 7.42 ಕೋಟಿ ಮತದಾರರು

ಸಂದರ್ಭ: ಚುನಾವಣಾ ಆಯೋಗವು ಮಂಗಳವಾರ ಬಿಹಾರದ ಮತದಾರರ ಅಂತಿಮ ಪಟ್ಟಿಯನ್ನು ಪ್ರಕಟಿಸಿದ್ದು, ಅದರಲ್ಲಿ 7.42 ಕೋಟಿ ಮತದಾರರ ವಿವರಗಳಿವೆ.

- ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ ರಾಜ್ಯದಲ್ಲಿ ಒಟ್ಟು 47 ಲಕ್ಷ ಮತದಾರರು ಕಡಿಮೆಯಾಗಿದ್ದಾರೆ. ಆದರೆ, ಎಸ್‌ಐಆರ್‌ನ ಕರಡು ಪಟ್ಟಿಗಿಂತ (7.24 ಕೋಟಿ) ಅಂತಿಮ ಪಟ್ಟಿಯಲ್ಲಿ ಹೆಚ್ಚಿನ ಸಂಖ್ಯೆಯ ಮತದಾರರ ಹೆಸರುಗಳು ಸೇರ್ಪಡೆಯಾಗಿವೆ.
- ಆಗಸ್ಟ್‌ನಲ್ಲಿ ಪ್ರಕಟಿಸಿದ್ದ ಕರಡು ಪಟ್ಟಿಯಲ್ಲಿ ಗೈರುಹಾಜರಿ, ಸ್ಥಳಾಂತರ ಅಥವಾ ಮೃತಪಟ್ಟಿದ್ದಾರೆ ಎಂಬ ಕಾರಣಗಳನ್ನು ನೀಡಿ 65 ಲಕ್ಷ ಮತದಾರರ ಹೆಸರುಗಳನ್ನು ಹೊರಗಿಡಲಾಗಿತ್ತು. ಕರಡುಪಟ್ಟಿಯಲ್ಲಿ ಬಿಟ್ಟುಹೋಗಿದ್ದ 21.53 ಲಕ್ಷ ಅರ್ಹ ಮತದಾರರ ಹೆಸರುಗಳನ್ನು ಅಂತಿಮ ಪಟ್ಟಿಯಲ್ಲಿ ಸೇರಿಸಲಾಗಿದೆ ಎಂದು ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ಮಾಹಿತಿ ನೀಡಿದ್ದಾರೆ.
- ಚುನಾವಣಾ ಆಯೋಗವು ಬಿಹಾರದ ಮತದಾರರ ಅಂತಿಮ ಪಟ್ಟಿಯನ್ನು ಪ್ರಕಟಿಸಿದ್ದು, ಅದರಲ್ಲಿ 7.42 ಕೋಟಿ ಮತದಾರರ ವಿವರಗಳಿವೆ.
- ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ ರಾಜ್ಯದಲ್ಲಿ ಒಟ್ಟು 47 ಲಕ್ಷ ಮತದಾರರು ಕಡಿಮೆಯಾಗಿದ್ದಾರೆ. ಆದರೆ, ಎಸ್‌ಐಆರ್‌ನ ಕರಡು ಪಟ್ಟಿಗಿಂತ (7.24 ಕೋಟಿ) ಅಂತಿಮ ಪಟ್ಟಿಯಲ್ಲಿ ಹೆಚ್ಚಿನ ಸಂಖ್ಯೆಯ ಮತದಾರರ ಹೆಸರುಗಳು ಸೇರ್ಪಡೆಯಾಗಿವೆ.
- ಆಗಸ್ಟ್‌ನಲ್ಲಿ ಪ್ರಕಟಿಸಿದ್ದ ಕರಡು ಪಟ್ಟಿಯಲ್ಲಿ ಗೈರುಹಾಜರಿ, ಸ್ಥಳಾಂತರ ಅಥವಾ ಮೃತಪಟ್ಟಿದ್ದಾರೆ ಎಂಬ ಕಾರಣಗಳನ್ನು ನೀಡಿ 65 ಲಕ್ಷ ಮತದಾರರ ಹೆಸರುಗಳನ್ನು ಹೊರಗಿಡಲಾಗಿತ್ತು. ಕರಡುಪಟ್ಟಿಯಲ್ಲಿ ಬಿಟ್ಟುಹೋಗಿದ್ದ 21.53 ಲಕ್ಷ ಅರ್ಹ ಮತದಾರರ ಹೆಸರುಗಳನ್ನು ಅಂತಿಮ ಪಟ್ಟಿಯಲ್ಲಿ ಸೇರಿಸಲಾಗಿದೆ ಎಂದು ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ಮಾಹಿತಿ ನೀಡಿದ್ದಾರೆ.

## ❖ ಗಾಜಾ: ಸಂಘರ್ಷ ಅಂತ್ಯಕ್ಕೆ 20 ಅಂಶ

ಸಂದರ್ಭ: ಗಾಜಾದಲ್ಲಿ ಯುದ್ಧ ಕೊನೆಗೊಳಿಸುವ ಸಂಬಂಧ ರೂಪಿಸಿರುವ ಶಾಂತಿ ಒಪ್ಪಂದಕ್ಕೆ ಒಪ್ಪಿಗೆಯಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ತಿಳಿಸಿದ್ದಾರೆ. ಆದರೆ, ಈ ಪ್ರಸ್ತಾವವನ್ನು ಹಮಾಸ್ ಒಪ್ಪಿಕೊಂಡಿ ದೆಯೇ ಎಂಬುದು ದೃಢಪಟ್ಟಿಲ್ಲ.

- ಪ್ಯಾಲೆಸ್ಟೀನ್‌ನ ಗಾಜಾ ಪಟ್ಟಿಯಲ್ಲಿ ಇಸ್ರೇಲ್– ಹಮಾಸ್ ನಡುವಿನ ಸಂಘರ್ಷ ಕೊನೆಗೊಳಿಸುವುದಕ್ಕಾಗಿ 20 ಅಂಶಗಳ ಯೋಜನೆಯನ್ನು ಟ್ರಂಪ್ ಮಂಡಿಸಿದ್ದಾರೆ. ಇದರ ಅನ್ವಯ, ಯುದ್ಧದಿಂದ ಜರ್ಜರಿತರಾಗಿರುವ ಪ್ಯಾಲೆಸ್ಟೀನ್‌ನ ಪ್ರದೇಶಕ್ಕೆ ತಾತ್ಕಾಲಿಕ ಆಡಳಿತ ಮಂಡಳಿ ಸ್ಥಾಪಿಸಿ, ಇದರ ನೇತೃತ್ವವನ್ನು ಡೊನಾಲ್ಡ್ ಟ್ರಂಪ್ ಅವರೇ ವಹಿಸಿ ಕೊಳ್ಳಲಿದ್ದಾರೆ. ಈ ಮಂಡಳಿಯಲ್ಲಿ ಬ್ರಿಟನ್‌ನ ಮಾಜಿ ಪ್ರಧಾನಿ ಟೋನಿ ಬ್ಲೇರ್ ಕೂಡ ಇರಲಿದ್ದಾರೆ.

Dr. Rajkumar IAS/KAS Academy

- 'ಎರಡು ಕಡೆಯವರೂ ಒಪ್ಪಿಗೆ ಸೂಚಿಸಿದರೆ, ಯುದ್ಧಪೀಡಿತ ಗಾಜಾ ದಿಂದ ಯಾವ ನಾಗರಿಕರೂ ಬಿಟ್ಟು ತೆರಳಬೇಕಿಲ್ಲ. ಹಮಾಸ್ ವಶದಲ್ಲಿರುವ ಬಾಕಿ ಉಳಿದ ಒತ್ತೆಯಾಳುಗಳನ್ನು 72 ಗಂಟೆಗಳ ಒಳಗಾಗಿ ಬಿಡುಗಡೆಗೊಳಿಸಬೇಕು ಎಂಬ ಪ್ರಸ್ತಾವವೂ ಒಳಗೊಂಡಿದೆ ಎಂದು ಟ್ರಂಪ್ ಹೇಳಿದ್ದಾರೆ.

## ❖ ವರವಾದೀತೆ ನ್ಯಾನೋ ಗೊಬ್ಬರ?

ಸಂದರ್ಭ: ಈಗ ನಾನಾರೂಪದಲ್ಲಿ ನ್ಯಾನೋ ತಂತ್ರಜ್ಞಾನ ಬೆಳೆಯುತ್ತಲೇ ಇದೆ. ನ್ಯಾನೋ ತಂತ್ರಜ್ಞಾನವೆಂದರೆ 1ರಿಂದ 100 ನ್ಯಾನೋ ಮೀಟರ್‌ಗಳ ವ್ಯಾಪ್ತಿಯಲ್ಲಿಯ ವಸ್ತುಗಳನ್ನು ಕುರಿತಾದ ವಿಜ್ಞಾನ.

- **ಒಂದು ನ್ಯಾನೋ ಮೀಟರ್ (0.000000001 ಮೀಟರ್), ಎಂದರೆ ಅದರ ದಪ್ಪವು ನಮ್ಮ ಕೂದಲೆಳೆಗಿಂತ ಸರಿಸುಮಾರು ಒಂದು ಲಕ್ಷ ಪಟ್ಟು ಕಡಿಮೆ!** ಒಂದು ಕಾಲದಲ್ಲಿ ಕೇವಲ ಇದೊಂದು 'ಸಾಧ್ಯತೆ' ಎನಿಸಿಕೊಂಡಿದ್ದ ಅತ್ಯಂತ ಸಂಕೀರ್ಣ ಹಾಗೂ ಸೂಕ್ಷ್ಮ ತಂತ್ರಜ್ಞಾನ.
- ನ್ಯಾನೋ ತಂತ್ರಜ್ಞಾನ ಮೊದಮೊದಲು ಸೂಕ್ಷ್ಮದರ್ಶಕ ತಂತ್ರಜ್ಞಾನ ಹಾಗೂ ವಸ್ತುವಿಜ್ಞಾನದ ಕ್ಷೇತ್ರವನ್ನು ಪ್ರವೇಶಿಸಿತು. ಇಂದು ಔಷಧತಯಾರಿಕೆ, ಆರೋಗ್ಯ, ಪರಿಸರ ಮಾಲಿನ್ಯ ನಿರ್ವಹಣೆ, ಸೌರಫಲಕಗಳ ತಯಾರಿಕೆ, ಚಿಪ್‌ಗಳ ವಿನ್ಯಾಸ, ನ್ಯಾನೋ ರೋಬೋಟ್ – ಹೀಗೆ ಹಲವಾರು ವಿವಿಧ ಕ್ಷೇತ್ರಗಳಲ್ಲಿ ಕಾರ್ಯರೂಪಕ್ಕೆ ಬಂದಿದೆ.
- ನ್ಯಾನೋ ಟೆಕ್ನಾಲಜಿ ಇಂದು ಕೃಷಿಯಲ್ಲಿಯೂ ಬಳಕೆಯಾಗುತ್ತಿದೆ. ಕಳೆದ ಕಾಲು ಶತಮಾನಗಳಿಂದ ನ್ಯಾನೋ ತಂತ್ರಜ್ಞಾನವನ್ನು ಕೃಷಿಯ ಕ್ಷೇತ್ರ ದಲ್ಲಿಯೂ ಪ್ರಯೋಗ ಮಾಡಲಾಗುತ್ತಿದೆ. ಆ ಅವಿರತ ಪರಿಶ್ರಮದ ಫಲವೇ ನ್ಯಾನೋ ಗೊಬ್ಬರ.
- ಗೊಬ್ಬರಗಳಲ್ಲಿನ ಪೋಷಕಾಂಶಗಳನ್ನು ಹೆಚ್ಚು ಪರಿ ಣಾಮಕಾರಿಯಾಗಿಸಲು ಗೊಬ್ಬರವನ್ನು ನ್ಯಾನೋ ಗಾತ್ರಕ್ಕೆ ತರಲಾಗುವುದು. ಅದೇ 'ನ್ಯಾನೋ ಗೊಬ್ಬರ'. ಸಾಮಾನ್ಯ ಗೊಬ್ಬರದ ಹಾಗೆ ಮಣ್ಣಿನಲ್ಲಿ ಬೆರೆಸುವುದರ ಬದಲಾಗಿ ಇದನ್ನು ನೇರವಾಗಿ ಕಾಂಡಕ್ಕೆ ಹಾಗೂ ಎಲೆಗಳಿಗೆ ಸಿಂಪಡಿಸಲಾಗು ತ್ತದೆ. ಇದು ಸಾಂಪ್ರದಾಯಿಕ ಗೊಬ್ಬರಕ್ಕಿಂತ ಸೋವಿ, ಬಳಕೆಯ ಅವಶ್ಯಕತೆಯ ಪ್ರಮಾಣವೂ ಕಡಿಮೆ, ನಿರ್ವಹಣೆಯೂ ಸುಲಭ, ಅತ್ಯಂತ ಪರಿಣಾಮಕಾರಿ; ಅಷ್ಟೇ ಇಳುವರಿ, ಹಾಗೂ ಸುಲಭವಾಗಿ ಇದನ್ನು ಸಂಗ್ರಹಿಸಿಡಬಹುದು. ಕೃಷಿಯಲ್ಲಿ ಸುಸ್ಥಿರತೆಗಾಗಿ ಇದೊಂದು ಅತ್ಯಂತ ಮಹತ್ವದ ಪರಿಹಾರವಾಗಿದೆ. **ನ್ಯಾನೋ ಗೊಬ್ಬರದಲ್ಲಿ ನಾಲ್ಕು ಬಗೆಗಳುಂಟು: ನ್ಯಾನೋ ಯೂರಿಯಾ ಅಥವಾ ನ್ಯಾನೋ ಸಾರಜನಕ, ನ್ಯಾನೋ ಫಾಸ್ಪರಸ್, ನ್ಯಾನೋ ಪೊಟ್ಯಾಸಿಯಮ್, ಹಾಗೂ ನ್ಯಾನೋ ಸೂಕ್ಷ್ಮ ಪೋಷಕಾಂಶಗಳು.**

Dr. Rajkumar IAS/KAS Academy

## ನ್ಯಾನೋ ಗೊಬ್ಬರದ ಕೆಲವು ಲಕ್ಷಣಗಳನ್ನು ನೋಡೋಣ

- **ನ್ಯಾನೋ ಗಾತ್ರ:** ಈ ಗೊಬ್ಬರದ ಪ್ರಧಾನ ಲಕ್ಷಣವೇ ಅದರ ಸೂಕ್ಷ್ಮ ಗಾತ್ರ. ಸಾಂಪ್ರದಾಯಿಕ ರಾಸಾಯನಿಕ ಗೊಬ್ಬರವು ಗಾತ್ರದಲ್ಲಿ ದೊಡ್ಡದಾಗಿರುವುದರಿಂದ ಅದರ ಬಳಕೆಯ ಪ್ರಮಾಣ ಹೆಚ್ಚಾಗಿರುತ್ತದೆ. ಬಳಸಿದ ಎಲ್ಲಾ ಗೊಬ್ಬರವೂ ಬೆಳೆಗಳಿಗೆ ಉಪಯೋಗವಾಗುವುದಿಲ್ಲ; ಪೋಷಕಾಂಶದ ಸೋರಿಕೆಯಾಗುತ್ತದೆ, ಗೊಬ್ಬರವು ನೀರಿನಲ್ಲಿ ಸೇರಿ ಹರಿದು ಹೋಗುತ್ತದೆ, ಇಲ್ಲವೇ ಮಣ್ಣಿನಲ್ಲೇ ಉಳಿದುಬಿಡುತ್ತದೆ. ಅಚ್ಚರಿಯ ವಿಷಯವೆಂದರೆ, ಗೊಬ್ಬರದಲ್ಲಿನ ಶೇ 50-70ರಷ್ಟು ಪೋಷಕಾಂಶವು ಬೆಳೆಗಳಿಗೆ ಸಿಗುವುದೇ ಇಲ್ಲ. ಇದಕ್ಕೆ ರಾಮಬಾಣವೇ ನ್ಯಾನೋ ಗೊಬ್ಬರ. ಇದರ ಗಾತ್ರ ಅತಿ ಚಿಕ್ಕದು; ಅದನ್ನು ಪೋಷಕಾಂಶಗಳ ಸಮೇತ ಕ್ಯಾಪ್ಸೂಲ್‌ನಲ್ಲಿ ತುಂಬಿ ಸಲಾಗುತ್ತದೆ. ದ್ರವದ ರೂಪದಲ್ಲಿ ನೇರವಾಗಿ ಕಾಂಡಗಳು, ಎಲೆಗಳು, ಕೆಲವೊಮ್ಮೆ ಬೇರುಗಳೂ ಹೀರಿಕೊಳ್ಳುವಂತೆ ಸಿಂಪಡಿ ಸಲಾಗುತ್ತದೆ.

- **ಪೋಷಕಾಂಶಗಳ ಬಿಡುಗಡೆ ನಿಧಾನ:** ನ್ಯಾನೋ ಗೊಬ್ಬರವನ್ನು ಹಾಕಿದ ಮೇಲೆ ಅದರಲ್ಲಿನ ಪೋಷಕಾಂಶಗಳು ನಿಧಾನವಾಗಿ ಬಿಡುಗಡೆಯಾಗುತ್ತವೆ. ಇದರಿಂದಾಗಿ ಸಸ್ಯಗಳು ಪೋಷಕಾಂಶಗಳನ್ನು ಹೀರಿಕೊಳ್ಳುವ ಪ್ರಮಾಣ ಹೆಚ್ಚುತ್ತದೆ. ಈ ವಿಶೇಷವಾದ ಲಕ್ಷಣದಿಂದಾಗಿ ಪೋಷಕಾಂಶವು ಪೋಲಾಗುವುದು ಕಡಿಮೆ ಆಗುವುದಲ್ಲದೆ, ಮತ್ತೆ ಮತ್ತೆ ಗೊಬ್ಬರದ ಸಿಂಪಡಣೆಯ ಅಗತ್ಯವೂ ಇಲ್ಲ.
- **ಪರಿಣಾಮಕಾರಿ:** 500 ಮಿಲಿಲೀಟರ್ ನ್ಯಾನೋ ಯೂರಿಯಾವು 45 ಕೆಜಿಗಳಷ್ಟು ಸಾಂಪ್ರದಾಯಿಕ ರಾಸಾಯನಿಕ ಯೂರಿಯಾ ಗೊಬ್ಬರಕ್ಕೆ ಸಮ! ನ್ಯಾನೋ ಗೊಬ್ಬರವು ಒಳ್ಳೆಯ ಇಳುವರಿಯನ್ನು ನೀಡುವುದಲ್ಲದೆ ಕಿಸೆಗೂ ಹಗುರ.
- **ಪರಿಸರಸ್ನೇಹಿ:** ನ್ಯಾನೋ ಗೊಬ್ಬರವು ಪರಿಸರಸ್ನೇಹಿ. ಮೊದಲನೆಯದಾಗಿ ಅನಗತ್ಯ ರಾಸಾಯನಿಕ ಸೋರಿಕೆಯು ತಪ್ಪಿ ಜಲಮಾಲಿನ್ಯವು ಕಡಿಮೆಯಾಗುತ್ತದೆ. ಎರಡನೆಯದಾಗಿ ಗೊಬ್ಬರದ ತಯಾರಿಕೆಯಲ್ಲಿ ಗಣನೀಯವಾದ ಇಳಿಕೆಯಾಗಿ ಅದರಿಂದ ಆಗುತ್ತಿರುವ ಹಸಿರುಮನೆ ಅನಿಲಗಳ ಹೊರ ಸೂಸುವಿಕೆಯಲ್ಲಿ ಕೂಡ ಇಳಿಕೆಯನ್ನು ಕಾಣಬಹುದು. v

**ಭಾರತದ ಪಾತ್ರ**

- 1960ರ ನಂತರದಲ್ಲಿ ಭಾರತದಲ್ಲಿ ನಡೆದ ಹಸಿರು ಕ್ರಾಂತಿಯು ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಹೆಚ್ಚಿಸಿ, ಮಣ್ಣನ್ನು ದುರ್ಬಲಗೊಳಿಸಿದೆ. ಆದರೆ ಈಗ ಭಾರತದ ಕೆಲವು ಸಹಕಾರಿ, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು (ಇಂಡಿಯನ್ ಫಾರ್ಮರ್ಸ್ ಫರ್ಟಿಲೈಸರ್ಸ್ ಕೋ-ಒಪರೇಟಿವ್ ಲಿಮಿಟೆಡ್ (IFFCO), ನ್ಯಾಷನಲ್ ಫರ್ಟಿಲೈಸರ್ಸ್ ಲಿಮಿಟೆಡ್ (NFL), ಟಾಟಾ ಕೆಮಿಕಲ್ಸ್, ರಾಷ್ಟ್ರೀಯ ಕೆಮಿಕಲ್ಸ್ ಫರ್ಟಿಲೈಸರ್ಸ್ (RCF), ಮುಂತಾದವು) ಅಭಿವೃದ್ಧಿಪಡಿಸಿರುವ ನ್ಯಾನೋ ಗೊಬ್ಬರಗಳು ಕೃಷಿಯಲ್ಲಿ ಹೊಸ ಯುಗವನ್ನು ಶುರುಮಾಡಿವೆ. ಭಾರತವು ಜಗತ್ತಿಗೆ ಸುಸ್ಥಿರ ಸಮಾಜದ ಮಾದರಿಯೊಂದನ್ನು ನ್ಯಾನೋ ಗೊಬ್ಬರದ ತಂತ್ರಜ್ಞಾನ ಮೂಲಕ ಒದಗಿಸುವಂತಿದೆ.
- ಚೀನಾ ಹಾಗೂ ಭಾರತವನ್ನು ಹೊರತುಪಡಿಸಿ ಇದರ ಮೇಲೆ ಹೆಚ್ಚು ಸಂಶೋಧನೆಯು ಮತ್ತೆಲ್ಲಿಯೂ ಆಗಿಲ್ಲ. ಈಗಾಗಲೇ ಭಾರತದಲ್ಲಿ ಲಕ್ಷಾಂತರ ರೈತರು ನ್ಯಾನೋ ಗೊಬ್ಬರವನ್ನು ಬಳಸುತ್ತಿದ್ದಾರೆ. ಸಾರ್ವಜನಿಕವಾಗಿ ಲಭ್ಯವಿರುವ ಮಾಹಿತಿಯ ಪ್ರಕಾರ IFFCOವು ಜಗತ್ತಿನಲ್ಲಿ ಅತಿ ಹೆಚ್ಚು ನ್ಯಾನೋ ಗೊಬ್ಬರವನ್ನು ತಯಾರಿಸುವ ಸಂಸ್ಥೆಯಾಗಿದ್ದು, ವರ್ಷಕ್ಕೆ 3.6 ಕೋಟಿ ನ್ಯಾನೋ ಗೊಬ್ಬರದ ಬಾಟಲಿಗಳನ್ನು ಉತ್ಪಾದಿಸಿದೆ.
- 'ದಿ ಎನರ್ಜಿ ಆ್ಯಂಡ್ ರಿಸರ್ಚ್ ಇನ್ಸ್ಟಿಟ್ಯೂಟ್'(ಟೆರಿ)ಯ ವರದಿಯ ಪ್ರಕಾರ ಭಾರತದಲ್ಲಿ ರಾಸಾಯನಿಕ ಗೊಬ್ಬರದ ಬಳಕೆಯು ಮುಂದಿನ ದಿನಗಳಲ್ಲಿ ಸುಮಾರು ಶೇ 50ರಷ್ಟು ಕಡಿಮೆ ಆಗಲಿದೆಯಂತೆ.
- ಇದು ನಮ್ಮ ನೆಲ, ಜಲ ಹಾಗೂ ಜನರ ಸ್ವಾಸ್ಥ್ಯಕ್ಕೆ ಒಳ್ಳೆಯದಾಗಲಿದೆ. ಕಾಲಕ್ರಮೇಣ ಬಳಕೆ ಹಾಗೂ ಇದರ ಕುರಿತಾದ ಸಂಶೋಧನೆಗಳು ಹೆಚ್ಚಿದಂತೆ ನ್ಯಾನೋ ಗೊಬ್ಬರದ ಬಳಕೆಯ ಬಗೆಗೆ ಇರುವ ಸಂಶಯಗಳೂ ಕಡಿಮೆಯಾಗಲಿವೆ.

Dr. Rajkumar IAS/KAS Academy

## ❖ ಮೂರು ಪಾಲಿಕೆಯಲ್ಲಿ ಆರ್.ಆರ್. ನಗರ

ಸಂದರ್ಭ: ಎರಡು ನಗರ ಪಾಲಿಕೆಗಳಲ್ಲಿ **ದಾಸರಹಳ್ಳಿ, ಮಹದೇವಪುರ, ಯಶವಂತಪುರ, ಪದ್ಮನಾಭನಗರ** ವಿಧಾನಸಭೆ ಕ್ಷೇತ್ರದ ವಾರ್ಡ್‌ಗಳು.




- ಒಂದು ವಿಧಾನಸಭೆ ಕ್ಷೇತ್ರದ ಪ್ರದೇಶಗಳು ಒಂದೇ ನಗರ ಪಾಲಿಕೆಯಲ್ಲಿ ಇರಬೇಕೆಂಬ ನಿಯಮಗಳಿದ್ದರೂ, ಐದು ವಿಧಾನಸಭೆ ಕ್ಷೇತ್ರಗಳ ವ್ಯಾಪ್ತಿಯ ಪ್ರದೇಶಗಳು ಎರಡಕ್ಕಿಂತ ಹೆಚ್ಚು ನಗರ ಪಾಲಿಕೆಗಳಲ್ಲಿ ಹಂಚಿಕೆಯಾಗಿವೆ.
- ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ-2024 (ಜಿಬಿಜಿಎ) ಅಧ್ಯಾಯ 4ರ ನಗರ ಪಾಲಿಕೆ ರಚನೆಯ ಉಪ ಪ್ರಕರಣ 3ರ ಪ್ರಕಾರ, 'ಒಂದು ವಿಧಾನಸಭೆ ಕ್ಷೇತ್ರವನ್ನು ಎರಡು ಅಥವಾ ಹೆಚ್ಚಿನ ನಗರ ಪಾಲಿಕೆಗಳಿಗೆ ವಿಭಜಿಸತಕ್ಕದ್ದಲ್ಲ'. ಆದರೆ, ನಗರ ಪಾಲಿಕೆಗಳ ವಾರ್ಡ್ ಪುನರ್ ವಿಂಗಡಣೆಯ ಕರಡು ಅಧಿಸೂಚನೆಯಲ್ಲಿ ರಾಜರಾಜೇಶ್ವರಿ ನಗರ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯ ಒಟ್ಟು 19 ವಾರ್ಡ್‌ಗಳು ಮೂರು ನಗರ ಪಾಲಿಕೆಗಳಿಗೆ ಹಂಚಿಕೆಯಾಗಿವೆ.
- ಪಶ್ಚಿಮ ನಗರ ಪಾಲಿಕೆಯಲ್ಲಿ 13 ವಾರ್ಡ್‌ಗಳಿದ್ದರೆ, ಉತ್ತರ ನಗರ ಪಾಲಿಕೆಯಲ್ಲಿ ಐದು ವಾರ್ಡ್ ಹಾಗೂ ದಕ್ಷಿಣ ನಗರ ಪಾಲಿಕೆಯಲ್ಲಿ ಒಂದು ವಾರ್ಡ್ ಇದೆ.
- ಯಶವಂತಪುರ ವಿಧಾನಸಭೆ ಕ್ಷೇತ್ರದ 12 ವಾರ್ಡ್‌ಗಳಲ್ಲಿ ಒಂದು ವಾರ್ಡ್ ದಕ್ಷಿಣ ನಗರ ಪಾಲಿಕೆಯಲ್ಲಿದ್ದರೆ, ಉಳಿದ 11 ವಾರ್ಡ್‌ಗಳು ಪಶ್ಚಿಮ ನಗರ ಪಾಲಿಕೆಯಲ್ಲಿವೆ. ದಾಸರಹಳ್ಳಿ ವಿಧಾನಸಭೆ ಕ್ಷೇತ್ರದ 18 ವಾರ್ಡ್‌ಗಳಲ್ಲಿ 8 ವಾರ್ಡ್‌ಗಳು ಉತ್ತರ ನಗರ ಪಾಲಿಕೆಯಲ್ಲಿದ್ದರೆ, ಪಶ್ಚಿಮ ನಗರ ಪಾಲಿಕೆಯಲ್ಲಿ 10 ವಾರ್ಡ್‌ಗಳಿವೆ. ಪದ್ಮನಾಭಗರ ವಿಧಾನಸಭೆ ಕ್ಷೇತ್ರದ 14 ವಾರ್ಡ್‌ಗಳಲ್ಲಿ ದಕ್ಷಿಣ ನಗರ ಪಾಲಿಕೆಯಲ್ಲಿ 6 ವಾರ್ಡ್ ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ 8 ವಾರ್ಡ್‌ಗಳು ಹಂಚಿಕೆಯಾಗಿವೆ. ಮಹದೇವಪುರ ವಿಧಾನಸಭೆ ಕ್ಷೇತ್ರದ 24 ವಾರ್ಡ್‌ಗಳಲ್ಲಿ ಒಂದು ವಾರ್ಡ್ ಮಾತ್ರ ದಕ್ಷಿಣ ನಗರ ಪಾಲಿಕೆಯಲ್ಲಿದ್ದು, ಉಳಿದ 23 ವಾರ್ಡ್‌ಗಳು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿವೆ.
- 25 ಸಾವಿರ ಜನಸಂಖ್ಯೆ: ಐದೂ ನಗರ ಪಾಲಿಕೆಗಳ ವಾರ್ಡ್ ಜನಸಂಖ್ಯೆಯನ್ನು ಸರಾಸರಿ 25 ಸಾವಿರ ಇರುವಂತೆ ಪುನರ್ ವಿಂಗಡಣೆ ಮಾಡಲಾಗಿದೆ. ಒಟ್ಟು 368 ವಾರ್ಡ್‌ಗಳಲ್ಲಿ ಪ್ರತಿಯೊಂದು ವಾರ್ಡ್‌ನ ಜನಸಂಖ್ಯೆ 20 ಸಾವಿರದಿಂದ 27 ಸಾವಿರ ಇದೆ.

### ಕೆ.ಆರ್. ಪುರದಲ್ಲಿ ಅತಿಹೆಚ್ಚು ವಾರ್ಡ್

- ಜಿಬಿಎ ವ್ಯಾಪ್ತಿಯ 28 ವಿಧಾನಸಭೆ ಕ್ಷೇತ್ರಗಳಲ್ಲಿ ಕೆ.ಆರ್. ಪುರದಲ್ಲಿ ಅತಿಹೆಚ್ಚು ವಾರ್ಡ್‌ಗಳಿದ್ದು, ಆನೇಕಲ್ ವಿಧಾನಸಭೆ ಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಹಿಂದೆ ಇದ್ದಂತೆ ಒಂದು ವಾರ್ಡ್ ಮಾತ್ರ ಇದೆ.
- ಕೆ.ಆರ್. ಪುರದಲ್ಲಿ 27 ವಾರ್ಡ್‌ಗಳಿದ್ದು, ಮಹದೇವಪುರದಲ್ಲಿ 24 ವಾರ್ಡ್‌ಗಳಿವೆ. ಬೊಮ್ಮನಹಳ್ಳಿ ವಿಧಾನಸಭೆ ಕ್ಷೇತ್ರದಲ್ಲಿ 20 ವಾರ್ಡ್‌ಗಳಿದ್ದರೆ, ಬೆಂಗಳೂರು ದಕ್ಷಿಣ, ರಾಜರಾಜೇಶ್ವರಿ ನಗರದಲ್ಲಿ ತಲಾ 19 ವಾರ್ಡ್‌ಗಳಿವೆ. ದಾಸರಹಳ್ಳಿ (18 ವಾರ್ಡ್), ಸರ್ವಜ್ಞನಗರ (16 ವಾರ್ಡ್), ಪದ್ಮನಾಭನಗರ (14 ವಾರ್ಡ್), ಬ್ಯಾಟರಾಯನಪುರ (14 ವಾರ್ಡ್) ಮತ್ತು ವಿಜಯನಗರ, ಬಿಟಿಎಂ ಲೇಔಟ್, ಸಿ.ವಿ. ರಾಮನ್ ನಗರ, ಗೋವಿಂದರಾಜ ನಗರ ವಿಧಾನಸಭೆ ಕ್ಷೇತ್ರಗಳಲ್ಲಿ ತಲಾ 13 ವಾರ್ಡ್‌ಗಳಿವೆ.

### ಯಾವ ಪಾಲಿಕೆಯಲ್ಲಿದೆ ಯಾವ ವಿಧಾನಸಭೆ ಕ್ಷೇತ್ರ?

- **ಬೆಂಗಳೂರು ಕೇಂದ್ರ ನಗರ ಪಾಲಿಕೆ-** ಒಟ್ಟು 63 ವಾರ್ಡ್: ಚಾಮರಾಜಪೇಟೆ (10 ವಾರ್ಡ್), ಚಿಕ್ಕಪೇಟೆ (12 ವಾರ್ಡ್), ಸಿ.ವಿ. ರಾಮನ್ ನಗರ (13 ವಾರ್ಡ್), ಗಾಂಧಿನಗರ (10 ವಾರ್ಡ್), ಶಾಂತಿನಗರ (10 ವಾರ್ಡ್), ಶಿವಾಜಿನಗರ (8 ವಾರ್ಡ್).
- **ಬೆಂಗಳೂರು ಉತ್ತರ ನಗರ ಪಾಲಿಕೆ-** ಒಟ್ಟು 72 ವಾರ್ಡ್: ದಾಸರಹಳ್ಳಿ (8 ವಾರ್ಡ್), ಪುಲಕೇಶಿನಗರ (11 ವಾರ್ಡ್) ಬ್ಯಾಟರಾಯನಪುರ (14 ವಾರ್ಡ್), ಯಲಹಂಕ (7 ವಾರ್ಡ್), ರಾಜರಾಜೇಶ್ವರಿನಗರ (5 ವಾರ್ಡ್), ಸರ್ವಜ್ಞನಗರ (16 ವಾರ್ಡ್), ಹೆಬ್ಬಾಳ (11 ವಾರ್ಡ್).

Dr. Rajkumar IAS/KAS Academy

- **ಬೆಂಗಳೂರು ದಕ್ಷಿಣ ನಗರ ಪಾಲಿಕೆ**- ಒಟ್ಟು 72 ವಾರ್ಡ್: ಆನೇಕಲ್ (1 ವಾರ್ಡ್), ಜಯನಗರ (10 ವಾರ್ಡ್), ಪದ್ಮನಾಭನಗರ (6 ವಾರ್ಡ್), ಬಿಟಿಎಂ ಲೇಔಟ್ (13 ವಾರ್ಡ್), ಬೆಂಗಳೂರು ದಕ್ಷಿಣ (19 ವಾರ್ಡ್), ಬೊಮ್ಮನಹಳ್ಳಿ (20 ವಾರ್ಡ್), ಮಹದೇವಪುರ (1 ವಾರ್ಡ್), ಯಶವಂತಪುರ (1 ವಾರ್ಡ್), ರಾಜರಾಜೇಶ್ವರಿ ನಗರ (1 ವಾರ್ಡ್).
- **ಬೆಂಗಳೂರು ಪೂರ್ವ ನಗರ ಪಾಲಿಕೆ**- ಒಟ್ಟು 50 ವಾರ್ಡ್: ಕೆ.ಆರ್. ಪುರ (27 ವಾರ್ಡ್), ಮಹದೇವಪುರ (23 ವಾರ್ಡ್)
- **ಬೆಂಗಳೂರು ಪಶ್ಚಿಮ ನಗರ ಪಾಲಿಕೆ**- ಒಟ್ಟು 111 ವಾರ್ಡ್: ಗೋವಿಂದರಾಜ ನಗರ (13 ವಾರ್ಡ್), ದಾಸರಹಳ್ಳಿ (10 ವಾರ್ಡ್), ಪದ್ಮನಾಭನಗರ (8 ವಾರ್ಡ್), ಬಸವನಗುಡಿ (10 ವಾರ್ಡ್), ಮಲ್ಲೇಶ್ವರ (10 ವಾರ್ಡ್), ಮಹಾಲಕ್ಷ್ಮಿ ಲೇಔಟ್ (12 ವಾರ್ಡ್), ಯಶವಂತಪುರ (11 ವಾರ್ಡ್), ರಾಜರಾಜೇಶ್ವರಿ ನಗರ (13 ವಾರ್ಡ್), ರಾಜಾಜಿನಗರ (11 ವಾರ್ಡ್), ವಿಜಯನಗರ (13 ವಾರ್ಡ್).

## ❖ ಗುಹಾಗೆ ಗಾಂಧಿ ಸೇವಾ ಪ್ರಶಸ್ತಿ

ಸಂದರ್ಭ: ಇತಿಹಾಸಕಾರ ರಾಮಚಂದ್ರ ಗುಹಾ ಅವರನ್ನು 2025ನೇ ಸಾಲಿನ 'ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ – ಕರ್ನಾಟಕ'ಕ್ಕೆ ರಾಜ್ಯ ಸರ್ಕಾರ ಆಯ್ಕೆ ಮಾಡಿದೆ.

- ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪ್ರತಿ ವರ್ಷ ನೀಡಲಾಗುವ ಈ ಪ್ರಶಸ್ತಿಯನ್ನು, ಗಾಂಧೀಜಿಯವರ ಜೀವನ ಮೌಲ್ಯಗಳನ್ನು ಸಮಾಜದಲ್ಲಿ ಹರಡಲು ಮಹತ್ತರ ಕೊಡುಗೆ ನೀಡಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ಪ್ರದಾನ ಮಾಡಲಾಗುತ್ತದೆ. ಪ್ರಶಸ್ತಿಯು ₹5 ಲಕ್ಷ ನಗದು ಮತ್ತು ಫಲಕವನ್ನು ಒಳಗೊಂಡಿದೆ.
- ಗಾಂಧೀಜಿಯವರ ತತ್ವ, ಮೌಲ್ಯ ಹಾಗೂ ಸಮಾಜಮುಖಿ ಚಿಂತನೆಗಳನ್ನು ಜನಮನಗಳಲ್ಲಿ ಬಿತ್ತುವಲ್ಲಿ ಗುಹಾ ಅವರು ಮಹತ್ವದ ಪಾತ್ರವಹಿಸಿದ್ದಾರೆ. ಆದ್ದರಿಂದ ಈ ವರ್ಷದ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ವಾರ್ತಾ ಇಲಾಖೆ ಪ್ರಕಟಣೆ ತಿಳಿಸಿದೆ.
- ಗುಹಾ ಅವರು ಗಾಂಧಿ ಚಿಂತನೆಗಳು, ಭಾರತದ ಸಮಕಾಲೀನ ಇತಿಹಾಸ, ರಾಜಕೀಯ ಚಳವಳಿಗಳು, ಪರಿಸರ ಹೋರಾಟಗಳು ಮತ್ತು ಕ್ರಿಕೆಟ್ ಕುರಿತ ತಮ್ಮ ಅಧ್ಯಯನ ಮತ್ತು ಗ್ರಂಥ ರಚನೆಗಳ ಮೂಲಕ ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ.

## ❖ ಜನ ವಿಶ್ವಾಸ ಮಸೂದೆ: ಆಯ್ಕೆ ಸಮಿತಿಗೆ ತೇಜಸ್ವಿ ಮುಖ್ಯಸ್ಥ

ಸಂದರ್ಭ: 'ಜನ ವಿಶ್ವಾಸ ಮಸೂದೆ 2025' ಅನ್ನು ಪರಿ ಶೀಲಿಸಲು ಹೊಸದಾಗಿ ರಚಿಸಿರುವ ಆಯ್ಕೆ ಸಮಿತಿಯ ಮುಖ್ಯಸ್ಥರನ್ನಾಗಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರನ್ನು ಆಯ್ಕೆ ಮಾಡಲಾಗಿದೆ.

- 24 ಸಂಸದೀಯ ಸ್ಥಾಯಿ ಸಮಿತಿಗಳನ್ನು ಪುನರ್‌ರಚಿಸಲಾಗಿದ್ದು, ಜನ ವಿಶ್ವಾಸ ಮಸೂದೆ ಹಾಗೂ ಆದಾಯ ತೆರಿಗೆ ಮಸೂದೆಗಳಿಗೆ ಹೊಸದಾಗಿ ಆಯ್ಕೆ ಸಮಿತಿಗಳನ್ನು ರಚಿಸಲಾಗಿದೆ.
- 30 ದಿನಗಳವರೆಗೆ ನಿರಂತರವಾಗಿ ಜೈಲಿನಲ್ಲಿರುವ ಪ್ರಧಾನಿ ಸೇರಿದಂತೆ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳನ್ನು ಅಧಿಕಾರದಿಂದ ಕೆಳಗಿಳಿಸುವ ಕೇಂದ್ರ ಸರ್ಕಾರದ ಮಸೂದೆಯ ಕುರಿತು ಜಂಟಿ ಸಂಸದೀಯ ಸಮಿತಿ ರಚಿಸುವ ಬಗ್ಗೆ ಗೊಂದಲ ಮುಂದುವರಿದಿದೆ.

## ❖ ‘ಯುಪಿಐ ವಹಿವಾಟು: ಶುಲ್ಕ ಪ್ರಸ್ತಾವ ಇಲ್ಲ’

ಸಂದರ್ಭ: ಯುಪಿಐ ಆಧಾರಿತ ಪಾವತಿಗಳಿಗೆ ಯಾವುದೇ ಬಗೆಯ ಶುಲ್ಕ ವಿಧಿಸುವ ಪ್ರಸ್ತಾವ ಇಲ್ಲ ಎಂದು ಭಾರತೀಯ ರಿಸರ್ವ್ ಬ್ಯಾಂಕ್‌ನ (ಆರ್‌ಬಿಐ) ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿದ್ದಾರೆ.

- ಕ್ರೆಡಿಟ್ ಕಾರ್ಡ್ ಬಳಸಿ ಮೊಬೈಲ್ ಫೋನ್ ಖರೀದಿ ಮಾಡಿದವರು ಇಎಂಐ ಪಾವತಿಯಲ್ಲಿ ವಿಫಲರಾದರೆ, ಅವರ ಮೊಬೈಲ್ ಫೋನ್‌ಅನ್ನು ದೂರದಿಂದಲೇ ಲಾಕ್ ಮಾಡುವ ವ್ಯವಸ್ಥೆಯನ್ನು ಚಾಲ್ತಿಗೆ ತರಬೇಕು ಎಂಬ ಪ್ರಸ್ತಾವನೆಯು ಸಾಲ ನೀಡುವ ಕಂಪನಿಗಳಿಂದ ಬಂದಿದೆ. ಇದನ್ನು ಆರ್‌ಬಿಐ ಪರಿಶೀಲಿಸುತ್ತಿದೆ ಎಂದು ಗವರ್ನರ್ ಹೇಳಿದ್ದಾರೆ.
- ಯುಪಿಐ ಬಳಸಿ ಮಾಡುವ ಪಾವತಿಗಳ ಮೇಲೆ ಶುಲ್ಕ ವಿಧಿಸುವ ಪ್ರಸ್ತಾವ ಇದೆಯೇ ಎಂಬ ಪ್ರಶ್ನೆಯನ್ನು ಗವರ್ನರ್ ಎದುರು, ಹಣಕಾಸು ನೀತಿ ಸಮಿತಿಯ (ಎಂಪಿಸಿ) ಸಭೆಯ ನಂತರ ಇರಿಸಲಾಗಿತ್ತು.
- ಮೊಬೈಲ್ ಫೋನ್‌ಗಳನ್ನು ದೂರದಿಂದಲೇ ಲಾಕ್ ಮಾಡುವ ಸೌಲಭ್ಯಕ್ಕೆ ಅನುಮತಿ ನೀಡುವುದರ ಒಳಿತು, ಕೆಡುಕುಗಳ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಆರ್‌ಬಿಐ ಡೆಪ್ಯುಟಿ ಗವರ್ನರ್ ಎಂ. ರಾಜೇಶ್ವರ ರಾವ್ ತಿಳಿಸಿದ್ದಾರೆ.
- ‘ಇಲ್ಲಿ ಗ್ರಾಹಕರ ಹಕ್ಕುಗಳು, ಅವರ ಅಗತ್ಯಗಳು, ದತ್ತಾಂಶದ ಸುರಕ್ಷತೆ, ಸಾಲದಾತ ಕಂಪನಿಗಳ ಅಗತ್ಯಗಳು ಇವುಗಳೆಲ್ಲ ವನ್ನು ಪರಿಶೀಲಿಸಿದಾಗ ಒಳಿತು, ಕೆಡುಕುಗಳು ಇರುವುದು ಗೊತ್ತಾಗುತ್ತದೆ. ಹೀಗಾಗಿ ನಾವು ಪ್ರಸ್ತಾವನೆಯನ್ನು ಪರಿಶೀಲಿಸುತ್ತಿದ್ದೇವೆ. ಮುಂದೆ ನಾವು ಇದರ ಬಗ್ಗೆ ನಿಲುವು ತೆಗೆದುಕೊಳ್ಳುತ್ತೇವೆ’ ಎಂದು ರಾವ್ ಹೇಳಿದ್ದಾರೆ.
- ರೆಪೊ ದರವನ್ನು ಮುಂದಿನ ದಿನಗಳಲ್ಲಿ ತಗ್ಗಿಸುವ ಸಾಧ್ಯತೆ ಕುರಿತಾದ ಪ್ರಶ್ನೆಗೆ ಗವರ್ನರ್ ಮಲ್ಹೋತ್ರಾ ಅವರು, ಹಣ ದುಬ್ಬರ ಪ್ರಮಾಣವು ಗಣನೀಯವಾಗಿ ಕಡಿಮೆ ಆಗಿರುವ ಕಾರಣ ಮುಂದೆ ಹಣ ಕಾಸಿನ ನಿಲುವನ್ನು ಇನ್ನಷ್ಟು ಸಡಿಲಗೊಳಿಸಲು ಅವಕಾಶ ಇದೆ ಎಂದು ಉತ್ತರಿಸಿದ್ದಾರೆ.

**ಬೆಳವಣಿಗೆ ಅಂದಾಜು ಪರಿಷ್ಕರಣೆ:**

- ಪ್ರಸಕ್ತ ಹಣಕಾಸು ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಪ್ರಮಾಣವು ಶೇ 6.8ಕ್ಕೆ ಹೆಚ್ಚಬಹುದು ಎಂದು ಆರ್‌ಬಿಐ ಅಂದಾಜು ಮಾಡಿದೆ. ಅಲ್ಲದೆ, ಇಡೀ ವರ್ಷದಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣವು ಶೇ 2.6ಕ್ಕೆ ತಗ್ಗಬಹುದು ಎಂದು ಕೂಡ ಅದು ನಿರೀಕ್ಷಿಸಿದೆ.

Rajkumar IAS Academy

## ❖ ತೆರಿಗೆ ಪಾಲು: ರಾಜ್ಯಕ್ಕೆ ₹3,705 ಕೋಟಿ

ಸಂದರ್ಭ: ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ತೆರಿಗೆ ಪಾಲಿನ ಕಂತಿನ ರೂಪದಲ್ಲಿ ಹೆಚ್ಚುವರಿಯಾಗಿ ₹3,705 ಕೋಟಿ ಬಿಡುಗಡೆ ಮಾಡಿದೆ. ಕರ್ನಾಟಕಕ್ಕೆ ಹೋಲಿಸಿದರೆ ಬಿಜೆಪಿ ಆಡಳಿತವಿರುವ ಉತ್ತರದ ರಾಜ್ಯಗಳಿಗೆ ಬಿಡುಗಡೆಯಾಗಿರುವ ಮೊತ್ತ ಹೆಚ್ಚು ಇದೆ.

- ಕೇಂದ್ರವು 28 ರಾಜ್ಯಗಳಿಗೆ ಒಟ್ಟು ₹1,01,603 ಕೋಟಿ ಬಿಡುಗಡೆ ಗೊಳಿಸಿದೆ. ಅಕ್ಟೋಬರ್ 10ರಂದು ಬಿಡುಗಡೆಯಾಗಲಿರುವ ಸಾಮಾನ್ಯ ಮಾಸಿಕ ಹಂಚಿಕೆಯ ಜೊತೆಗೆ ಹೆಚ್ಚುವರಿಯಾಗಿ ಈ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.


ಯಾವ ರಾಜ್ಯಕ್ಕೆ ಎಷ್ಟು ಮೊತ್ತ

| ರಾಜ್ಯ | ಮೊತ್ತ (₹ಕೋಟಿಗಳಲ್ಲಿ) |
|---|---|
| ಉತ್ತರ ಪ್ರದೇಶ | 18,227 |
| ಬಿಹಾರ | 10,219 |
| ಮಧ್ಯ ಪ್ರದೇಶ | 7,976 |
| ಪಶ್ಚಿಮ ಬಂಗಾಳ | 7,644 |
| ಮಹಾರಾಷ್ಟ್ರ | 6,148 |
| ರಾಜಸ್ಥಾನ | 6,123 |
| ತಮಿಳುನಾಡು | 4,144 |
| ಆಂಧ್ರ ಪ್ರದೇಶ | 4,112 |

ತೆರಿಗೆ ಪಾಲು ಹಂಚಿಕೆ

| ರಾಜ್ಯ | ಶೇಕಡಾವಾರು |
|---|---|
| ಉತ್ತರ ಪ್ರದೇಶ | 17.93 |
| ಬಿಹಾರ | 10.05 |
| ಪಶ್ಚಿಮ ಬಂಗಾಳ | 7.52 |
| ಮಧ್ಯ ಪ್ರದೇಶ | 7.85 |
| ಮಹಾರಾಷ್ಟ್ರ | 6.37 |
| ರಾಜಸ್ಥಾನ | 6.02 |
| ತಮಿಳುನಾಡು | 4.07 |
| ಆಂಧ್ರ ಪ್ರದೇಶ | 4.04 |
| ಕರ್ನಾಟಕ | 3.64 |

ತೆರಿಗೆ ಪಾಲು ಹಂಚಿಕೆ (15ನೇ ಹಣಕಾಸು ಆಯೋಗದ ಶಿಫಾರಸಿನ ಪ್ರಕಾರ)



- 15ನೇ ಹಣಕಾಸು ಆಯೋಗದ ಶಿಫಾರಸಿನ ಪ್ರಕಾರ, ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರ ಸಂಗ್ರಹಿಸುವ ತೆರಿಗೆಯಲ್ಲಿ ಶೇ 41 ಮೊತ್ತವನ್ನು ರಾಜ್ಯ ಸರ್ಕಾರಗಳಿಗೆ 14 ಕಂತುಗಳಲ್ಲಿ ಹಂಚಿಕೆ ಮಾಡಲಾಗುತ್ತದೆ.
- 'ಮುಂಬರುವ ಹಬ್ಬದ ಋತುವಿನ ದೃಷ್ಟಿಯಿಂದ ಮತ್ತು ರಾಜ್ಯ ಸರ್ಕಾರಗಳಿಗೆ ಅಭಿವೃದ್ಧಿ ಹಾಗೂ ಬಂಡವಾಳ ವೆಚ್ಚಕ್ಕೆ ಹೆಚ್ಚಿನ ಹಣ ತೊಡಗಿಸಲು ಅನುಕೂಲ ಮಾಡಲು ಈ ಕಂತು ಬಿಡುಗಡೆ ಗೊಳಿಸಲಾಗಿದೆ' ಎಂದು ಹಣಕಾಸು ಸಚಿವಾಲಯದ ಪ್ರಕಟಣೆ ತಿಳಿಸಿದೆ.

## ❖ 'ಜನನ –ಮರಣ ದತ್ತಾಂಶ ಜೋಡಿಸಿ'

ಸಂದರ್ಭ: ಜನನ ಮತ್ತು ಮರಣ ನೋಂದಣಿಯ ದತ್ತಾಂಶವನ್ನು ಮತದಾರರ ಪಟ್ಟಿಯೊಂದಿಗೆ ಜೋಡಣೆ ಮಾಡಿದರೆ, ಮೃತಪಟ್ಟ ವ್ಯಕ್ತಿಗಳ ಹೆಸರು ಪಟ್ಟಿಯಲ್ಲಿ ಉಳಿದುಕೊಳ್ಳುವುದನ್ನು ತಪ್ಪಿಸಬಹುದು ಎಂದು ಚುನಾವಣಾ ಆಯೋಗ ಹೇಳಿದೆ.

- ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ವೇಳೆ ಹಲವು ವರ್ಷಗಳಿಂದ ಮತದಾರರ ಪಟ್ಟಿಯಲ್ಲಿ ಉಳಿದುಕೊಂಡಿದ್ದ ಮೃತಪಟ್ಟಿರುವ ವ್ಯಕ್ತಿಗಳ ಹೆಸರನ್ನು ತೆಗೆದುಹಾಕ ಲಾಯಿತು. ಎಸ್‌ಐಆರ್ ಜತೆಗೆ ಜನನ–ಮರಣ ನೋಂದಣಿ ದತ್ತಾಂಶವನ್ನು ಚುನಾವಣಾ ವ್ಯವಸ್ಥೆಗೆ ಜೋಡಿಸಿದರೆ ಈ ಲೋಪವನ್ನು ತಪ್ಪಿಸಬಹುದು. ಈ ನಿಟ್ಟಿನಲ್ಲಿ ಬಿಹಾರದ ಎಸ್‌ಐಆರ್ ಉಳಿದ ರಾಜ್ಯಗಳಿಗೂ ಮಾದರಿ ಆಗಲಿದೆ ಎಂದು ಆಯೋಗ ತಿಳಿಸಿದೆ.

## ❖ ಸೋಯಾ, ಶೇಂಗಾ ಖರೀದಿ ಕೇಂದ್ರ ಆರಂಭಿಸಲು ಸೂಚನೆ

ಸಂದರ್ಭ: ಬೆಂಬಲ ಬೆಲೆಯಲ್ಲಿ ಸೋಯಾಬಿನ್ ಮತ್ತು ಶೇಂಗಾ ಖರೀದಿ ಮಾಡಲು ಖರೀದಿ ಕೇಂದ್ರ ಆರಂಭಕ್ಕೆ ತ್ವರಿತವಾಗಿ ಕ್ರಮ ಕೈಗೊಳ್ಳಬೇಕು. ನೋಂದಣಿ ಮತ್ತು ಖರೀದಿ ಪ್ರಕ್ರಿಯೆ ಯನ್ನು ಏಕಕಾಲಕ್ಕೆ ಆರಂಭಿಸಬೇಕು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರು ಜಿಲ್ಲಾ ಸಮಿತಿಗಳಿಗೆ ಸೂಚಿಸಿದ್ದಾರೆ.

- ಸೋಯಾಬಿನ್ ಕ್ವಿಂಟಾಲ್‌ಗೆ ₹5,328 ಹಾಗೂ ಶೇಂಗಾಗೆ ₹7,623 ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಬೀದರ್, ಬೆಳಗಾವಿ, ಧಾರವಾಡ, ಹಾವೇರಿ, ಯಾದಗಿರಿ, ಕಲಬುರಗಿ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸೋಯಾಬಿನ್, ಕೊಪ್ಪಳ, ಧಾರವಾಡ, ಹಾವೇರಿ, ವಿಜಯನಗರ, ಬಳ್ಳಾರಿ, ಚಿತ್ರದುರ್ಗ, ಗದಗ, ಬಾಗಲಕೋಟೆ, ದಾವಣಗೆರೆ, ರಾಯಚೂರು, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಶೇಂಗಾ ಖರೀದಿ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.
- ನಾಫೆಡ್, ಎನ್‌ಸಿಸಿಎಫ್ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳವನ್ನು ಖರೀದಿ ಏಜೆನ್ಸಿಗಳನ್ನಾಗಿ ನೇಮಕ ಮಾಡಲಾಗಿದೆ. ನೋಂದಣಿಗೆ 80 ದಿನ ಹಾಗೂ ಖರೀದಿಗೆ 90 ದಿನ ನಿಗದಿಪಡಿಸಲಾಗಿದೆ ಎಂದು ಶಿವಾನಂದ ಪಾಟೀಲ ಹೇಳಿದ್ದಾರೆ.
- ಅಲ್ಲದೇ ಅಗತ್ಯಕ್ಕೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು. ಖರೀದಿ ಕೇಂದ್ರಗಳಲ್ಲಿ ಲೋಪಗಳಾಗದಂತೆ ಎಚ್ಚರಿಕೆ ವಹಿಸಬೇಕು. ಮಾರ್ಗಸೂಚಿ ಅನ್ವಯ ಖರೀದಿ ಮಾಡಲಾಗುತ್ತಿದೆಯೇ ಎಂಬ ಬಗ್ಗೆ ನಿರಂತರವಾಗಿ ನಿಗಾವಹಿಸಬೇಕು ಎಂದು ಅವರು ಸಂಬಂಧಪಟ್ಟ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

## ❖ ರೈಲು ಉಪಕರಣ: ಭಾರತ ಪ್ರಮುಖ ರಫ್ತುದಾರ

ಸಂದರ್ಭ:ರೈಲು ಬೋಗಿ, ಕೋಚ್‌ಗಳು, ಲೋಕೊಮೋಟಿವ್ಸ್ ಹಾಗೂ ಪ್ರೊಪಲ್ಶನ್ ಸಿಸ್ಟಮ್ ಸೇರಿದಂತೆ ಹಲವು ಉಪಕರಣಗಳ ಜಾಗತಿಕ ರಫ್ತುದಾರನಾಗಿ ಭಾರತವು ವೇಗವಾಗಿ ಹೊರಹೊಮ್ಮುತ್ತಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

- 'ಭಾರತದ ರೈಲ್ವೆ ಉಪಕರಣಗಳು ಹೆಚ್ಚಾಗಿ ಜಾಗತಿಕ ಮಾರುಕಟ್ಟೆಯನ್ನು ತಲುಪುತ್ತಿವೆ. 16 ರಾಷ್ಟ್ರಗಳು ಭಾರತದ ರೈಲು ಉಪಕರಣಗಳನ್ನು ಬಳಸುತ್ತಿವೆ. ಉತ್ಪನ್ನಗಳ ವಿನ್ಯಾಸ, ಅಭಿವೃದ್ಧಿ ಹಾಗೂ ಪೂರೈಕೆಯೆಡೆಗೆ ಭಾರತದ ಬದ್ಧತೆಯನ್ನು ತೋರಿಸುತ್ತದೆ' ಎಂದು ಅದು ಹೇಳಿದೆ.



- 'ಆಸ್ಟ್ರೇಲಿಯಾ, ಕೆನಡಾ, ರಷ್ಯಾ, ಸೌದಿ ಅರೇಬಿಯಾ, ಫ್ರಾನ್ಸ್, ಮೆಕ್ಸಿಕೊ, ರೊಮೇನಿಯಾ, ಸ್ಪೇನ್, ಜರ್ಮನಿ, ಇಟಲಿ, ಶ್ರೀಲಂಕಾ, ಮ್ಯಾನ್ಮಾರ್, ಬಾಂಗ್ಲಾದೇಶ ಸೇರಿದಂತೆ ಅನೇಕ ರಾಷ್ಟ್ರಗಳು ಭಾರತದ ರೈಲು ಉಪಕರಣಗಳನ್ನು ಆಮದು ಮಾಡಿಕೊಳ್ಳುತ್ತಿವೆ. 'ಮೇಕ್ ಇನ್ ಇಂಡಿಯಾ' ಹಾಗೂ 'ಮೇಕ್ ಫಾರ್ ದಿ ವರ್ಲ್ಡ್' ಉಪಕ್ರಮಗಳ ಅಡಿಯಲ್ಲಿ ರಫ್ತು ಮಾಡಲಾಗುತ್ತಿದೆ' ಎಂದು ಇಲಾಖೆ ತಿಳಿಸಿದೆ.
- ಬಿಹಾರದ ಲೋಕೊಮೋಟಿವ್ ಉತ್ಪಾದನಾ ಘಟಕದಿಂದ ಜಿನೆವಾಗೆ ಮೊದಲ ಬಾರಿ ಜೂನ್‌ನಲ್ಲಿ ಲೋಕೊಮೋಟಿವ್ ರಫ್ತು ಮಾಡಲಾಯಿತು. ಇದಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದ್ದರು.

## ❖ ದಾಖಲೆಯ 7 ಪದಕ ಗೆದ್ದ ಶ್ರೀಹರಿ

ಸಂದರ್ಭ: ಭಾರತದ ಈಜು ಪಟುಗಳು ಬುಧವಾರ ಮುಕ್ತಾಯ ಗೊಂಡ 11ನೇ ಏಷ್ಯನ್ ಈಜು ಚಾಂಪಿ ಯನ್ ಷಿಪ್‌ನಲ್ಲಿ ಒಟ್ಟು 13 ಪದಕಗಳನ್ನು ಗೆಲ್ಲುವುದರೊಂದಿಗೆ ಯಶಸ್ವಿಯಾಗಿ ಅಭಿಯಾನ ಮುಗಿಸಿದರು. ಕರ್ನಾಟಕದ ಈಜುತಾರೆ ಶ್ರೀಹರಿ ನಟರಾಜ್ ಅವರು ದಾಖಲೆಯ ಏಳು ಪದಕ ಜಯಿಸಿದರು.

- 24 ವರ್ಷ ವಯಸ್ಸಿನ ಶ್ರೀಹರಿ ಅವರು 100 ಮೀ. ಬ್ಯಾಕ್‌ಸ್ಟ್ರೋಕ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದುಕೊಂಡರು. ಅದರೊಂದಿಗೆ ಕೂಟದ ಇತಿಹಾಸ ದಲ್ಲಿ ಹೆಚ್ಚು (7) ಪದಕ ಗೆದ್ದ ಭಾರತದ ಈಜುಪಟು ಎಂಬ ಗೌರವಕ್ಕೂ ಭಾಜನರಾದರು. ಅವರು 55.23 ಸೆಕೆಂಡುಗಳಲ್ಲಿ ಗುರಿ ತಲುಪಿದರು.
- ಚೀನಾದ ಗುಕೈಲೈ ವಾಂಗ್ (54.27 ಸೆ.) ಮತ್ತು ತೈವಾನ್‌ನ ಲು ಲುನ್ ಶುವಾಂಗ್ (54.45 ಸೆ.) ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಪದಕ ಗೆದ್ದರು. ಸ್ಪರ್ಧೆಯಲ್ಲಿದ್ದ ಭಾರತದ ಮತ್ತೊಬ್ಬ ಈಜುಪಟು ರಿಷಭ್ ದಾಸ್ ನಾಲ್ಕನೇ ಸ್ಥಾನ ಪಡೆಯಲಷ್ಟೇ ಶಕ್ತರಾದರು.
- ಪುರುಷರ 4x100 ಮೀ. ಫ್ರೀಸ್ಟೈಲ್ ರಿಲೆ ಸ್ಪರ್ಧೆಯಲ್ಲಿ ಶ್ರೀಹರಿ, ಆಕಾಶ್ ಮಣಿ, ಥಾಮಸ್ ದೊರೈ ಹಾಗೂ ರೋಹಿತ್ ಬೆನೆಡಿಕ್ಟನ್ ಅವರನ್ನೊಳಗೊಂಡ ಭಾರತ ತಂಡವು (3ನಿ.21.49ಸೆ.) ಕಂಚು ಜಯಿಸಿತು. ಚೀನಾ (3ನಿ.20.24ಸೆ.) ಚಿನ್ನ ಗೆದ್ದರೆ, ಬೆಳ್ಳಿ ಪದಕವು ತೈವಾನ್ (3ನಿ.20.59ಸೆ.) ಪಾಲಾಯಿತು.
- ಮಹಿಳೆಯರ 400 ಮೀ. ಫ್ರೀಸ್ಟೈಲ್ ಸ್ಪರ್ಧೆಯಲ್ಲಿ ಭವ್ಯಾ ಸಚದೇವ ಅವರು (4ನಿ. 26.89ಸೆ.) ಕಂಚಿನ ಪದಕ ಜಯಿಸಿದರು. ಇದು ಮಹಿಳೆಯರ ವಿಭಾಗದಲ್ಲಿ ಭಾರತಕ್ಕೆ ಸಿಕ್ಕ ಮೊದಲ ಪದಕ. ಜಪಾನ್‌ನ ಹರುನೊ ತನಿಮೊಟೊ (4ನಿ.16.39ಸೆ.) ಚಿನ್ನ ಗೆದ್ದರೆ, ವಿಯೆಟ್ನಾಂನ ಖಾ ನಿ ಗುಯೆನ್ (4ನಿ. 25.50ಸೆ.) ಬೆಳ್ಳಿ ಪದಕ ತಮ್ಮದಾಗಿಸಿಕೊಂಡರು.
- ಪುರುಷರ 200 ಮೀ. ಬಟರ್‌ಫ್ಲೈ ಸ್ಪರ್ಧೆಯಲ್ಲಿ ಸಜನ್ ಪ್ರಕಾಶ್ (1ನಿ.57.90ಸೆ.) ಅವರು ಕಂಚಿನ ಪದಕಕ್ಕೆ ಮುತ್ತಿಕ್ಕಿದರು. ಕೂಟದಲ್ಲಿ 4 ಬೆಳ್ಳಿ ಹಾಗೂ 9 ಕಂಚು ಗೆದ್ದ ಭಾರತ, ಪದಕ ಪಟ್ಟಿಯಲ್ಲಿ 9ನೇ ಸ್ಥಾನ ಪಡೆಯಿತು. 38 ಚಿನ್ನ ಸೇರಿ ಒಟ್ಟು 49 ಪದಕಗಳನ್ನು ಗೆದ್ದ ಚೀನಾ ಅಗ್ರಸ್ಥಾನ ತನ್ನದಾಗಿಸಿಕೊಂಡಿತು.

## ❖ ಮುಕೇಶ್‌ಗೆ ಸ್ವರ್ಣ

ಸಂದರ್ಭ: ಉದಯೋನ್ಮುಖ ಶೂಟರ್ ಮುಕೇಶ್ ನೇಲವಲ್ಲಿ ಅವರು ಇಲ್ಲಿ ಮುಕ್ತಾಯಗೊಂಡ ಐಎಸ್‌ಎಸ್ ಎಫ್ ಜೂನಿಯರ್ ವಿಶ್ವಕಪ್ ಶೂಟಿಂಗ್ ಚಾಂಪಿಯನ್ ಷಿಪ್‌ನಲ್ಲಿ ಪುರುಷರ 25 ಮೀ. ಪಿಸ್ತೂಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದುಕೊಂಡರು. ಇದೇ ಸ್ಪರ್ಧೆಯ ಮಹಿಳೆಯರ ವಿಭಾಗದಲ್ಲಿ ತೇಜಸ್ವಿನಿ ಸಿಂಗ್ ಅವರು ಬೆಳ್ಳಿ ಜಯಿಸಿದರು.

Dr. Rajkumar IAS Academy

- ಜೂನಿಯರ್ ಪುರುಷರ 25 ಮೀ. ಪಿಸ್ತೂಲ್ ಸ್ಪರ್ಧೆಯಲ್ಲಿ ಮುಕೇಶ್ ಅವರು 585 ಸ್ಕೋರ್‌ನೊಡನೆ ಅಗ್ರಸ್ಥಾನ ಪಡೆದರು. ವೈಯಕ್ತಿಕ ತಟಸ್ಥ ಅಥ್ಲೀಟ್ (ಎಐಎನ್) ಅಲೆಕ್ಸಾಂಡರ್ ಕೊವಲೆವ್ (577) ರಜತ ಗೆದ್ದರೆ, ಭಾರತದ ಮತ್ತೊಬ್ಬ ಸ್ಪರ್ಧಿ ಸಾಹಿಲ್ ಚೌಧರಿ (573) ಕಂಚಿನ ಪದಕ ತಮ್ಮದಾಗಿಸಿಕೊಂಡರು.
- ಒಲಿಂಪಿಕ್ಸ್ ಸ್ಪರ್ಧೆಗಳಲ್ಲಿ 19 ಪದಕ ಗಳನ್ನು (6 ಚಿನ್ನ, 8 ಬೆಳ್ಳಿ ಹಾಗೂ 5 ಕಂಚು) ಗೆದ್ದ ಭಾರತ ತಂಡ ಪದಕ ಪಟ್ಟಿ ಯಲ್ಲಿ ಅಗ್ರಸ್ಥಾನ ಪಡೆಯಿತು. ಎಐಎನ್ ಸ್ಪರ್ಧಿಗಳು 10 ಪದಕಗಳೊಂದಿಗೆ (4 ಚಿನ್ನ, 2 ಬೆಳ್ಳಿ ಹಾಗೂ 4 ಕಂಚು) ಎರಡನೇ ಸ್ಥಾನ ಪಡೆದರು.

IAS/KAS Academy



## ❖ ರಕ್ಷಿತ್, ಅರ್ಚನಾ ಅತ್ಯುತ್ತಮ ನಟ-ನಟಿ

ಸಂದರ್ಭ: 2021ನೇ ಸಾಲಿನ ಕರ್ನಾಟಕ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿ ಶುಕ್ರವಾರ ಪ್ರಕಟಗೊಂಡಿದ್ದು, ರಕ್ಷಿತ್ ಶೆಟ್ಟಿ ಅವರು 'ಚಾರ್ಲಿ 777' ಚಿತ್ರಕ್ಕಾಗಿ ಅತ್ಯುತ್ತಮ ನಟ ಪ್ರಶಸ್ತಿಗೆ ಭಾಜನರಾಗಿದ್ದು, ಅರ್ಚನಾ ಜೋಯಿಸ್ 'ಮ್ಯೂಟ್' ಚಿತ್ರಕ್ಕಾಗಿ ಅತ್ಯುತ್ತಮ ನಟಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

- ದಿವಂಗತ ಪುನೀತ್ ರಾಜ್‌ಕುಮಾರ್ ನಟನೆಯ 'ಯುವರತ್ನ' ಅತ್ಯುತ್ತಮ ಮನರಂಜನಾ ಚಿತ್ರ' ಎಂಬ ಹಿರಿಮೆಗೆ ಪಾತ್ರವಾಗಿದೆ.
- ರಘು ಕೆ.ಎಂ ನಿರ್ದೇಶನದ 'ದೊಡ್ಡಹಟ್ಟಿ ಬೋರೇಗೌಡ' ಮೊದಲನೇ ಅತ್ಯುತ್ತಮ ಚಿತ್ರವಾಗಿದ್ದು, ಕಿರಣ್ ರಾಜ್ ನಿರ್ದೇಶನದ 'ಚಾರ್ಲಿ 777' ಎರಡನೇ ಅತ್ಯುತ್ತಮ ಚಿತ್ರವಾಗಿ ಹೊರಹೊಮ್ಮಿದೆ.
- ಹೃದಯ ಶಿವ ನಿರ್ದೇಶನದ 'ಬಿಸಿಲು ಕುದುರೆ' ಮೂರನೇ ಅತ್ಯುತ್ತಮ ಚಿತ್ರವಾಗಿದೆ. ಕೃಷ್ಣಮೂರ್ತಿ ಚಮರಂ ನಿರ್ದೇಶನದ 'ಭಾರತೀಯ ಪ್ರಜೆಗಳಾದ ನಾವು' ಅತ್ಯುತ್ತಮ ಸಾಮಾಜಿಕ ಕಳಕಳಿಯ ಚಿತ್ರವಾಗಿ ಆಯ್ಕೆಗೊಂಡಿದೆ.



### 2021ನೇ ಸಾಲಿನ ರಾಜ್ಯ ಚಲನಚಿತ್ರ ಪ್ರಶಸ್ತಿ ಯಾರು ಯಾರಿಗೆ?

- **ಮೊದಲನೇ ಅತ್ಯುತ್ತಮ ಚಿತ್ರ: ದೊಡ್ಡಹಟ್ಟಿ ಬೋರೇಗೌಡ**
  ನಿರ್ಮಾಪಕ: ಲೋಕೇಶ ಕೆ.ಎಂ; ನಿರ್ದೇಶಕ: ರಘು ಕೆ.ಎಂ
- **ಎರಡನೇ ಅತ್ಯುತ್ತಮ ಚಿತ್ರ : ಚಾರ್ಲಿ 777**
  ನಿರ್ಮಾಪಕ: ರಕ್ಷಿತ್ ಶೆಟ್ಟಿ; ನಿರ್ದೇಶಕ: ಕಿರಣ್ ರಾಜ್ ಕೆ.
- **ಮೂರನೇ ಅತ್ಯುತ್ತಮ ಚಿತ್ರ: ಬಿಸಿಲು ಕುದುರೆ**
  ನಿರ್ಮಾಪಕ ಹಾಗೂ ನಿರ್ದೇಶಕ: ಹೃದಯ ಶಿವ
- **ವಿಶೇಷ ಸಾಮಾಜಿಕ ಕಾಳಜಿಯ ಚಿತ್ರ: ಭಾರತೀಯ ಪ್ರಜೆಗಳಾದ ನಾವು**
  ನಿರ್ಮಾಪಕ ಹಾಗೂ ನಿರ್ದೇಶಕ: ಕೃಷ್ಣಮೂರ್ತಿ ಚಮರಂ
- **ಅತ್ಯುತ್ತಮ ಜನಪ್ರಿಯ ಮನರಂಜನಾ ಚಿತ್ರ: ಯುವರತ್ನ**
  ನಿರ್ಮಾಪಕ: ವಿಜಯ್ ಕಿರಗಂದೂರು; ನಿರ್ದೇಶಕ: ಸಂತೋಷ್ ಆನಂದ್ ರಾಮ್
- **ಅತ್ಯುತ್ತಮ ಮಕ್ಕಳ ಚಿತ್ರ: ಕೇಕ್**
  ನಿರ್ಮಾಪಕ: ಪರೀಕ್ಷಿತ್ ಕೆ.ಐ; ನಿರ್ದೇಶಕ–ಕಿಶೋರ್ ಮೂಡಬಿದ್ರಿ
- **ನಿರ್ದೇಶಕರ ಪ್ರಥಮ ನಿರ್ದೇಶನದ ಅತ್ಯುತ್ತಮ ಚಿತ್ರ: ಬಡವ ರಾಸ್ಕಲ್**
  ನಿರ್ಮಾಪಕ: 'ಡಾಲಿ' ಧನಂಜಯ ಕೆ.ಎ; ನಿರ್ದೇಶಕ: ಶಂಕರ್ ಎಚ್. (ಶಂಕರ್ ಗುರು)
- **ಅತ್ಯುತ್ತಮ ಕರ್ನಾಟಕ ಪ್ರಾದೇಶಿಕ ಭಾಷಾ ಚಿತ್ರ: ನಾಡ ಪೆದ ಆಶಾ (ಕೊಡವ)**
  ನಿರ್ಮಾಪಕಿ: ಹರಿಣಿ ಜೆ.ಸಿ; ನಿರ್ದೇಶಕ: ಪ್ರಕಾಶ್ ಕಾರ್ಯಪ್ಪ
- **ಅತ್ಯುತ್ತಮ ನಟ: ರಕ್ಷಿತ್ ಶೆಟ್ಟಿ; ಚಿತ್ರ: ಚಾರ್ಲಿ 777**
- **ಅತ್ಯುತ್ತಮ ನಟಿ: ಅರ್ಚನಾ ಜೋಯಿಸ್; ಚಿತ್ರ: ಮ್ಯೂಟ್**
- **ಅತ್ಯುತ್ತಮ ಪೋಷಕ ನಟ: ಪ್ರಮೋದ್; ಚಿತ್ರ: ರತ್ನನ್ ಪ್ರಪಂಚ**
- **ಅತ್ಯುತ್ತಮ ಪೋಷಕ ನಟಿ: ಉಮಾಶ್ರೀ; ಚಿತ್ರ: ರತ್ನನ್ ಪ್ರಪಂಚ**
- **ಅತ್ಯುತ್ತಮ ಕತೆ: ಮಂಜುನಾಥ್ ಮುನಿಯಪ್ಪ; ಚಿತ್ರ : 9 ಸುಳ್ಳು ಕಥೆಗಳು**
- **ಅತ್ಯುತ್ತಮ ಚಿತ್ರಕತೆ: ರಘು ಕೆ. ಎಂ; ಚಿತ್ರ : ದೊಡ್ಡಹಟ್ಟಿ ಬೋರೇಗೌಡ**
- **ಅತ್ಯುತ್ತಮ ಸಂಭಾಷಣೆ: ಬರಗೂರು ರಾಮಚಂದ್ರಪ್ಪ ಚಿತ್ರ : ತಾಯಿ ಕಸ್ತೂರ್ ಗಾಂಧಿ**
- **ಅತ್ಯುತ್ತಮ ಛಾಯಾಗ್ರಹಣ: ಭುವನೇಶ್ ಪ್ರಭು; ಚಿತ್ರ: ಆಮ್ಮೆ ಸಂಸಾರ (ಕೊಂಕಣಿ)**
- **ಅತ್ಯುತ್ತಮ ಸಂಗೀತ ನಿರ್ದೇಶನ: ಇಮ್ತಿಯಾಜ್ ಸುಲ್ತಾನ್; ಚಿತ್ರ: ಬಿಸಿಲು ಕುದುರೆ**
- **ಅತ್ಯುತ್ತಮ ಸಂಕಲನ: ಪ್ರತೀಕ್ ಶೆಟ್ಟಿ; ಚಿತ್ರ : ಚಾರ್ಲಿ 777**
- **ಅತ್ಯುತ್ತಮ ಬಾಲ ನಟ: ಮಾಸ್ಟರ್ ಅತೀಶ್ ಶೆಟ್ಟಿ; ಚಿತ್ರ: ಕೇಕ್**
- **ಅತ್ಯುತ್ತಮ ಬಾಲ ನಟಿ: ಬೇಬಿ ಭೈರವಿ**
- **ಅತ್ಯುತ್ತಮ ಕಲಾನಿರ್ದೇಶನ: ರವಿ ಸಂತೇಹಕ್ಲು**
- **ಅತ್ಯುತ್ತಮ ಹಿನ್ನೆಲೆ ಗಾಯಕ: ಅನೀಶ್ ಕೇಶವ್ ರಾವ್**
- **ಅತ್ಯುತ್ತಮ ಹಿನ್ನೆಲೆ ಗಾಯಕಿ: ಸಹನಾ ಎಂ. ಭಾರದ್ವಾಜ್**
- **ಅತ್ಯುತ್ತಮ ಗೀತ ರಚನೆ: ನಾಗಾರ್ಜುನ ಶರ್ಮಾ**
- ತೀರ್ಪುಗಾರರ ವಿಶೇಷ
- ಪ್ರಶಸ್ತಿ: ಚಿತ್ರ: ಭೈರವಿ
- ವಸ್ತ್ರವಿನ್ಯಾಸ: ಯೋಗಿ ಜಿ ರಾಜು
- ಪ್ರಸಾಧನ: ಶಿವಕುಮಾರ್
- ಅತ್ಯುತ್ತಮ ನಿರ್ಮಾಣ ನಿರ್ವಾಹಕ: ಶಿವಕುಮಾರ್ ಎಸ್.

- 'ರತ್ನನ್ ಪ್ರಪಂಚ' ಚಿತ್ರಕ್ಕಾಗಿ ಪ್ರಮೋದ್ ಅತ್ಯುತ್ತಮ ಪೋಷಕ ನಟ ಹಾಗೂ ಉಮಾಶ್ರೀ ಅತ್ಯುತ್ತಮ ಪೋಷಕ ನಟಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪತ್ರಕರ್ತ ಸದಾಶಿವ ಶೆಣೈ ಅಧ್ಯಕ್ಷತೆಯಲ್ಲಿ ಆಯ್ಕೆ ಸಲಹಾ ಸಮಿತಿ ರಚಿಸಲಾಗಿತ್ತು.

## ❖ ಕೆಎಸ್‌ಆರ್‌ಟಿಸಿ 'ಶಕ್ತಿ' ವಿಶ್ವದಾಖಲೆ

ಸಂದರ್ಭ: ರಾಜ್ಯ ಸರ್ಕಾರದ ಮಹಿಳಾ ಸಬಲೀಕರಣ ಯೋಜನೆಯಾದ 'ಶಕ್ತಿ' ಯೋಜನೆಯಡಿ ಕೆಎಸ್‌ಆರ್ ಟಿಸಿ ಸೇರಿದಂತೆ ನಾಲ್ಕು ನಿಗಮಗಳ ಬಸ್‌ಗಳಲ್ಲಿ ಮಹಿಳೆಯರು 500 ಕೋಟಿ ಬಾರಿ ಉಚಿತವಾಗಿ ಪ್ರಯಾಣ ಮಾಡಿರುವುದು ವಿಶ್ವದಾಖಲೆಗೆ ಸೇರ್ಪಡೆಯಾಗಿದೆ.

- ಇತ್ತೀಚೆಗಷ್ಟೇ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್‌ಗೆ ಸೇರ್ಪಡೆಯಾಗಿದ್ದ ಉಚಿತ ಪ್ರಯಾಣವು ಈಗ ಇಂಟರ್ ನ್ಯಾಷನಲ್‌ಬುಕ್ ಆಫ್ ರೆಕಾರ್ಡ್‌ನಲ್ಲಿ ವರ್ಲ್ಡ್ ರೆಕಾರ್ಡ್ ಆಫ್ ಎಕ್ಸಲೆನ್ಸ್ ಆಗಿ ದಾಖಲಾಗಿದೆ.
- ನಿಗಮಗಳ ಅಧಿಕಾರಿಗಳು, ನೌಕರರ ಪರಿಶ್ರಮ ಮತ್ತು ಪ್ರಯಾಣಿಕರ ಬೆಂಬಲದಿಂದ ಈ ಸಾಧನೆ ಆಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

## ❖ 'ಚಿನ್ನದ ಬೆಲೆ ಅನಿಶ್ಚಿತತೆಯ ಮಾಪಕ'

ಸಂದರ್ಭ: 'ಕಚ್ಚಾ ತೈಲದ ಬೆಲೆಯು ತೀರಾ ಈಚಿನವರೆಗೆ ಜಾಗತಿಕ ಅನಿಶ್ಚಿತತೆಗಳ ಮಾಪಕದಂತೆ ಕೆಲಸ ಮಾಡು ತ್ತಿತ್ತು. ಈಗ ಆ ಸ್ಥಾನವನ್ನು ಚಿನ್ನದ ಬೆಲೆಯು ಆಕ್ರಮಿಸಿಕೊಂಡಿರುವಂತೆ ಕಾಣುತ್ತಿದೆ' ಎಂದು ಭಾರತೀಯ ರಿಸರ್ವ್ ಬ್ಯಾಂಕ್‌ನ (ಆರ್‌ಬಿಐ) ಗವರ್ನರ್ ಸಂಜಯ್ ಮಲ್ಹೋತ್ರಾ ಅವರು ಹೇಳಿದ್ದಾರೆ.

- ವಿತ್ತೀಯ ದೃಷ್ಟಿಯಿಂದ ಈ ಸಂದರ್ಭದಲ್ಲಿ ಜಗತ್ತಿನ ಬಹುತೇಕ ದೇಶಗಳು ಒತ್ತಡಕ್ಕೆ ಸಿಲುಕಿವೆ. ಇಂದಿನ ವ್ಯಾಪಾರ ನೀತಿಗಳು ಕೆಲವು ದೇಶಗಳ ಆರ್ಥಿಕ ಬೆಳವಣಿಗೆಯನ್ನು ಹಾಳು ಮಾಡಬಹುದು. ಜಾಗತಿಕ ಮಟ್ಟದಲ್ಲಿ ಷೇರುಪೇಟೆಗಳಲ್ಲಿ ಒಂದಿಷ್ಟು ಕುಸಿತ ಎದುರಾಗಬಹುದು ಎಂದು ಮಲ್ಹೋತ್ರಾ ಅವರು ಎಚ್ಚರಿಕೆ ನೀಡಿದ್ದಾರೆ.
- ರೆಪೊ ದರವನ್ನು ಶೇಕಡ 5.5ರ ಮಟ್ಟದಲ್ಲಿ ಕಾಯ್ದುಕೊಳ್ಳುವ ತೀರ್ಮಾನವನ್ನು ಬುಧವಾರ ತೆಗೆದುಕೊಂಡ ಸಂದರ್ಭದಲ್ಲಿ ಆರ್‌ಬಿಐ, ಜಾಗತಿಕ ಅರ್ಥ ವ್ಯವಸ್ಥೆಯು ನಿರೀಕ್ಷೆಗಿಂತ ಹೆಚ್ಚಿನ ಮಟ್ಟದಲ್ಲಿ ಗಟ್ಟಿತನವನ್ನು ತೋರಿಸಿದೆಯಾದರೂ, ಮುನ್ನೋಟವು ಅಷ್ಟೊಂದು ಸ್ಪಷ್ಟವಾಗಿಲ್ಲ ಎಂದು ಹೇಳಿದೆ.
- 'ಹಿಂದಿನ ದಶಕದಲ್ಲಿ ಜಾಗತಿಕ ಮಟ್ಟದ ಬಿಕ್ಕಟ್ಟುಗಳು ಕಚ್ಚಾ ತೈಲ ಬೆಲೆ ಏರಿಕೆಗೆ ಕಾರಣವಾಗುತ್ತಿದ್ದವು. ಅಂತಹ ಬಿಕ್ಕಟ್ಟುಗಳು ಈಗ ಎದುರಾಗಿದ್ದರೂ, ಕಚ್ಚಾ ತೈಲದ ಬೆಲೆಯು ಒಂದು ಹಂತದಲ್ಲಿ ಮಾತ್ರ ಏರಿಳಿತ ಕಾಣುತ್ತಿದೆ. ದೇಶದ ಒಟ್ಟು ಜಿಡಿಪಿಯಲ್ಲಿ ಕಚ್ಚಾ ತೈಲದ ಮಹತ್ವವು ಕಡಿಮೆ ಆಗಿರುವುದು ಇದಕ್ಕೆ ಕಾರಣ ಆಗಿರಬಹುದು. ಇದು ಭಾರತದಲ್ಲಿ ಮಾತ್ರವಲ್ಲದೆ, ವಿಶ್ವದ ಇತರೆಡೆಗಳಲ್ಲಿಯೂ ಆಗಿದೆ' ಎಂದು ಮಲ್ಹೋತ್ರಾ ಹೇಳಿದ್ದಾರೆ. 'ಬಹುಶಃ ಈಗ ಚಿನ್ನದ ಬೆಲೆಯು ಜಾಗತಿಕ ಅನಿಶ್ಚಿತತೆಯ ಮಾಪಕದಂತೆ ಕೆಲಸ ಮಾಡುತ್ತಿದೆ' ಎಂದು ಅವರು ಕೌಟಿಲ್ಯ ಅರ್ಥಶಾಸ್ತ್ರ ಸಮಾವೇಶದಲ್ಲಿ ಹೇಳಿದ್ದಾರೆ.
- ತಂತ್ರಜ್ಞಾನ ವಲಯದ ಕೆಲವು ಷೇರುಗಳ ಬೆಲೆಯು ಜಾಗತಿಕ ಷೇರುಪೇಟೆ ಗಳ ಒಟ್ಟಾರೆ ಏರಿಕೆಗೆ ಕಾರಣವಾಗಿರುವ ಬಗ್ಗೆ ಅನಿಸಿಕೆ ಹಂಚಿಕೊಂಡ ಅವರು, 'ಷೇರುಪೇಟೆಗಳಲ್ಲಿ ಕುಸಿತವೊಂದು ಎದುರಾಗಬಹುದು' ಎಂದು ಎಚ್ಚರಿಸಿದ್ದಾರೆ.
- ದೇಶದ ಅರ್ಥ ವ್ಯವಸ್ಥೆಯ ಮೂಲಭೂತ ಅಂಶಗಳು ಬಲಿಷ್ಠವಾಗಿ ಇವೆ. ಜಗತ್ತಿನಲ್ಲಿ ಅನಿಶ್ಚಿತತೆ ಇದ್ದರೂ ಭಾರತದಲ್ಲಿ ಸ್ಥಿರತೆ ಇದೆ ಎಂದು ಮಲ್ಹೋತ್ರಾ ಹೇಳಿದ್ದಾರೆ.
- ಹಣದುಬ್ಬರ ಕಡಿಮೆ ಇರುವುದು, ವಿದೇಶಿ ವಿನಿಮಯ ಸಂಗ್ರಹವು ಚೆನ್ನಾಗಿ ಇರುವುದು ಹಾಗೂ ಬ್ಯಾಂಕ್ ಮತ್ತು ಕಾರ್ಪೊರೇಟ್ ಕಂಪನಿಗಳ ಲೆಕ್ಕಪತ್ರವು ಸುಸ್ಥಿತಿಯಲ್ಲಿ ಇರುವುದು ಇದಕ್ಕೆ ಕಾರಣ ಎಂದಿದ್ದಾರೆ.

## ❖ 'ಭಾರತದೊಂದಿಗೆ ವ್ಯಾಪಾರ– ಅಸಮತೋಲನ ಸರಿಪಡಿಸಿ'

ಸಂದರ್ಭ: ಅಧಿಕ ಪ್ರಮಾಣದ ಕಚ್ಚಾತೈಲ ಖರೀದಿಸುತ್ತಿರುವ ಭಾರತದೊಂದಿಗೆ ವ್ಯಾಪಾರ ಅಸಮತೋಲನ ನಿವಾರಿಸುವ ನಿಟ್ಟಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಉತ್ಪನ್ನ ಹಾಗೂ ಔಷಧವನ್ನು ಖರೀದಿಸಲು ಕ್ರಮ ಕೈಗೊಳ್ಳಬೇಕು ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ತನ್ನ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

- ಇದೇ ಡಿಸೆಂಬರ್‌ನಲ್ಲಿ ನಡೆಯುವ ವಾರ್ಷಿಕ ಶೃಂಗಸಭೆಗೆ ಭಾರತಕ್ಕೆ ಭೇಟಿ ನೀಡುವುದನ್ನು ಖಚಿತಪಡಿಸಿದ ಬೆನ್ನಲ್ಲೇ ಪುಟಿನ್ ಈ ಘೋಷಣೆ ಮಾಡಿದ್ದಾರೆ.
- ರಷ್ಯಾ ದಕ್ಷಿಣ ಭಾಗದ ಸೋಚಿ ಪಟ್ಟಣದಲ್ಲಿರುವ 'ಬ್ಲ್ಯಾಕ್ ಸೀ' ರೆಸಾರ್ಟ್‌ನಲ್ಲಿ ಗುರುವಾರ ತಡರಾತ್ರಿ ನಡೆದ ಭಾರತ ಸೇರಿದಂತೆ 140 ದೇಶದ ಭದ್ರತೆ ಹಾಗೂ ಭೌಗೋಳಿಕ ರಾಜಕೀಯ ತಜ್ಞರನ್ನು ಒಳಗೊಂಡ ಅಂತರರಾಷ್ಟ್ರೀಯ ಸಮಾವೇಶದಲ್ಲಿ ಈ ನಿರ್ಧಾರ ಪ್ರಕಟಿಸಿದ್ದಾರೆ.

Dr Rajkumar IAS/KAS Academy

- 'ರಷ್ಯಾದಿಂದ ಕಚ್ಚಾತೈಲ ಖರೀದಿಸುತ್ತಿರುವ ಭಾರತದ ಮೇಲೆ ಅಮೆರಿಕವು ಹೆಚ್ಚಿನ ಸುಂಕ ಹೇರಿದ್ದರಿಂದ ಉಂಟಾದ ನಷ್ಟಕ್ಕೆ ಪ್ರತಿಯಾಗಿ ಅಲ್ಲಿಂದ ಹೆಚ್ಚಿನ ವಸ್ತುಗಳನ್ನು ಖರೀದಿಸುವ ಮೂಲಕ ಸಮತೋಲನಗೊಳಿಸಲಾಗುತ್ತದೆ. ಆ ಮೂಲಕ ಸಾರ್ವಭೌಮ ರಾಷ್ಟ್ರ ಪ್ರತಿಷ್ಠೆಯೂ ಹೆಚ್ಚಲಿದೆ' ಎಂದು ತಿಳಿಸಿದ್ದಾರೆ.
- ರಷ್ಯಾದಿಂದ ಕಚ್ಚಾತೈಲ ಖರೀದಿಸುತ್ತಿರುವ ಭಾರತದ ಮೇಲೆ ಅಮೆರಿಕವು ಶೇ 25ರಷ್ಟು ಹೆಚ್ಚುವರಿ ಸುಂಕ ವಿಧಿಸುತ್ತಿದ್ದು, ಶೇಕಡಾ 50ರಷ್ಟು ತೆರಿಗೆ ವಿಧಿಸಿದಂತಾಗಿದೆ. ಇದರಿಂದ ಭಾರತದಿಂದ ಅಮೆರಿಕಕ್ಕೆ ರಫ್ತು ಮಾಡುವ ವಸ್ತುಗಳ ಮೇಲೆ ತೀವ್ರ ಪರಿಣಾಮ ಬೀರಲಿದೆ.
- ಈ ವಿಚಾರವನ್ನು ಉಲ್ಲೇಖಿಸಿದ ಪುಟಿನ್, 'ವ್ಯಾಪಾರ ಅಸಮತೋಲನ ತೆಗೆದುಹಾಕುವ ನಿಟ್ಟಿನಲ್ಲಿ ಭಾರತದ ಕೃಷಿ, ಔಷಧಗಳನ್ನು ಹೆಚ್ಚಿನ ಸಂಖ್ಯೆಯನ್ನು ಖರೀದಿಸಲಾಗುತ್ತದೆ. ಔಷಧ, ಔಷಧ ಉತ್ಪನ್ನಗಳ ವಿಚಾರದಲ್ಲಿ ನಮ್ಮ ಕಡೆಯಿಂದ ಕ್ರಮ ಕೈಗೊಳ್ಳಬಹುದು' ಎಂದು ತಿಳಿಸಿದ್ದಾರೆ.

## ❖ ಮೊದಲ ಮಹಿಳಾ ಆರ್ಚ್ ಬಿಷಪ್ ಸೆರಾ

ಸಂದರ್ಭ: ಮೊಟ್ಟ ಮೊದಲ ಬಾರಿಗೆ ಮಹಿಳಾ ಆರ್ಚ್‌ಬಿಷಪ್ ನೇಮಕ ಮಾಡುವ ಮೂಲಕ ಚರ್ಚ್ ಆಫ್ ಇಂಗ್ಲೆಂಡ್ ಇತಿಹಾಸ ನಿರ್ಮಾಣ ಮಾಡಿದೆ. ಕ್ಯಾಂಟರ್‌ಬರಿ ಚರ್ಚ್‌ನ ಆರ್ಚ್‌ಬಿಷಪ್ ಆಗಿ ಸೆರಾ ಮುಲ್ಲಲಿ ಅವರನ್ನು ಶುಕ್ರವಾರ ಘೋಷಣೆ ಮಾಡಲಾಗಿದೆ.



- ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪಕ್ಕೆ ಗುರಿಯಾಗಿ ರೆವರೆಂಡ್ ಜಸ್ಟಿನ್ ವಿಲ್ಬೆ ಅವರು ಕಳೆದ ವರ್ಷ ರಾಜೀನಾಮೆ ನೀಡಿದ್ದರಿಂದ ಈ ಸ್ಥಾನ ತೆರವಾಗಿತ್ತು. ಸೆರಾ ಅವರು 2018ರಿಂದ ಬಿಷಪ್ ಆಗಿದ್ದರು.
- 106ನೇ ಆರ್ಚ್‌ಬಿಷಪ್ ಆಗಿ ಸೆರಾ ಅವರ ನೇಮಕಕ್ಕೆ ಮೂರನೇ ಕಿಂಗ್ ಚಾರ್ಲ್ಸ್ ಅಧಿಕೃತ ಒಪ್ಪಿಗೆ ನೀಡಿದ್ದರು. ಶುಶ್ರೂಷಕಿಯಾಗಿದ್ದ ಸೆರಾ ಅವರ ನೇಮಕವನ್ನು ಇಂಗ್ಲೆಂಡ್ ಪ್ರಧಾನಿ ಕೀರ್ ಸ್ಟಾರ್ಮರ್ ಸ್ವಾಗತಿಸಿದ್ದಾರೆ.
- 63 ವರ್ಷದ ಸೆರಾ 106ನೇ ಆರ್ಚ್‌ಬಿಷಪ್ ಆಗಲಿದ್ದಾರೆ. ಮುಂದಿನ ವರ್ಷ ಜನವರಿಯಲ್ಲಿ ಅವರ ನೇಮಕವನ್ನು ದೃಢೀಕರಿಸಲಾಗುತ್ತದೆ.

## ❖ ಶಾಂತಿ ಒಪ್ಪಂದಕ್ಕೆ ಸಹಿ: ಹಮಾಸ್‌ಗೆ ಗಡುವು

ಸಂದರ್ಭ: ಗಾಜಾದಲ್ಲಿ ಯುದ್ಧ ಕೊನೆಗೊಳಿಸುವ ಉದ್ದೇಶದಿಂದ ಸಿದ್ಧಪಡಿಸಿರುವ 20 ಅಂಶಗಳ ಯೋಜನೆಗೆ, ಅಮೆರಿಕ ಕಾಲಮಾನದ ಪ್ರಕಾರ ಭಾನುವಾರ ಸಂಜೆ 6 ಗಂಟೆಯೊಳಗೆ (ಭಾರತೀಯ ಕಾಲಮಾನ ನಸುಕಿನ ಜಾವ 3.30) ಸಹಿ ಹಾಕಬೇಕು ಎಂದು ಹಮಾಸ್ ಸಂಘಟನೆಗೆ ಅಮೆರಿಕ ಅಧ್ಯಕ್ಷ ಟ್ರಂಪ್ ತಾಕೀತು ಮಾಡಿದ್ದಾರೆ.

- 'ಇದು ಕೊನೆಯ ಅವಕಾಶ. ಒಂದು ವೇಳೆ ಹಮಾಸ್ ಈ ಒಪ್ಪಂದಕ್ಕೆ ಸಹಿ ಹಾಕದಿ ದ್ದರೆ ಹಿಂದೆಂದೂ ಕಂಡಿರದಂತಹ ಭೀಕರ ದಾಳಿಗಳನ್ನು ಹಮಾಸ್ ಎದುರಿಸಬೇಕಾಗುತ್ತದೆ' ಎಂದೂ ಎಚ್ಚರಿಕೆ ನೀಡಿದ್ದಾರೆ.
- ಈ ಕುರಿತು ಅವರು ಪೋಸ್ಟ್ ಮಾಡಿದ್ದು, 'ಅಮಾಯಕ ಪ್ಯಾಲೆಸ್ಟೀನಿಯನ್ನರು ಕೂಡಲೇ ಗಾಜಾದಿಂದ ಸುರಕ್ಷಿತ ಪ್ರದೇಶಗಳಿಗೆ ತೆರಳಬೇಕು' ಎಂದೂ ಅವರು ಹೇಳಿದ್ದಾರೆ.

**'ಕಾಲಾವಕಾಶ ಅಗತ್ಯ'**

- ಗಾಜಾಪಟ್ಟಿ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಸ್ತಾಪಿಸಿರುವ 20 ಅಂಶಗಳ ಯೋಜನೆಯನ್ನು ಅಧ್ಯಯನ ನಡೆಸಲು ಇನ್ನಷ್ಟು ಕಾಲಾವಕಾಶ ಬೇಕು ಎಂದು ಹಮಾಸ್ ಸಂಘಟನೆ ಹೇಳಿದೆ. 'ಟ್ರಂಪ್ ಅವರ ಯೋಜನೆ ಬಗ್ಗೆ ಹಮಾಸ್ ಸಮಾಲೋಚನೆ ನಡೆಸುತ್ತಿದೆ. ಇದಕ್ಕಾಗಿ ಸ್ವಲ್ಪ ಕಾಲಾವಕಾಶ ಅಗತ್ಯವಿರುವ ಬಗ್ಗೆ ಸಂಧಾನಕಾರರಿಗೆ ಮಾಹಿತಿ ನೀಡಲಾಗಿದೆ' ಎಂದು ಹೆಸರು ಹೇಳಲು ಇಚ್ಛಿಸದ, ಹಮಾಸ್‌ನ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.


## ❖ ವೇಟ್‌ಲಿಫ್ಟಿಂಗ್: ಮೀರಾಗೆ ಬೆಳ್ಳಿ

ಸಂದರ್ಭ: ಅನುಭವಿ ಮೀರಾಬಾಯಿ ಚಾನು ಅವರು ವಿಶ್ವ ವೇಟ್‌ಲಿಫ್ಟಿಂಗ್ ಚಾಂಪಿಯನ್ ಷಿಪ್‌ನ ಮಹಿಳೆಯರ 48 ಕೆ.ಜಿ. ವಿಭಾಗ ದಲ್ಲಿ ಬೆಳ್ಳಿ ಪದಕ ಗೆದ್ದು ಕೊಂಡರು. ಇದು ವಿಶ್ವ ಚಾಂಪಿಯನ್‌ಷಿಪ್‌ಗಳಲ್ಲಿ ಅವರಿಗೆ ಮೂರನೇ ಪದಕ.



ಭಾರತದ ಮೀರಾಬಾಯಿ ಚಾನು 'ಎಕ್ಸ್' ಚಿತ್ರ

- ಈ ಹಿಂದೆ 2017 ಮತ್ತು 2022ರಲ್ಲೂ ಅವರು ರಜತ ಪದಕ ಜಯಿಸಿದ್ದರು. ಅವರು ಒಟ್ಟು 199 ಕೆ.ಜಿ. ಭಾರ ಎತ್ತಿದರು. 31 ವರ್ಷ ವಯಸ್ಸಿನ ಚಾನು ಸ್ನಾಚ್‌ನಲ್ಲಿ 84 ಕೆ.ಜಿ ಮತ್ತು ಕ್ಲೀನ್ ಮತ್ತು ಜರ್ಕ್‌ನಲ್ಲಿ 115 ಕೆ.ಜಿ ಎತ್ತಿದರು.
- ಸ್ನಾಚ್ ಸ್ಪರ್ಧೆಯ ವೇಳೆ ಅವರು ಪರದಾಡಿದರು. 87 ಕೆ.ಜಿ. ಎತ್ತಲು ಹೋಗಿ ಎರಡು ಸಲ ವಿಫಲರಾದರು. ಆದರೆ ಕ್ಲೀನ್ ಮತ್ತು ಜರ್ಕ್‌ನಲ್ಲಿ ಅವರು ಮೂರೂ ಯತ್ನಗಳಲ್ಲಿ (109, 112 ಮತ್ತು 115 ಕೆ.ಜಿ) ಸರಾಗವಾಗಿ ಭಾರ ಎತ್ತಿದರು. ಅವರು 115 ಕೆ.ಜಿ. ಭಾರವನ್ನು ಇದಕ್ಕಿಂತ ಮೊದಲು ಟೋಕಿಯೊ ಒಲಿಂಪಿಕ್ಸ್‌ನಲ್ಲಿ (2021) ಎತ್ತಿದ್ದರು.
- ಉತ್ತರ ಕೊರಿಯಾದ ರಿ ಸಾಂಗ್ ಗುಮ್ 213 ಕೆ.ಜಿ. ಭಾರ (91 ಕೆ.ಜಿ+ 122 ಕೆ.ಜಿ) ಎತ್ತಿ ಚಿನ್ನ ಗೆದ್ದರಲ್ಲದೇ, ಆ ಹಾದಿಯಲ್ಲಿ ಕ್ಲೀನ್ ಆ್ಯಂಡ್ ಜರ್ಕ್ ಮತ್ತು ಒಟ್ಟು ತೂಕ ವಿಭಾಗದಲ್ಲಿ ನೂತನ ವಿಶ್ವ ದಾಖಲೆಯನ್ನು ಸ್ಥಾಪಿಸಿದರು.
- ಥಾಯ್ಲೆಂಡ್‌ನ ಥಾನ್ಯಥಾನ್ ಸುಕ್ಚರೋನ್ ಒಟ್ಟು 198 ಕೆ.ಜಿ. ಭಾರ (88+110 ಕೆ.ಜಿ) ಎತ್ತಿ ಕಂಚಿನ ಪದಕ ತಮ್ಮದಾಗಿಸಿಕೊಂಡರು.

## ❖ ನಿಶಾದ್ ಕುಮಾರ್, ಸಿಮ್ರನ್‌ಗೆ ಚಿನ್ನ

ಸಂದರ್ಭ: ಭಾರತದ ನಿಶಾದ್ ಕುಮಾರ್ ಅವರು ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನ ಹೈಜಂಪ್ ಟಿ47 ಸ್ಪರ್ಧೆಯಲ್ಲಿ ನೂತನ ಏಷ್ಯನ್ ದಾಖಲೆಯೊಡನೆ ಚಿನ್ನ ಗೆದ್ದರು. ಈ ಕೂಟದ ಏಳನೇ ದಿನ ಸಿಮ್ರನ್ ಶರ್ಮಾ ಅವರು ವೈಯಕ್ತಿಕ ಶ್ರೇಷ್ಠ ಅವಧಿಯೊಡನೆ ಮಹಿಳೆಯರ 100 ಮೀ. (ಟಿ12) ಸ್ಪರ್ಧೆಯಲ್ಲಿ ಚಿನ್ನದ ಪದಕ ತಮ್ಮದಾಗಿಸಿಕೊಂಡರು.

- ಈ ಹಿಂದೆ ಹಲವು ಅಂತರ ರಾಷ್ಟ್ರೀಯ ಕೂಟಗಳಲ್ಲಿ ಎರಡನೇ ಸ್ಥಾನ ಗಳಿಸಿದ್ದ ನಿಶಾದ್ 2.14 ಮೀ. ಜಿಗಿಯುವ ಮೂಲಕ ಮೊದಲ ಬಾರಿ ವಿಶ್ವ ಕೂಟದಲ್ಲಿ ಚಿನ್ನ ಗೆದ್ದರು. ಅವರು ಟೋಕಿಯೊ ಮತ್ತು ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನಲ್ಲಿ ಮತ್ತು ಎರಡು ವಿಶ್ವ ಚಾಂಪಿಯನ್‌ಷಿಪ್‌ಗಳಲ್ಲಿ ಬೆಳ್ಳಿ ಗೆದ್ದಿದ್ದರು. ಮೂರು ಬಾರಿಯ ವಿಶ್ವ ಚಾಂಪಿಯನ್ ಅಮೆರಿಕದ ರೊಡೆರಿಕ್ ಟೌನ್ಸೆಂಡ್ (2.03 ಮೀ.) ಎರಡನೇ ಸ್ಥಾನಕ್ಕೆ ಸರಿದರು.
- ಇಲ್ಲಿ ಚಿನ್ನ ಖಚಿತವಾದ ನಂತರ ನಿಶಾದ್ ಅವರು ವಿಶ್ವ ದಾಖಲೆಗೆ ಯತ್ನಿಸಿದರೂ 2.18 ಮೀ. ಜಿಗಿಯಲು ಹೋಗಿ ವಿಫಲರಾದರು. ಮುಂಗೈ ಕಳೆದುಕೊಂಡ ಸ್ಪರ್ಧಿಗಳು ಈ ವಿಭಾಗದಲ್ಲಿ ಸ್ಪರ್ಧಿಸುತ್ತಾರೆ.
- ಸಿಮ್ರನ್ 100 ಮೀ. ಓಟವನ್ನು 11.95 ಸೆ.ಗಳಲ್ಲಿ ಕ್ರಮಿಸಿದರು. ಈ ವಿಭಾಗದ ಅಥ್ಲೀಟುಗಳು ಭಾಗಶಃ ದೃಷ್ಟಿದೋಷ ಹೊಂದಿರುತ್ತಾರೆ.
- ಭಾರತದ ಪ್ರೀತಿ ಪಾಲ್ 30.903 ಸೆ.ಗಳೊಂದಿಗೆ 200 ಮೀ. ಓಟದಲ್ಲಿ (ಟಿ35) ಕಂಚಿನ ಪದಕ ಗೆದ್ದುಕೊಂಡರು.

------------------------------------------------ಶುಭವಂದನೆಗಳು ------------------------------------------------

